09 July 2026 Thursday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜೀವನ ಎಂದರೆ ಹಣೆಬರಹವು ಬರೆದ ರೀತಿಯಲ್ಲಿ ಮುನ್ನಡೆಯುವ ಒಂದು ಯಾತ್ರೆ!

-ಸ್ನೇಹಾ ಆನಂದ್

info.varthaman@gmail.com



ಸಿಎಂ ಭೇಟಿಗೆ ಅವಕಾಶ ಬೇಕು: ಭೂಸ್ವಾಧೀನಕ್ಕೆ ವಿರೋಧಿ ರೈತರ ಒತ್ತಾಯ ಪುಟ ಸಂ. 2



ಸಿಎಂ ಭೇಟಿಗೆ ಶೀಘ್ರ ದಿನಾಂಕ, ಸಮಯ ನಿಗದಿ: ಶಾಸಕ ಬಾಲಕೃಷ್ಣ ಪುಟ ಸಂ. 2



ಮೈಸೂರಿನಲ್ಲ ಜು.11ರಂದು ಕಾಯಕ ಸಮಾಜಗಳ ಬೃಹತ್ ಸಮಾವೇಶ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 220 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಅಡ್ಡಮತದಾನ ಪಿತೂರಿಯ ಭಾಗ

## ನನ್ನನ್ನು ಅಪರಾಧಿ ಸ್ಥಾನದಲ್ಲಿ ನಿಲ್ಲಿಸಲು ಷಡ್ಯಂತ್ರ | ವಿಜಯೇಂದ್ರ ಆಕ್ರೋಶ

**ಬೆಂಗಳೂರು:** ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ನಡೆದ ಬಳಿಕ ನನ್ನನ್ನು ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ಷಡ್ಯಂತ್ರ ನಡೆಯಿತು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಕ್ರೋಶ ವ್ಯಕ್ತಪಡಿಸಿದರು.

ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣಾ ಪೂರ್ವಭಾವಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಈ ಹಿನ್ನೆಲೆಯಲ್ಲಿ ಮಾಧ್ಯಮ, ಸಾಮಾಜಿಕ ಜಾಲತಾಣಗಳಲ್ಲಿ ಬೇರೆ ಬೇರೆ ರೀತಿಯ ಚರ್ಚೆಗಳು ನಡೆದವು. ನನ್ನ ವಿರುದ್ಧ ಪಿತೂರಿಯ ಭಾಗವಾಗಿಯೇ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ನಡೆದಿದೆ ಎಂದು ಸ್ವಪಕ್ಷೀಯರ ವಿರುದ್ಧ ಕಿಡಿಕಾರಿದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ನಮಗೆ ಹಿನ್ನಡೆ ಆಯಿತು. ನಾವು 2 ಸ್ಥಾನಗಳನ್ನು ಮಾತ್ರ ಗೆದ್ದಿದ್ದೇವೆ. ಆದರೆ, ಕೆಲವು ಅಡ್ಡ ಮತದಾನ ಆಯಿತು ಎಂದಾಗ ನಡೆದ ಚರ್ಚೆಗಳು ಮನಸ್ಸಿಗೆ ಬೇಸರ ಮೂಡಿಸಿದವು. ಪಕ್ಷದ ರಾಜ್ಯ ಅಧ್ಯಕ್ಷನಾಗಿ ಆಂತರಿಕ ವಿಚಾರವನ್ನು ಹೇಳಲು ನನಗೇನೂ ಸಂಕೋಚ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಿಂದೆ ರಾಜ್ಯದಲ್ಲಿ ನಮ್ಮದೇ ಸರಕಾರ ಇತ್ತು. ಯಡಿಯೂರಪ್ಪ ಒಳ್ಳೆಯ ಆಡಳಿತ ನೀಡಿದರು. ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆದರು. ಕಾಂಗ್ರೆಸ್ 40 ಪರ್ಸೆಂಟ್ ಭ್ರಷ್ಟಾಚಾರದ ಆರೋಪ ಮಾಡಿದಾಗ ಅದನ್ನು ಸರಿಯಾಗಿ ನಾವು ಎದುರಿಸಲು ಸಾಧ್ಯವಾಗದೇ ನಮ್ಮ ಆಂತರಿಕ ಸಮಸ್ಯೆಯಿಂದ ಇಂದು ವಿಪಕ್ಷದಲ್ಲಿ ಕುಳಿತಿದ್ದೇವೆ ಎಂದು ಅವರು ಟೀಕಿಸಿದರು.

ವಿಧಾನಪರಿಷತ್‌ಗೆ ಯೋಗ್ಯ ವ್ಯಕ್ತಿಗಳು ಬರಬೇಕು. ಆದರೆ ಇತ್ತೀಚಿನ ದಿನಗಳಲ್ಲಿ ರಾಜಕೀಯ ಚಪಲ ತೀರಿಸಿಕೊಳ್ಳಲು ವಿಧಾನಪರಿಷತ್‌ಗೆ ಬರುತ್ತಿದ್ದಾರೆ. ರಾಜಕೀಯ ಚಟಕ್ಕಾಗಿ ಹಣದ ಅಹಂನಿಂದ, ಚುನಾವಣೆ ಗೆಲ್ತೀವಿ ಅನ್ನೋ ಭ್ರಮೆಯಿಂದ ಬರ್ತಿದ್ದಾರೆ. ವಿಧಾನಸೌಧ ಪ್ರಜಾಪ್ರಭುತ್ವದ ದೇಗುಲ, ಅಲ್ಲಿಗೆ ಯೋಗ್ಯ ವ್ಯಕ್ತಿಗಳು ಬರಬೇಕು ಎಂದು ಹೇಳಿದರು.





### ಬಿಜೆಪಿ ನಾಯಕರಿಂದಲೇ ಹೊಂದಾಣಿಕೆ

ಬಿ.ಎಸ್.ಯಡಿಯೂರಪ್ಪ-ಸಿದ್ದರಾಮಯ್ಯ ಮತ್ತು ಬಿ.ವೈ.ವಿಜಯೇಂದ್ರ- ಡಿ.ಕೆ.ಶಿವಕುಮಾರ್ ಆತ್ಮೀಯರು ಎಂಬ ಅಪಪ್ರಚಾರವನ್ನು ಬಿಜೆಪಿ ನಾಯಕರೇ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಪಕ್ಷ ಕಟ್ಟಿ ಅಧಿಕಾರಕ್ಕೆ ತಂದಿರುವ ಯಡಿಯೂರಪ್ಪ ಗೌರವಕ್ಕೆ ಚ್ಯುತಿಯುಂಟು ಮಾಡುವ ಹುನ್ನಾರ ನಡೆಯುತ್ತಿದೆ. ಇಂತಹ ಹೊಂದಾಣಿಕೆ ರಾಜಕಾರಣದ ಮಾತುಗಳನ್ನು ದೇವರು ಕೂಡ ಮೆಚ್ಚುವುದಿಲ್ಲ ಎಂದು ಬಿ.ವೈ ವಿಜಯೇಂದ್ರ ಅಸಮಾಧಾನ ಹೊರಹಾಕಿದರು.

ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ಬಳಿಕ ಯಡಿಯೂರಪ್ಪ ವಿರುದ್ಧ 35 ಪ್ರಕರಣ ದಾಖಲಾಗಿವೆ. ಕೆಲವು ಪ್ರಕರಣಗಳಿಗೆ ಸಂಬಂಧಿಸಿದ ವಿಚಾರಣೆ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುತ್ತಿದೆ ಎಂದು ಹೇಳಿದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಡಿ.ಕೆ.ಸುರೇಶ್ ವಿರುದ್ಧ ವೈದ್ಯ ಡಾ.ಸಿ.ಎನ್.ಮಂಜುನಾಥ್

### 3ನೇ ಮುಖ್ಯಮಂತ್ರಿ ಆದರೂ ಅಚ್ಚರಿ ಬೇಡ!

ಕಾಂಗ್ರೆಸ್‌ನಲ್ಲಿ ಆಂತರಿಕ ಕಚ್ಚಾಟ ತಾರಕಕ್ಕೆ ಏರಿದೆ. ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಮುಂದಾಗದೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಲಾಹರಣ ಮಾಡುತ್ತಿದ್ದಾರೆ. ಅವರ ಅಧಿಕಾರವಧಿ ಪೂರ್ಣಗೊಳ್ಳುವ ಮುನ್ನವೇ ಮೂರನೇ ಮುಖ್ಯಮಂತ್ರಿ ನಿಯೋಜನೆಯಾದರೂ ಅಚ್ಚರಿ ಇಲ್ಲ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಪ್ರಾಯಪಟ್ಟರು.

# ಕೊಡಗಿನಲ್ಲಿ ಮಳೆ ಅಬ್ಬರ

## ಭಾಗಮಂಡಲ ತ್ರಿವೇಣಿ ಸಂಗಮ ಜಲಾವೃತ

**ಮಡಿಕೇರಿ:** ಕೊಡಗು ಜಿಲ್ಲೆಯಲ್ಲಿ ಮಳೆಯ ಅಬ್ಬರ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದೆ. ಬ್ರಹ್ಮಗಿರಿ ತಪ್ಪಲಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವ ಪರಿಣಾಮ ಭಾಗಮಂಡಲ ತ್ರಿವೇಣಿ ಸಂಗಮದಲ್ಲಿ ನೀರಿನ ಪ್ರಮಾಣ ಹೆಚ್ಚಾಗುತ್ತಿದೆ. ಕಾವೇರಿ ನದಿ ಮೈದುಂಬಿ ಹರಿಯುತ್ತಿದೆ.



ನೀರಿನ ಹರಿವು ಹೆಚ್ಚಿದ ಪರಿಣಾಮ ತ್ರಿವೇಣಿ ಸಂಗಮದ ಉದ್ಯಾನವನ ಸಂಪೂರ್ಣ ಜಲಾವೃತಗೊಂಡಿದೆ. ಸುತ್ತಮುತ್ತಲಿನ ಕೃಷಿ ಗದ್ದೆಗಳಿಗೂ ನೀರು ನುಗ್ಗಿದೆ. ಕಾವೇರಿ ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಸೇರುತ್ತಿದೆ. ಇದೇ ರೀತಿ ಮಳೆ ಮುಂದುವರಿದರೆ ನಾಪೋಕ್ಲು ಅಯ್ಯಗೇರಿ ಸಣ್ಣ ಪುಲಿಕೋಟ್ಟು ರಸ್ತೆ ಮೇಲೆಯೂ ನೀರು ಹರಿಯುವ ಸಾಧ್ಯತೆ ಇದೆ. ಪುಟ 2ಕ್ಕೆ


### ರಾಜಾಸೀಟ್ ಪ್ರವೇಶ ಬಂದ್

**ಮಡಿಕೇರಿ:** ನಗರದ ಪ್ರಖ್ಯಾತ ಪ್ರವಾಸಿ ತಾಣ ರಾಜಾಸೀಟ್ ಉದ್ಯಾನಕ್ಕೆ ಜುಲೈ 12ರವರೆಗೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಿ ಜಿಲ್ಲಾಧಿಕಾರಿ ಎಸ್.ಜೆ. ಸೋಮಶೇಖರ್ ಪುಟ 2ಕ್ಕೆ

# ಕೆಆರ್‌ಎಸ್ ಒಳಹರಿವು ಹೆಚ್ಚಳ

**ಮೈಸೂರು:** ಕೊಡಗಿನ ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆ ಚುರುಕುಗೊಂಡ ಹಿನ್ನೆಲೆಯಲ್ಲಿ ಕೃಷ್ಣರಾಜಸಾಗರ ಜಲಾಶಯಕ್ಕೆ ನೀರಿನ ಒಳಹರಿವು ಗಣನೀಯವಾಗಿ ಹೆಚ್ಚಾಗಿದೆ.

ಜಲಾಶಯಕ್ಕೆ ಹರಿದು ಬರುತ್ತಿರುವ ನೀರಿನ ಪ್ರಮಾಣದಲ್ಲಿ ಬುಧವಾರ ದೊಡ್ಡ ಮಟ್ಟದ ಏರಿಕೆ ಕಂಡುಬಂದಿದೆ. ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಸತತ ಮಳೆಯಿಂದಾಗಿ ಬುಧವಾರ 9,584 ಕ್ಯೂಸೆಕ್ ಒಳಹರಿವು ದಾಖಲಾಗಿದೆ. ಮಂಗಳವಾರ ಬೆಳಗ್ಗೆ 5,734 ಕ್ಯೂಸೆಕ್ ಇದ್ದ ಒಳಹರಿವು ಹೆಚ್ಚಾಗಿದೆ.



124.80 ಅಡಿ ಗರಿಷ್ಠ ಮಟ್ಟದ ಜಲಾಶಯದಲ್ಲಿ ಸದ್ಯ 84.40 ಅಡಿ ನೀರು ಸಂಗ್ರಹವಾಗಿದೆ. ಜಲಾಶಯದ ಒಟ್ಟು ಸಾಮರ್ಥ್ಯ 49.452 ಟಿಎಂಸಿ. ಈಗ 12.485 ಟಿಎಂಸಿಯಷ್ಟು ನೀರು ಪುಟ 2ಕ್ಕೆ

# ಬಿಜೆಪಿಗರಿಗೆ 'ಡೊನೇಷನ್ ಫಸ್ಟ್'

### ಜನರಿಗೆ ಉತ್ತರಿಸುವ ಸಂದರ್ಭ ಮೋದಿ ಪ್ರವಾಸ: ಪ್ರಿಯಾಂಕ್ ಟೀಕೆ

**ಬೆಂಗಳೂರು:** ಬಿಜೆಪಿಯವರಿಗೆ ನೇಷನ್ ಫಸ್ಟ್ ಅಲ್ಲ. 'ಡೊನೇಷನ್ ಫಸ್ಟ್'. ಈ ಹಣ ಎಲ್ಲಿಗೆ ಹೋಗಿದೆ? ಶ್ರೀರಾಮ ಮಂದಿರ ಟ್ರಸ್ಟವರು ಏಕೆ ರಾಜೀನಾಮೆ ನೀಡಿದ್ದಾರೆ? ರಾಜೀನಾಮೆ ನೀಡಿದ್ದಾರೆ ಅಂದ ಮೇಲೆ ಈ ಪ್ರಶ್ನೆಗಳಿಗೆ ಅವರು ಉತ್ತರ ನೀಡಲೇಬೇಕಲ್ಲವೇ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದರು.



ಬೆಂಗಳೂರಿನಲ್ಲಿ ಬುಧವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರು ಮತ್ತೊಮ್ಮೆ ವಿದೇಶ ಪ್ರವಾಸಕ್ಕೆ ತೆರಳಿದ್ದಾರೆ. ಸಾರ್ವಜನಿಕರ ಮುಂದೆ ಉತ್ತರಿಸಬೇಕಾದ ಪ್ರಶ್ನೆಗಳು ಎದುರಾದಾಗಲೆಲ್ಲ ಅವರು ವಿದೇಶಕ್ಕೆ ಹೋಗುತ್ತಾರೆ ಎಂದು ಟೀಕಿಸಿದರು.

ಆರ್‌ಎಸ್‌ಎಸ್, ವಿಎಚ್‌ಪಿ ಮತ್ತು ಟ್ರಸ್ಟವರು ಮಾಡಿರುವ ಆರೋಪಿತ ದೇಣಿಗೆ ದುರ್ಬಳಕೆಗೆ ಕಾಂಗ್ರೆಸ್ ಪಕ್ಷ ಏಕೆ ಉತ್ತರ ನೀಡಬೇಕು? ಇದಕ್ಕೆ ಹೊಣೆ ಯಾರು ಎಂದು ಕೇಳಿದರು.

ರಾಮಮಂದಿರ ವಿಚಾರದಲ್ಲಿ ಸುಪ್ರೀಂ ಕೋರ್ಟ್ ತೀರ್ಪಿನ ಶ್ರೇಯಸ್ಸು ಬಿಜೆಪಿಯವರೇ ಪಡೆದಿದ್ದಾರೆ. ಶಿಲಾನ್ಯಾಸದ ಶ್ರೇಯಸ್ಸು ಅವರೇ ಪಡೆದಿದ್ದಾರೆ. ಪುಟ 2ಕ್ಕೆ

### ಸಿಎಂಗೆ ಮೂವರು ಮಾಧ್ಯಮ ಕಾರ್ಯದರ್ಶಿಗಳ ನೇಮಕ

**ಬೆಂಗಳೂರು:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮೂವರು ಮಾಧ್ಯಮ ಕಾರ್ಯದರ್ಶಿಗಳನ್ನು ನೇಮಕ ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಆದೇಶಿಸಿದೆ. ಮುಖ್ಯಮಂತ್ರಿ ಸಚಿವಾಲಯದ ಮಾಧ್ಯಮ ಕಾರ್ಯದರ್ಶಿ-1 ಪಿ.ತ್ಯಾಗರಾಜ್, ಆರ್.ಜಯಪ್ರಕಾಶ್ 2ನೇ ಕಾರ್ಯದರ್ಶಿ, ರಾಘವೇಂದ್ರ ಭಟ್ ಮೂರನೇ ಕಾರ್ಯದರ್ಶಿ ಆಗಿದ್ದಾರೆ.

# 10 ಅಧಿಕಾರಿಗಳ ಮೇಲೆ 'ಲೋಕಾ' ದಾಳಿ

**ಬೆಂಗಳೂರು:** ಆದಾಯಕ್ಕೂ ಮೀರಿ ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ 10 ಸರ್ಕಾರಿ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಪೊಲೀಸರು ಬುಧವಾರ ಏಕಕಾಲದಲ್ಲಿ ದಾಳಿ ನಡೆಸಿದೆ.

ಬೆಂಗಳೂರು ನಗರ, ರಾಮನಗರ, ರಾಯಚೂರು, ಚಿತ್ರದುರ್ಗ, ತುಮಕೂರು, ಶಿವಮೊಗ್ಗ ಮತ್ತು ಕಲಬುರಗಿಯ ಅಧಿಕಾರಿಗಳಿಗೆ ಸಂಬಂಧಿಸಿದ ಮನೆಗಳು ಮತ್ತು ಕಚೇರಿಗಳಲ್ಲಿ ಶೋಧ ಕಾರ್ಯ ನಡೆಸಲಾಗಿದೆ.



**ದಾಳಿಗೆ ಒಳಗಾದ ಅಧಿಕಾರಿಗಳು:** ರಾಯಚೂರಿನ ಕೃಷ್ಣ ಭಾಗ್ಯ ಜಲ ನಿಗಮ ಲಿಮಿಟೆಡ್‌ನ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್, ಚಿತ್ರದುರ್ಗದ ಕೃಷಿ ಇಂಜಿನಿಯರಿಂಗ್ (ತೋಟಗಾರಿಕೆ) ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಎಂ. ಶಂಕರ್, ಚಿತ್ರದುರ್ಗದ ಜಲಾನಯನ ಅಭಿವೃದ್ಧಿ ಇಲಾಖೆಯ ವಲಯ ಅರಣ್ಯಾಧಿಕಾರಿ ಬಿ.ಎಚ್ ದುಗ್ಗಪ್ಪ, ಬೆಂಗಳೂರಿನ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ನರೇಂದ್ರ ಕುಮಾರ್, ಇವರಲ್ಲದೆ ಕೆಆರ್‌ಐಡಿಎಲ್ ಬೆಂಗಳೂರು ವಲಯ ಕಚೇರಿಯ ಪುಟ 2ಕ್ಕೆ

### ಕೆಬಿಜೆಎನ್‌ಎಲ್ ಇಇ ಮನೆಯಲ್ಲಿ ಅಪಾರ ಆಸ್ತಿ ಪತ್ತೆ

**ರಾಯಚೂರು:** ಲೋಕಾಯುಕ್ತ ಅಧಿಕಾರಿಗಳು ಬುಧವಾರ ಮುಂಜಾನೆ ಕೃಷ್ಣಭಾಗ್ಯ ಜಲನಿಗಮ ನಿಯಮಿತದ (ಕೆಬಿಜೆಎನ್‌ಎಲ್) ಕಾರ್ಯನಿರ್ವಾಹಕ ಎಂಜಿನಿಯರ್ ಬಸನಗೌಡ ಅವರ ಕಚೇರಿ, ನಿವಾಸ, ಕಚೇರಿ ಫಾರ್ಮಹೌಸ್ ಸೇರಿ ಏಳು ಕಡೆ ದಾಳಿ ಮಾಡಿದ್ದಾರೆ.

ಪತ್ನಿ ಹೆಸರಲ್ಲಿ ಹೊಸ ಜಿಲ್ಲಾಧಿಕಾರಿ ಕಚೇರಿ ಮಾರ್ಗದಲ್ಲಿ ಪೆಟ್ರೋಲ್ ಬಂಕ್, ಬಾರ್ ಅಂಡ್ ರೆಸ್ಟೋರೆಂಟ್, ರಾಯಚೂರು ನಗರದಲ್ಲಿ ಮೂರು ಮನೆ, ದೇವದುರ್ಗ ತಾಲ್ಲೂಕಿನ ಜಾಲಹಳ್ಳಿ ಬಳಿ ಕೃಷ್ಣಾ ನದಿ ದಂಡೆಯಲ್ಲಿ 30 ಎಕರೆ ಜಮೀನು, ಫಾರ್ಮಹೌಸ್ ಇರುವುದು ದಾಳಿ ಸಂದರ್ಭ ಪತ್ತೆಯಾಗಿದೆ.

ರಾಯಚೂರಿನ ಎಚ್‌ಆರ್‌ಬಿ ಲೇಔಟ್‌ನಲ್ಲಿ ಮನೆ, ಯಕ್ಲಾಸಪುರದ ಸೆಲೆಬ್ರಿಟಿ ಗಾರ್ಡನ್‌ನಲ್ಲಿರುವ ಅವರ ಅಣ್ಣನ ಮನೆ, ಯಕ್ಲಾಸಪುರದಲ್ಲಿರುವ ಎರಡು ಮನೆ, ಬೈಪಾಸ್ ರಸ್ತೆಯಲ್ಲಿರುವ ನಾಯರಾ ಪೆಟ್ರೋಲ್ ಬಂಕ್, ಗೋದಾಮು, ತೋಟದ ಮನೆ ಪುಟ 2ಕ್ಕೆ

# ಶಿಕ್ಷಕನ ಹಲ್ಲೆ: ವಿದ್ಯಾರ್ಥಿ ಸಾವು

## ವಾರ್ಡನ್, ಶಿಕ್ಷಕನನ್ನು ಥಳಿಸಿದ ಪೋಷಕರು, ಉದ್ವಿಗ್ನ ಸ್ಥಿತಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಕಾಡಯರಪ್ಪನಹಳ್ಳಿ ಬಳಿಯ ಖಾಸಗಿ ವಸತಿ ಶಾಲೆಯಲ್ಲಿ 12 ವರ್ಷದ ವಿದ್ಯಾರ್ಥಿ ಅನುಮಾನಾಸ್ಪದ ಸಾವನ್ನಪ್ಪಿರುವ ಘಟನೆ ನಡೆದಿದೆ. ಮಗನ ಸಾವಿಗೆ ಶಾಲೆಯ ದೈಹಿಕ ಶಿಕ್ಷಕರ ಹಲ್ಲೆ ಹಾಗೂ ಅತಿಯಾದ ಒತ್ತಡವೇ ಕಾರಣ ಎಂದು ಕುಟುಂಬಸ್ಥರು ಗಂಭೀರ ಆರೋಪ ಮಾಡಿದ್ದಾರೆ.



ಯಲಹಂಕ ತಾಲೂಕಿನ ಸುಬೇದಾರ್ ಪಾಳ್ಯದ ಗುರುಕಿರಣ್ ಮೃತ ವಿದ್ಯಾರ್ಥಿ. ಆತ ಕಾಡಯರಪ್ಪನಹಳ್ಳಿ ಬಳಿಯ ಸ್ಟರ್ಲಿಂಗ್ ಇಂಗ್ಲಿಷ್ ವಸತಿ ಶಾಲೆಯಲ್ಲಿ 6ನೇ ತರಗತಿ ವ್ಯಾಸಂಗ ಮಾಡುತ್ತಿದ್ದ.

ಗುರುಕಿರಣ್‌ಗೆ ಆರೋಗ್ಯ ಸರಿಯಿಲ್ಲ ಎಂದು ಬುಧವಾರ ಬೆಳಗ್ಗೆ ಶಾಲೆಯ ಶಿಕ್ಷಕರು ಪೋಷಕರಿಗೆ ಕರೆ ಮಾಡಿ ಆಸ್ಪತ್ರೆಗೆ ಕರೆತಂದಿರುವುದಾಗಿ ತಿಳಿಸಿದ್ದಾರೆ. ಆದರೆ ಪೋಷಕರು ಆಸ್ಪತ್ರೆಗೆ ತಲುಪುವಷ್ಟರಲ್ಲಿ ಬಾಲಕ ಮೃತಪಟ್ಟಿದ್ದಾನೆ.

ಜಾಗಿಂಗ್ ವೇಳೆ ಶೌಚಾಲಯಕ್ಕೆ ಹೋಗಿ ಕೆಲ ನಿಮಿಷ ತಡವಾಗಿ ಬಂದಿದ್ದ ಗುರುಕಿರಣ್‌ಗೆ ದೈಹಿಕ ಶಿಕ್ಷಕ ನಾರಾಯಣ್ ಕತ್ತು ಬಗ್ಗಿಸಿ ಹೊಡೆದು ಹಲ್ಲೆ ನಡೆಸಿದ್ದಾನೆ. ಬಳಿಕ ಎರಡು ಸುತ್ತು ಓಡುವಂತೆ ಆದೇಶಿಸಿದ್ದಾನೆ. ಓಡಿ ಬಂದ ಕೆಲವೇ ಕ್ಷಣಗಳಲ್ಲಿ ಗುರುಕಿರಣ್ ಕುಸಿದು ಬಿದ್ದು ಮೃತಪಟ್ಟಿದ್ದಾನೆ ಎಂದು ಕುಟುಂಬಸ್ಥರ ತಿಳಿಸಿದ್ದಾರೆ.

ವಿದ್ಯಾರ್ಥಿ ಸಾವಿನ ಬಳಿಕ ಶಾಲೆಯ ಎದುರು ಜಮಾಯಿಸಿದ ಪೋಷಕರು ಹಾಗೂ ಸಂಬಂಧಿಕರು ಶಾಲೆಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು. ಆಕ್ರೋಶಗೊಂಡ ಸಂಬಂಧಿಕರು ವಾರ್ಡನ್‌ನನ್ನು ಎಳೆದಾಡಿ, ಥಳಿಸಿದ್ದಾರೆ. ದೈಹಿಕ ಶಿಕ್ಷಕ ನಾರಾಯಣ್‌ನನ್ನು ಪೊಲೀಸರ ವಶಕ್ಕೆ ಪಡೆಯಲು ಯತ್ನಿಸಿದಾಗ ಆತನ ಮೇಲೂ ಹಲ್ಲೆ ನಡೆಸಲಾಗಿದೆ. ಕೊನೆಗೆ ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿ ಪರಿಸ್ಥಿತಿ ಪುಟ 2ಕ್ಕೆ

# ಸಿಎಂ ಭದ್ರತೆಗೆ ತೆರಳಿದ್ದ ಕಾನ್ಸ್ಟೇಬಲ್ ಆತ್ಮಹತ್ಯೆ

**ಕಲಬುರಗಿ:** ನಗರ ಸಶಸ್ತ್ರ ಮೀಸಲು ಪಡೆ (ಸಿಎಆರ್) ಪೊಲೀಸ್ ಕಾನ್ಸ್‌ಟೇಬಲ್ ಪೊಲೀಸ್ ವಾಹನದೊಳಗೆ ತಮ್ಮ ಸರ್ವಿಸ್ ರೈಫಲ್‌ನಿಂದ ಎದೆಗೆ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.



ಮುಖ್ಯಮಂತ್ರಿ ನಗರ ಭೇಟಿ ಹಿನ್ನೆಲೆಯಲ್ಲಿ ಭದ್ರತಾ ಕರ್ತವ್ಯದಲ್ಲಿದ್ದ ಜೇವರ್ಗಿ ತಾಲೂಕಿನ ನರಿಬೋಳ ಗ್ರಾಮದ ನಿವಾಸಿಯಾದ ಕಾನ್‌ಸ್ಟೆಬಲ್ ಶಿವಕುಮಾರ್ ಆತ್ಮಹತ್ಯೆಗೆ ಶರಣಾಗಿದ್ದಾರೆ. ಮಂಗಳವಾರ ರಾತ್ರಿ ಘಟನೆ ನಡೆದಿದೆ.

ವೈಯಕ್ತಿಕ ಕಾರಣಗಳಿಂದ ಶಿವಕುಮಾರ್ ಮಾನಸಿಕ ಒತ್ತಡದಲ್ಲಿದ್ದರು. ಆದರೂ ಆತ್ಮಹತ್ಯೆಗೆ ನಿಖರವಾದ ಕಾರಣವೇನೆಂಬುದು ಇನ್ನೂ ತಿಳಿದುಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

# ಮೈದುಂಬಿ ಹರಿದ ಹೇಮಾವತಿ ನದಿ

**ಹಾಸನ:** ಜಿಲ್ಲೆಯಲ್ಲಿ ವರಣನ ಅಬ್ಬರ ಮುಂದುವರಿದಿದೆ. ಸಕಲೇಶಪುರ, ಆಲೂರು, ಬೇಲೂರು, ಅರಕಲಗೂಡು ಭಾಗಗಳಲ್ಲಿ ಬಾರಿ ಗಾಳಿಯೊಂದಿಗೆ ನಿರಂತರವಾಗಿ ಮಳೆಯಾಗುತ್ತಿದೆ. ಇತ್ತ ಪಕ್ಕದ ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ಭಾಗದಲ್ಲೂ ಧಾರಾಕಾರವಾಗಿ ಮಳೆ ಸುರಿಯುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯ ಜೀವನದಿ ಹೇಮಾವತಿ ಜಲಾಶಯದ ಒಳಹರಿವಿನಲ್ಲಿ ಬಾರಿ ಏರಿಕೆಯಾಗಿದೆ.

ಹಾಸನ ತಾಲೂಕಿನ, ಗೊರೂರಿನಲ್ಲಿರುವ ಹೇಮಾವತಿ ಜಲಾಶಯಕ್ಕೆ 16,593 ಕ್ಯೂಸೆಕ್ ಒಳಹರಿವಿದೆ. 300 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ. 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಹೇಮಾವತಿ ಜಲಾಶಯದಲ್ಲಿ ಸದ್ಯ 18.782 ಟಿಎಂಸಿ ನೀರು ಸಂಗ್ರಹವಾಗಿದೆ. ಜಲಾಶಯದ ಗರಿಷ್ಠ ನೀರಿನ ಮಟ್ಟ 2922.00 ಅಡಿಗಳಾಗಿದೆ. ಸದ್ಯ 2898.40 ಅಡಿಗಳಷ್ಟಿರುವ ನೀರಿದೆ.



# ಇರಾನ್ ಕದನ ವಿರಾಮ ಅಂತ್ಯ: ಟ್ರಂಪ್ ಮತ್ತೆ ಯೂಟರ್ನ್!

**ವಾಷಿಂಗ್ಟನ್:** ಇರಾನ್ ಜೊತೆಗಿನ ಕದನ ವಿರಾಮ ಅಂತ್ಯವಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.



ಹಾರ್ಮುಜ್ ಜಲಸಂಧಿಯಲ್ಲಿ ಮೂರು ವಾಣಿಜ್ಯ ಹಡಗುಗಳ ಮೇಲೆ ಅಮೆರಿಕ ಪಡೆ ಪ್ರತೀಕಾರದ ದಾಳಿ ನಡೆಸಿದ ನಂತರ ಟ್ರಂಪ್ ಪ್ರತಿಕ್ರಿಯಿಸಿದ್ದಾರೆ. ಟರ್ಕಿಯಲ್ಲಿ ನಡೆದ ನ್ಯಾಟೋ ಶೃಂಗಸಭೆಯಲ್ಲಿ ಈ ಬಗ್ಗೆ ಮಾತನಾಡಿದ ಟ್ರಂಪ್, ಸಂಘರ್ಷವನ್ನು ಕೊನೆಗೊಳಿಸಲು ಇರಾನ್ ಜೊತೆಗೆ ಸಹಿ ಹಾಕಲಾಗಿದ್ದ ಮಧ್ಯಂತರ ಶಾಂತಿ ಒಪ್ಪಂದ ಮುಗಿದಿದೆ ಎಂದು ಹೇಳಿದ್ದಾರೆ. 3 ವಾರಗಳ ಹಿಂದೆ ಇರಾನ್‌ನೊಂದಿಗೆ ಸಹಿ ಹಾಕಿದ ಒಪ್ಪಂದದ ಬಗ್ಗೆ ಕೇಳಿದಾಗ, ಶಾಂತಿ ಒಪ್ಪಂದ ಅನ್ನೋದು ಮುಗಿದ ಅಧ್ಯಾಯ. ನಾನಿನ್ನು ಇರಾನಿಯನ್ನರೊಂದಿಗೆ ಪುಟ 2ಕ್ಕೆ

# ಕೃಷಿಗೆ ಸದ್ಯಕ್ಕೆ ನೀರು ಬಿಡಲ್ಲ

## ಕೆಆರ್‌ಎಸ್ ನೀರು ಕುಡಿಯಲು ಮಾತ್ರ: ಜಿಲ್ಲಾಧಿಕಾರಿ ಆದೇಶ

**ಮಂಡ್ಯ:** ಕಾವೇರಿ ಕಣಿವೆಯ ಪ್ರಮುಖ ಜಲಾಶಯ ಕೃಷ್ಣರಾಜಸಾಗರ ಭಾಗದ ರೈತರಿಗೆ ಕೃಷಿಗೆ ಸದ್ಯಕ್ಕೆ ನೀರು ಸಿಗುವುದಿಲ್ಲ ಎಂದು ಮಂಡ್ಯ ಜಿಲ್ಲಾಡಳಿತ ರೈತರಿಗೆ ತಿಳಿಸಿದೆ.

ಜಿಲ್ಲೆಯ ನಾಲೆಗಳಿಗೆ ನೀರು ಹರಿಸುವಂತೆ ಮಂಡ್ಯ ರೈತರು ಪ್ರತಿಭಟನೆ ನಡೆಸಿದ್ದರು. ಇದು ತೀವ್ರ ಸ್ವರೂಪ ಪಡೆಯುತ್ತಿರುವ ನಡುವೆ ಜಿಲ್ಲಾಧಿಕಾರಿ ರೈತರಿಗೆ ಈ ಸೂಚನೆ ನೀಡಿದ್ದಾರೆ.



ಕೆಆರ್‌ಎಸ್ ಅಣೆಕಟ್ಟೆಯಲ್ಲಿ ನೀರಿನ ಸಂಗ್ರಹ ಕಡಿಮೆ ಇರುವುದರಿಂದ ಸದ್ಯಕ್ಕೆ ಕೃಷಿಗೆ ನೀರು ಹರಿಸುವುದು ಸಾಧ್ಯವಾಗುತ್ತಿಲ್ಲ. ಲಭ್ಯವಿರುವ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕೇ ಬಳಸಲಾಗುತ್ತಿದೆ. ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಆದೇಶಿಸಿದ್ದಾರೆ.

ಕೆಆರ್‌ಎಸ್ ನಿಂದ ಬೆಂಗಳೂರು, ಮೈಸೂರು, ಮಂಡ್ಯ, ರಾಮನಗರ ಸೇರಿದಂತೆ ಪ್ರಮುಖ ನಗರ, ಪಟ್ಟಣಗಳಿಗೆ ಕುಡಿಯುವ ನೀರು ಒದಗಿಸಲಾಗುತ್ತದೆ. ಮೈಸೂರು, ಮಂಡ್ಯ ಜಿಲ್ಲೆಯ ಸುಮಾರು 2 ಲಕ್ಷಕ್ಕೂ ಅಧಿಕ ಎಕರೆ ಭತ್ತ, ಕಬ್ಬು, ರಾಗಿ ಸಹಿತ ಪ್ರಮುಖ ಬೆಳೆಗಳಿಗೆ ಇದು ಜೀವನಾಡಿ. ಆದರೆ ಈ ಬಾರಿ ಮಳೆ ಕೈಕೊಟ್ಟಿರುವುದರಿಂದ ಕೃಷಿಗೆ ನೀರು ಸಿಗುವುದಿಲ್ಲ.

ಆಗಸ್ಟ್ ಮೊದಲನೇ ವಾರದವರೆಗೆ ಬಿತ್ತನೆಗೆ ಅವಕಾಶವಿರುವ ಹಿನ್ನೆಲೆಯಲ್ಲಿ, ಮಳೆ ಪರಿಸ್ಥಿತಿಯನ್ನು ಅವಲೋಕಿಸಿ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಪರ್ಯಾಯ ಬೆಳೆ ಯೋಜನೆ ಸಿದ್ಧಪಡಿಸಿ ರೈತರಿಗೆ ವ್ಯಾಪಕ ಜಾಗೃತಿ ಮೂಡಿಸಲಾಗುವುದು. ಅಗತ್ಯ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಸಮರ್ಪಕ ಲಭ್ಯತೆ ಖಚಿತಪಡಿಸಿಕೊಳ್ಳುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಅಗತ್ಯವಿರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ. ಜಿಲ್ಲೆಯಲ್ಲಿ ಸುಮಾರು 30 ಸಾವಿರ ಮೆಟ್ರಿಕ್ ಟನ್ ಪುಟ 2ಕ್ಕೆ

# ಮಂಡ್ಯ: ಮೈಸೂರು-ಬೆಂಗಳೂರು ಹೆದ್ದಾರಿಯಲ್ಲಿ ರೌಡಿಗಳ ಅಟ್ಟಹಾಸ

**ಮಂಡ್ಯ:** ಮೈಸೂರು-ಬೆಂಗಳೂರು ಹೆದ್ದಾರಿಯ ಮಂಡ್ಯ, ಮದ್ದೂರು ಸಮೀಪ ದಿನದಿಂದ ದಿನಕ್ಕೆ ರೌಡಿಗಳ ಅಟ್ಟಹಾಸ ಮಿತಿಮೀರಿದೆ. ಸಾರ್ವಜನಿಕರ ಸುರಕ್ಷತೆಗೆ ಧಕ್ಕೆಯುಂಟಾಗಿದೆ. ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿದ್ದರೂ ಪೊಲೀಸರು ನಿರ್ಲಕ್ಷ ವಹಿಸಿರುವ ಬಗ್ಗೆ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿದೆ.

ಕಳೆದ ಒಂದು ವಾರದಲ್ಲಿ ಹೆದ್ದಾರಿಯಲ್ಲಿ ನಡೆದಿರುವ ಮೂರನೇ ಪ್ರಕರಣ ಇದಾಗಿದೆ. ಮೆಡಿಸನ್ ಟ್ರಕ್ ಹಾಗೂ ಕಾರಿನ ಮೇಲಿನ ದಾಳಿಯ ಬೆನ್ನಲ್ಲೇ ಇದೀಗ ಕೆಎಸ್‌ಆರ್‌ಟಿಸಿಯ ಪ್ರತಿಷ್ಠಿತ ಫ್ಲೈಬಸ್ ಚಾಲಕ ಮತ್ತು ನಿರ್ವಾಹಕನ ಮೇಲೆ ಪುಂಡರು ಹಲ್ಲೆ ನಡೆಸಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.





ಎರಡು ದಿನಗಳ ಹಿಂದೆ ಮಧ್ಯರಾತ್ರಿ ಸುಮಾರು 2:30ರ ಅವಧಿಯಲ್ಲಿ ಈ ಘಟನೆ ಸಂಭವಿಸಿದೆ. ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ (ಕೆಂಪೇಗೌಡ ಏರ್‌ಪೋರ್ಟ್) ಮೈಸೂರಿಗೆ ತೆರಳುತ್ತಿದ್ದ ಫ್ಲೈ ಬಸ್, ಮಂಡ್ಯ ನಗರದಲ್ಲಿ ಪ್ರಯಾಣಿಕರನ್ನು ಇಳಿಸಿ ಹೆದ್ದಾರಿ ಸರ್ವಿಸ್ ರಸ್ತೆಯ ಮೂಲಕ ಚಲಿಸುತ್ತಿತ್ತು. ಈ ವೇಳೆ ಕುಡಿದ ನಶೆಯಲ್ಲಿದ್ದ ಸ್ಥಳೀಯ ಪುಂಡರು, ನಿಯಮ ಉಲ್ಲಂಘಿಸಿ ಒನ್-ವೇಯಲ್ಲಿ ವಾಹನ ಚಲಾಯಿಸಿಕೊಂಡು ಬಂದು ಫ್ಲೈ ಬಸ್ ಅಡ್ಡಗಟ್ಟಿದ್ದಾರೆ. ಈ ವೇಳೆ ಬಸ್ ಚಾಲಕ ವಿನೋದ್ ಹಾಗೂ ನಿರ್ವಾಹಕ ಈರಣ್ಣ ಪ್ರಶ್ನಿಸಿದಾಗ, ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸಿದ್ದಾರೆ.

ನಾನು ಮಂಡ್ಯ ಲೋಕಲ್ ಎಂದು ಕೂಗಾಡಿದ ಪುಂಡರು, ಪೊಲೀಸರಿಗೆ ದೂರು ನೀಡುತ್ತೇವೆ ಎಂದರೂ ಹೆದರದೆ ಪೊಲೀಸರಿಗೂ ಅಶ್ಲೀಲ ಪದಗಳಿಂದ ನಿಂದಿಸಿದ್ದಾರೆ. ಚಾಲಕ ಮತ್ತು ನಿರ್ವಾಹಕನ ಮೇಲೆ ತೀವ್ರ ಹಲ್ಲೆ ನಡೆಸಿ ವಿಕೃತಿ ಮೆರೆದಿದ್ದಾರೆ.

# ಮುಂಗಾರು ವೈಫಲ್ಯ: ಗುಂಡ್ಲುಪೇಟೆ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ

ಗುಂಡ್ಲುಪೇಟೆ: ಮುಂಗಾರು ಮಳೆ ಸಂಪೂರ್ಣವಾಗಿ ಕೈಕೊಟ್ಟಿರುವ ಪರಿಣಾಮ ಕೃಷಿ ಚಟುವಟಿಕೆಗಳು ತೀವ್ರವಾಗಿ ಕುಸಿದಿದ್ದು, ಸರ್ಕಾರ ತಕ್ಷಣವೇ ಗುಂಡ್ಲುಪೇಟೆ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಯುವ ಘಟಕದ ತಾಲೂಕು ಅಧ್ಯಕ್ಷ ಪ್ರವೀಣ್ ಅವರು ಒತ್ತಾಯಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ರೈತ ಸಂಘದ ತಾಲೂಕು ಯುವ ಘಟಕದ ವತಿಯಿಂದ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆಯಿಲ್ಲದೆ ತಾಲೂಕಿನಲ್ಲಿ ಅಂತರ್ಜಲ ಮಟ್ಟ ತೀವ್ರವಾಗಿ ಕುಸಿದಿದೆ. ಇದರಿಂದಾಗಿ ರೈತರು ಹಾಗೂ ರೈತ ಕುಟುಂಬದ ಯುವಕರು ಉದ್ಯೋಗ ಅರಸಿ ಅನಿವಾರ್ಯವಾಗಿ ಹೊರ ಜಿಲ್ಲೆಗಳಿಗೆ ಗುಳೆ ಹೋಗುವಂತಹ ಶೋಚನೀಯ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಮುಂಗಾರು ವೈಫಲ್ಯದಿಂದಾಗಿ ಮಳೆಯಾಶ್ರಿತ ಗುಂಡ್ಲುಪೇಟೆ ತಾಲೂಕಿನಲ್ಲಿ ಕೃಷಿ ಹಾಗೂ ನೀರಾವರಿ ಬೆಳೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿವೆ. ಆದ್ದರಿಂದ, ತಾಲೂಕಿನ ಜೀವನಾಡಿಯಾಗಿರುವ ಕೆರೆ-



ಕಟ್ಟೆಗಳನ್ನು ತುಂಬಿಸುವ ಕಾರ್ಯಕ್ಕೆ ತಾಲೂಕು ಆಡಳಿತ ಮೊದಲ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

### ಬೆಳೆ ನಷ್ಟ ಪರಿಹಾರ ಹಾಗೂ ಮೇವಿನ ವ್ಯವಸ್ಥೆಗೆ ಆಗ್ರಹ

ಸಂಘದ ಪ್ರಧಾನ ಕಾರ್ಯದರ್ಶಿ ರಘು ಅವರು ಮಾತನಾಡಿ, ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆ ಇಲ್ಲದ ಕಾರಣ ಬೆಳೆಗಳು ಸಂಪೂರ್ಣವಾಗಿ ನಾಶವಾಗಿವೆ. ಸರ್ಕಾರ ತಕ್ಷಣವೇ ಬೆಳೆ ನಷ್ಟ ಸಮೀಕ್ಷೆ ನಡೆಸಿ ರೈತರಿಗೆ ಸೂಕ್ತ ಬೆಳೆ ಪರಿಹಾರವನ್ನು ನೀಡಬೇಕು ಎಂದು ಆಗ್ರಹಿಸಿದರು. ಮಳೆಯ ಕೊರತೆಯಿಂದ ಅಂತರ್ಜಲ ಮಟ್ಟ ಕುಸಿತ ಕಂಡಿದ್ದು, ತಾಲೂಕು ಆಡಳಿತ ಈ ಬಗ್ಗೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕಿದೆ. ಜಾನುವಾರುಗಳಿಗೆ ಮೇವಿನ ತೀವ್ರ ಕೊರತೆಯಾಗಿರುವುದರಿಂದ, ಅಗತ್ಯ ಮೇವು ಸಂಗ್ರಹಿಸಿ ರೈತರಿಗೆ ವಿತರಿಸಬೇಕು. ಹಾಲು ಉತ್ಪಾದಕರಿಗೆ ಬಾಕಿ ಇರುವ ಮೂರು ತಿಂಗಳ ಪ್ರೋತ್ಸಾಹಧನವನ್ನು ತಕ್ಷಣ ಬಿಡುಗಡೆ ಮಾಡಬೇಕು ಹಾಗೂ ಕೃಷಿ ಚಟುವಟಿಕೆಗಳಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಕಲ್ಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ಇದೇ ವೇಳೆ, ಮರಗಿಡಗಳ ನಾಶದಿಂದ ಪರಿಸರದಲ್ಲಿ ವಿಕೋಪಗಳು ಹೆಚ್ಚಾಗುತ್ತಿರುವುದನ್ನು ತಡೆಯಲು ಪರಿಸರ ಸಂರಕ್ಷಣೆಗಾಗಿ ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ ಅವರು, ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ತಲೆದೂರಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

### ಬಿಸಿಯೂಟ ಸ್ಥಗಿತ ಹಾಗೂ ಗಣಿಗಾರಿಕೆಗೆ ವಿರೋಧ

ತಾಲೂಕಿನ ಮಲ್ಲಯ್ಯನಪುರ ಹಾಗೂ ಕೂತನೂರು ಗ್ರಾಮದ ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರಿನ ತೀವ್ರ ಕೊರತೆಯಿಂದಾಗಿ ಕಳೆದ ಒಂದು ವಾರದಿಂದ ಬಿಸಿಯೂಟ ತಯಾರಿಸದಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ. ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಧಿಕಾರಿಗಳು ಈ ಬಗ್ಗೆ ಕೂಡಲೇ ಎಚ್ಚೆತ್ತು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮುಖಂಡರು ಕಟ್ಟುನಿಟ್ಟಾಗಿ ಒತ್ತಾಯಿಸಿದರು. ಇದಲ್ಲದೆ, ತಾಲೂಕಿನ ಸುಮಾರು 720 ಎಕರೆ ಪ್ರದೇಶದಲ್ಲಿ ಥೋರಿಯಂ ನಿಕ್ಷೇಪ ಪತ್ತೆಯಾಗಿರುವ ಹಿನ್ನೆಲೆಯಲ್ಲಿ, ಪರಿಸರ ಮತ್ತು ಜನಜೀವನದ ಹಿತದೃಷ್ಟಿಯಿಂದ ಯಾವುದೇ ಕಾರಣಕ್ಕೂ ಅಲ್ಲಿ ಗಣಿಗಾರಿಕೆಗೆ ಅವಕಾಶ ನೀಡಬಾರದು ಎಂದು ಮುಖಂಡರು ಎಚ್ಚರಿಕೆ ನೀಡಿದರು.

### ಅಧಿಕಾರಿಗಳ ಭೇಟಿ ಮತ್ತು ಭರವಸೆ

ಶಾಲೆಗಳಲ್ಲಿ ಬಿಸಿಯೂಟ ಸ್ಥಗಿತಗೊಂಡಿರುವ ಘಟನೆಗೆ ಸಂಬಂಧಿಸಿದಂತೆ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಸತೀಶ್ ಕೆ.ಸಿ. ಅವರು ಪ್ರತಿಕ್ರಿಯಿಸಿದ್ದು, ಶಾಲೆಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ. ಮಕ್ಕಳ ಬಿಸಿಯೂಟಕ್ಕೆ ಹಾಗೂ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ. ಇಂತಹ ಘಟನೆಗಳು ತಾಲೂಕಿನಲ್ಲಿ ಮರುಕಳಿಸದಂತೆ ನೋಡಿಕೊಳ್ಳಲು ನಾವು ಬದ್ಧರಾಗಿದ್ದೇವೆ. ಈ ವಿಚಾರದಲ್ಲಿ ಪೋಷಕರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದು ಅವರು ಅಭಯ ನೀಡಿದ್ದಾರೆ.

ಮುಖಂಡರ ಉಪಸ್ಥಿತಿ

ಈ ಪತ್ರಿಕಾಗೋಷ್ಠಿಯಲ್ಲಿ ರೈತ ಸಂಘದ ಯುವ ಘಟಕದ ಉಪಾಧ್ಯಕ್ಷ ಪ್ರಸಾದ್, ಪ್ರಮುಖ ಪದಾಧಿಕಾರಿಗಳಾದ ರೋಹನ್ ಗೌಡ, ಗುರುಪ್ರಸಾದ್, ಮಹದೇವಸ್ವಾಮಿ, ಪ್ರಜ್ವಲ್, ಮನೋಜ್, ಸಂಜು, ನೂತನ್, ಸುರೇಶ್ ಸೇರಿದಂತೆ ಇತರರು ಹಾಜರಿದ್ದರು.

# ಸಿಎಂ ಭೇಟಿಗೆ ಅವಕಾಶ ಬೇಕು

## ಭೂಸ್ವಾಧೀನಕ್ಕೆ ವಿರೋಧಿ ರೈತರ ಒತ್ತಾಯ

ರಾಮನಗರ: ಬಿಡದಿ ಸಮಗ್ರ ಉಪನಗರ ಯೋಜನೆ ವಿಚಾರದಲ್ಲಿ ಭೂಸ್ವಾಧೀನಕ್ಕೆ ಶೇ 50 ರೈತರು ವಿರೋಧ ವ್ಯಕ್ತಪಡಿಸಿದರೆ ಸ್ವಾಧೀನ ಕೈಬಿಡುವುದಾಗಿ ಉಪಮುಖ್ಯಮಂತ್ರಿಗಳಾಗಿದ್ದ ವೇಳೆ ಡಿ.ಕೆ.ಶಿವಕುಮಾರ್ ಅವರು ಭರವಸೆ ನೀಡಿದ್ದರು. ಆದರೆ ಪ್ರಕ್ರಿಯೆ ಮುಂದುವರೆದಿದೆ. ಈಗ ಡಿ.ಕೆ.ಶಿವಕುಮಾರ್ ಅವರು ಮುಖ್ಯ ಮಂತ್ರಿಗಳಾಗಿದ್ದಾರೆ. ಅವರನ್ನು ಭೇಟಿ ಮಾಡಲು ಸಾಧ್ಯವಾಗುತ್ತಿಲ್ಲ. ಸಿಎಂ ಅವರನ್ನು ಭೇಟಿ ಮಾಡಿಸುವುದಾಗಿ ಶಾಸಕ ಎಚ್.ಸಿ. ಬಾಲಕೃಷ್ಣ ಭರವಸೆ ನೀಡಿ ದ್ದಾರೆ ಎಂದು ಭೂಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸುತ್ತಿರು ವವರ ಪರವಾಗಿ ರೈತ ಮುಖಂಡ ಪ್ರಕಾಶ್ ಹೇಳಿದರು.

ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿದರು. ಭೂಸ್ವಾಧೀನವನ್ನು ವಿರೋಧಿಸುತ್ತಿರುವ ರೈತರ ಸಭೆಯನ್ನು ಶಾಸಕರು ಆಯೋಜಿಸಿದ್ದರು. ಸಿಎಂ ಅವರನ್ನು ಭೇಟಿ ಮಾಡಿಸುವಂತೆ ಸಭೆ ಯಲ್ಲಿ ಮನವಿ ಮಾಡಿದ್ದೇವೆ. ಸಿಎಂ ಅವರ ಬಳಿ ತಾವು ಮಾತನಾಡಿ, ಸಮಯ, ದಿನ ಶೀಘ್ರ ನಿಗಧಿ ಪಡಿಸಿ ತಿಳಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ಅವರು ತಿಳಿಸಿದರು.

### ಪರಿಹಾರ, ಜೆಸಿಎಂ ಪ್ರಕ್ರಿಯೆ ನಿಲ್ಲಲಿ

ಸಿಎಂ ಅವರೊಂದಿಗೆ ಭೇಟಿಯಾಗುವವರೆಗೂ ಭೂಸ್ವಾಧೀನ ಪ್ರಕ್ರಿಯೆಯ ಭಾಗವಾಗಿರುವ ಪರಿಹಾರ ವಿತರಣೆ, ಜೆಎಂಸಿ ಮಾಡುವುದು ಇತ್ಯಾದಿ ಪ್ರಕ್ರಿಯೆಗಳು ಸ್ಥಗಿತಗೊಳ್ಳಬೇಕು ಎಂದು ಸಭೆಯಲ್ಲಿ ಆಗ್ರಹಿಸಲಾಗಿದೆ. ಜೆಎಂಸಿ ಮಾಡುವ ಸಂದರ್ಭದಲ್ಲಿ ಒಬ್ಬರು ತಮ್ಮ ಭೂಮಿಯನ್ನು ಸ್ವಾಧೀನಕ್ಕೆ ಒಪ್ಪಬಹುದು, ಉಳಿದವರು ಒಪ್ಪದೇ ಇರಬಹುದು, ಹೀಗಾದಾಗ ಎಲ್ಲರಿಗೂ ಸಮಸ್ಯೆಯಾಗುತ್ತದೆ ಹೀಗಾಗಿ ಪ್ರಕ್ರಿಯೆಗಳು ಸ್ಥಗಿತವಾಗಲಿ ಎಂದು ತಮ್ಮ ನಿಲುವನ್ನು ಸಮರ್ಥಿಸಿಕೊಂಡರು. ಪ್ರಕ್ರಿಯೆಗಳು ಸ್ಥಗಿತಗೊಳಿಸುವ ವಿಚಾರದಲ್ಲಿಯೂ ಶಾಸಕರು ಉನ್ನತ ಮಟ್ಟದ ಅಧಿ ಕಾರಿಗಳೊಂದಿಗೆ ಚರ್ಚಿಸುವುದಾಗಿ ತಿಳಿಸಿದ್ದಾರೆ. ಹಾಗೊಮ್ಮೆ ನಮ್ಮ ಮನವಿ, ಬೇಡಿಕೆ ಗಳನ್ನು ನಿರ್ಲಕ್ಷಿಸಿದರೆ ಹೋರಾಟ ಉಗ್ರ ರೂಪ ಪಡೆಯಬಹುದು ಎಂದರು.

### ನ್ಯಾಯಾಲಯ ಪೀಠ ಸ್ಥಾಪನೆ!

ಭೂಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸಿ 480 ದಿನಗಳಿಂದ ಬೈರಮಂಗಲದಲ್ಲಿ ನಿರಂತರ ಪ್ರತಿಭಟನೆ ನಡೆಯುತ್ತಿದೆ. ಇದೇ ಶನಿವಾರ ನಿವೃತ್ತ ನ್ಯಾಯಾಧೀಶರುಗಳಾದ ಸಂತೋಷ್ ಹೆಗ್ಡೆ, ಗೋಪಾಲ ಗೌಡ, ಸುದರ್ಶನ ರೆಡ್ಡಯವರು ಪ್ರತಿಭಟನೆಯ ಸ್ಥಳಕ್ಕೆ ಆಗಮಿಸುತ್ತಿದ್ದಾರೆ. ಅಲ್ಲಿ ನ್ಯಾಯಪೀಠವನ್ನು ಸ್ಥಾಪಿಸುತ್ತೇವೆ. ಭೂಮಾಲೀಕರ ಅಹವಾಲನ್ನು ನ್ಯಾಯಾಧೀಶರುಗಳು ಆಲಿಸಿ ತಮ್ಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತಾರೆ ಎಂದರು.



### ವಿವಿಧ ಜಿಲ್ಲೆಗಳ ರೈತರು ಬೆಂಬಲಕ್ಕೆ

ಸಂಯುಕ್ತ ಹೋರಾಟ ಸಂಘ, ಪ್ರಾಂತ ರೈತರ ಸಂಘದ ಸೇರಿದಂತೆ ಸುಮಾರು 15 ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ರೈತರು ಶನಿವಾರ ಬೈರಮಂಗಲಕ್ಕೆ ಬರುತ್ತಿದ್ದು, ಭೂಸ್ವಾಧೀನದ ವಿರುದ್ದದ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಲಿದ್ದಾರೆ ಎಂದು ಪ್ರಕಾಶ್ ಅವರು ಮಾಹಿತಿ ಕೊಟ್ಟರು.

### ಭೂಸ್ವಾಧೀನ ಕೈಬಿಡಿ ಎಂಬುದೊಂದೇ ನಮ್ಮ ಬೇಡಿಕೆ

ನಮ್ಮ ಬೇಡಿಕೆ ಒಂದೇ ಭೂಸ್ವಾಧೀನ ಕೈ ಬಿಡಿ ಎನ್ನುವುದೊಂದೆ. ಇಂದು ಶಾಸಕ ಬಾಲಕೃಷ್ಣ ಅವರು ನಡೆಸಿದ ಸಭೆಯಲ್ಲೂ ಇದನ್ನೇ ಹೇಳಿದ್ದೇವೆ. ಪರಿಹಾರಕ್ಕೆ ನಾವು ಬಂದಿಲ್ಲ ಎಂದು ಸ್ಪಷ್ಟ ಪಡಿಸಿದರು. ಸಣ್ಣ ವಿಸ್ತಾರದ ಭೂ ಮಾಲೀಕರು ಹೈನುಗಾರಿಕೆ, ರೇಷ್ಮೆ ಮುಂತಾದವುಗಳಿಂದ ಬದುಕುಕಟ್ಟಿಕೊಂಡಿದ್ದೇವೆ. ಭೂಮಿಯನ್ನು ಸ್ವಾಧೀನ ಪಡಿಸಿಕೊಂಡು ಬದುಕು ಕಿತ್ತುಕೊಳ್ಳಬೇಡಿ ಎಂದು ನಿರಂತರ ಮನವಿ ಮಾಡುತ್ತಿದ್ದೇವೆ ಎಂದರು. ಬೇರೆಯವರಿಗೆ ಸೇರಿದ ಜಮೀನಿನಲ್ಲಿ ಪಾಲುಗಾರಿಕೆಯಲ್ಲಿ ಕೃಷಿ ಮಾಡುತ್ತಿರುವ 500 ಕುಟುಂಬಗಳಿವೆ. ಸ್ವಾಧೀನವಾದರೆ ಈ ಕುಟುಂಬಗಳ ಬುದಕು ಬೀದಿಗೆ ಬರುತ್ತೆ. ಈ ಭಾಗದಲ್ಲಿ ಸಾಕಷ್ಟು ಮಂದಿ ವ್ಯವಸಾಯದ ಕೂಲಿ ಕಾರ್ಮಿಕರು ಇದ್ದಾರೆ. ಅವರಿಗೆ ಯಾವ ವಿದ್ಯೆಯೂ ಇಲ್ಲ. ಅವರಿಗೆ ವ್ಯವಸಾಯವೊಂದೆ ಗೊತ್ತಿದೆ. ಸ್ವಾಧೀನವಾದರೆ ಅವರಿಗೆ ಉದ್ಯೋಗವೂ ಸೃಷ್ಠಿಯಗೊಲ್ಲ. ಶಾಸಕರು ಈ ಸಮಸ್ಯೆಗಳನ್ನೆಲ್ಲ ಅರ್ಥ ಮಾಡಿಕೊಳ್ಳಬೇಕು ಎಂದರು.

### ರೆಡ್‌ಜೋನ್ ನಮಗೆ ಬಾಧಕವಲ್ಲ

ಭೂಸ್ವಾಧೀನಕ್ಕೆ ಪರ ಇರುವ ರೈತರು ಅಭಿವೃದ್ಧಿ ಪರ ಇದ್ದಾರೆ. ಅವರ ಬಗ್ಗೆಯೂ ನಮಗೆ ಕಾಳಜಿ ಇದೆ. ಅಭಿವೃದ್ಧಿಗೆ ರೆಡ್ ಜೋನ್ ಸಮಸ್ಯೆಯಾಗಿದೆ ಎಂಬುದು ಅವರ ನಿಲುವು. ಹೀಗಾಗಿ ರೆಡ್ ಜೋನ್ ತೆರವು ಗೊಳಿಸಲಿ. ಈ ವಿಚಾರದಲ್ಲಿ ಸ್ವಾಧೀನದ ಪರ ಇರುವ ರೈತರು ಹೋರಾಟ ನಡೆಸಿದರೆ, ನಾವು ಸಹ ಬೆಂಬಲ ಕೊಡ್ತೇವೆ. ಅಭಿವೃದ್ಧಿ ಬಯಸುವುದು ತಪ್ಪಲ್ಲ. ಹೀಗಾಗಿ ರೆಡ್ ಜೋನ್ ತೆರವುಗೊಳಿಸುವುದರ ಮೂಲಕ ಅಭಿವೃದ್ಧಿಗೆ ಅವಕಾಶವಾಗಲಿ ಎಂದು ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಯೊಂದಕ್ಕೆ ಪ್ರಕಾಶ್ ಪ್ರತಿಕ್ರಿಯಿಸಿದರು. ವ್ಯವಸಾಯ ಮಾಡುವವರಿಗೆ ರೆಡ್ ಜೋನ್ ಬಾಧಕವಲ್ಲ. ರೇಷ್ಮೆ, ಹೈನುಗಾರಿಕೆ, ಕೃಷಿ ಮಾಡುವವರಿಗೆ ಯಾವ ಜೋನ್ ಆದರೂ ಸರಿಯೇ. ನಮಗೆ ಅದು ಅನ್ವಯಿಸೋಲ್ಲ.

### ಶಾಂತಿಯುತ ಹೋರಾಟ ಕ್ರಾಂತಿಕಾರಿಯಾಗುತ್ತೆ ಎಚ್ಚರ

ಸಿಎಂ ಅವರೊಂದಿಗೆ ಭೇಟಿ ವಿಚಾರದಲ್ಲಿ ಶಾಸಕು ಸಿಎಂ ಅವರ ಬಳಿ ಚರ್ಚಿಸುತ್ತೇನೆ ಎಂದು ತಿಳಿಸಿದ್ದಾರೆ. ಭೂಸ್ವಾಧಿನ ಕೈ ಬಿಡಿ ಎಂಬುದೊಂದೆ ನಮ್ಮ ಬೇಡಿಕೆ. ಕೃಷಿ ಮಾಡಿಕೊಂಡು ಬದುಕಲು ಬಿಡಿ ಅಂತ ಕೇಳ್ತಿದ್ದೇವೆ. ವಿಚಾರದಲ್ಲಿ ನಮ್ಮದು ಶಾಂತಿಯುತ ಹೊರಾಟ, ನಮ್ಮನ್ನು ನಿರ್ಲಕ್ಷಿಸದರೆ, ಶಾಂತಿಯುತ ಹೋರಾಟ ಕ್ರಾಂತಿಕಾರಕವಾಗಿ ತಿರುಗಬಹುದು ಎಂದು ಅವರು ಮತ್ತೊಮ್ಮೆ ಎಚ್ಚರಿಸಿದರು. ಈ ವೇಳೆ ರೈತ ಪ್ರಮುಖರಾದ ರಾಮಯ್ಯ, ಅಶ್ವಥ್, ಹನುಮಂತು, ಸುಮ, ಗಿರೀಶ್, ಶಿವಣ್ಣ, ಮಂಜುನಾಥ್ ಮುಂತಾದವರು ಹಾಜರಿದ್ದರು.

# ಶೀಘ್ರ ದಿನಾಂಕ, ಸಮಯ ನಿಗಧಿ

## ಸಿಎಂ ಭೇಟಿಗೆ ಅವಕಾಶ ಕೇಳಿದ್ದಾರೆ: ಶಾಸಕ ಬಾಲಕೃಷ್ಣ

ರಾಮನಗರ: ಬಿಡದಿ ಸಮಗ್ರ ನಗರ ಉಪನಗರ ನಿರ್ಮಾಣಕ್ಕೆ ಭೂಸ್ವಾಧೀನ ವಿರೋಧಿಸುತ್ತಿರುವ ರೈತರು ಮುಖ್ಯಮಂತ್ರಿಗಳ ಭೇಟಿಗೆ ಅವಕಾಶ ಕೇಳಿದ್ದಾರೆ. ಮುಖ್ಯಮಂತ್ರಿಗಳ ಗಮನ ಸೆಳೆದು ಶೀಘ್ರವಾಗಿ ದಿನಾಂಕ, ಸಮಯ ನಿಗಧಿ ಪಡಿಸುವುದಾಗಿ ಭರವಸೆ ನೀಡಿದ್ದೇನೆ ಎಂದು ಮಾಗಡಿ ಕ್ಷೇತ್ರದ ಶಾಸಕ ಎಚ್.ಸಿ.ಬಾಲಕೃಷ್ಣ ತಿಳಿಸಿದರು.

ನಗರದ ಜಿಬಿಡಿಎ ಕಚೇರಿಯಲ್ಲಿ ಆಯೋಜನೆಯಾಗಿದ್ದ ಬಿಡದಿ ಸಮಗ್ರ ಉಪನಗರ ಯೋಜನೆ ವ್ಯಾಪ್ತಿಯ ಭೂ ಮಾಲೀಕರು, ರೈತರು ಮತ್ತು ರೈತ ಮುಖಂಡರ ಸಭೆ ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಸಭೆಯಲ್ಲಿ ಪಾಲ್ಗೊಂಡಿದ್ದ ರೈತರು ಭೂಸ್ವಾಧೀನಕ್ಕೆ ನಮ್ಮ ಒಪ್ಪಿಗೆ ಇಲ್ಲ. ಮುಖ್ಯಮಂತ್ರಿಗಳ ಜೊತೆ ಚರ್ಚೆಗೆ ಅವಕಾಶ ಕೊಡಿಸಿ ಎಂದು ಮನವಿ ಮಾಡಿದ್ದಾರೆ. ಅದರಂತೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲು ದಿನಾಂಕ ನಿಗದಿ ಪಡಿಸಲಾಗುವುದು ಎಂದರು.

### ಸಿಎಂ ಅವರ ಸೂಚನೆ ಮೇರೆಗೆ ಸಭೆಸ

ಬಿಡದಿ ಸಮಗ್ರ ಉಪನಗರ ಯೋಜನೆ ವಿರೋಧಿಸಿ ಹೋರಾಟ ಮಾಡುತ್ತಿರುವ ರೈತರ ಮನವೊಲಿಸುವ ಪ್ರಯತ್ನ ಮಾಡುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದರು. ಕೆಲವು ರೈತರು ಪುನರ್ ವಸತಿ ವಿಚಾರ ಮರು ಪರಿಶೀಲನೆ ಮಾಡಿದರೆ ರೈತರು ತಮ್ಮ ಒಪ್ಪಿಗೆ ಸೂಚಿಸಬಹುದು ಎಂಬ ಅನಿಸಿಕೆ ಅವರದ್ದು. ಹೀಗಾಗಿ ರೈತರ ಸಭೆ ಕರೆದು ಚರ್ಚೆ ನಡೆಸಿದ್ದೇನೆ ಎಂದರು.

ಕೆಲ ರೈತರು ಯೋಜನೆ ಕೈಬಿಡುವಂತೆ ಹಾಗೂ ಇನ್ನೂ ಕೆಲ ರೈತರು ಯೋಜನೆ ಪರವಾಗಿದ್ದಾರೆ. ಯೋಜನೆ ಪರವಾಗಿರುವ ರೈತರು ನೋಟಿಫಿಕೇಷನ್ ಆಗಿದ್ದರೂ ಜೆಎಂಸಿ ಮಾಡದೆ ತೊಂದರೆ ಕೊಡುತ್ತಿದ್ದು, ತಮಗೂ ಅಹವಾಲು ಮುಖ್ಯಮಂತ್ರಿಗಳ ಬಳಿ ಹೇಳಿಕೊಳ್ಳಲು ಅವಕಾಶ ಕೊಡುವಂತೆ ಮನವಿ ಮಾಡುತ್ತಿದ್ದಾರೆ. ಅವರೆಲ್ಲರ ಸಭೆ ಕರೆದು ಚರ್ಚೆ ನಡೆಸುವುದಾಗಿ ತಿಳಿಸಿದರು.

### ಪ್ರಕ್ರಿಯೆ ನಿಲ್ಲಿಸಲು ಸಾಧ್ಯವಿಲ್ಲ

ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸುವವರೆಗೂ ಭೂ ಪರಿಹಾರ ವಿತರಣೆ, ಜೆಎಂಸಿ ಮುಂತಾದ ಪ್ರಕ್ರಿಯೆ ಸ್ಥಗಿತಗೊಳಿಸುವಂತೆ ರೈತರು ಒತ್ತಾಯಿಸಿದ್ದಾರೆ ಎಂದು ಮಾಧ್ಯಮ ಪ್ರತಿನಿಧಿಗಳು ಅವರ ಗಮನ ಸೆಳೆದಾಗ ಪ್ರತಿಕ್ರಿಯಿಸಿದ ಅವರು ಆ ರೀತಿ ಪ್ರಕ್ರಿಯೆ ನಿಲ್ಲಿಸಲು ಸಾಧ್ಯವಿಲ್ಲ. ಫೈನಲ್ ನೋಟಿಫಿಕೇಶನ್ ಹೊರಡಿಸಿದ ಮೇಲೆ ಡಿ ನೋಟಿಫೈ ಮಾಡಲು ಸಾಧ್ಯವಿಲ್ಲ. ನೋಟಿಫಿಕೇಶನ್ ಹೊರಡಿಸಿರುವ ರೈತರಿಗೆ ಭೂ ಪರಿಹಾರ ನೀಡದಿದ್ದರೆ ಆ ರೈತರು ಅಸಮಾಧಾನ ವ್ಯಕ್ತಪಡಿಸುತ್ತಾರೆ. ಯಾವ ರೈತರು ಪರಿಹಾರ ಕೊಡುವಂತೆ ಕೇಳಿ ಒಪ್ಪಿಗೆ ಪತ್ರ ಕೊಡುತ್ತಾರೊ ಆ ರೈತರ ಭೂಮಿಯ ಜೆಎಂಸಿ ಮಾಡುತ್ತೇವೆ. ಬಲವಂತವಾಗಿ ಜೆಎಂಸಿ ಮಾಡುವುದಿಲ್ಲ ಎಂದು ಉತ್ತರಿಸಿದರು.

### ರೂ 110 ಕೋಟಿ ಪರಿಹಾರ ವಿತರಣೆ

ಅಂತಿಮ ಅಧಿಸೂಚನೆ ಹೊರಡಿಸಿರುವ ಮೂರು ಗ್ರಾಮಗಳಲ್ಲಿ ಶೇಕಡ 75ರಷ್ಟು ರೈತರು 110 ಕೋಟಿ ಭೂ ಪರಿಹಾರ ಪಡೆದಿದ್ದಾರೆ. ಭೂ ಮಾಲೀಕರು ಕೆಲ ದಾಖಲಾತಿ ಒದಗಿಸದ ಕಾರಣ ಪರಿಹಾರ ವಿತರಣೆ ತಡವಾಗಿದೆ. ಶೀಘ್ರದಲ್ಲಿಯೇ ಉಳಿದ 6 ಕಂದಾಯ ಗ್ರಾಮಗಳ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು ಎಂದು ಹೇಳಿದರು.

### ಎಚ್.ಡಿ.ಕೆ ಎಂಟ್ರಿ ನಂತರ ರಾಜಕೀಯ ತಿರುವು

ಕೇಂದ್ರ ಸಚಿವ ಕುಮಾರಸ್ವಾಮಿರವರು ಯೋಜನೆ ವಿಚಾರದಲ್ಲಿ ಎಂಟ್ರಿ ಕೊಟ್ಟ ನಂತರ ರೈತರ ಹೋರಾಟ ರಾಜಕೀಯ ತಿರುವು ಪಡೆದುಕೊಂಡಿದೆ. ಮುಖ್ಯಮಂತ್ರಿಗಳು ರೈತರೊಂದಿಗೆ ಮಾತನಾಡುವಂತೆ ನನಗೆ ಜವಾಬ್ದಾರಿ ಕೊಟ್ಟಿದ್ದರು. ಈಗ ರೈತರ ಮನವೊಲಿಸುವ ಕೆಲಸ ಮಾಡುತ್ತಿದ್ದೇನೆ. ಪ್ರತಿಭಟನೆ ಮಾಡುತ್ತಿರುವ ಶೇಕಡ 40ರಷ್ಟು ಜನರನ್ನು ಮನವೊಲಿಸಿದ್ದೇವೆ. ನಿಧಾನವಾಗಿ ರೈತರು ಯೋಜನೆ ಒಪ್ಪಿಕೊಂಡು ಭೂಮಿ ಕೊಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



**ಎಚ್‌ಡಿಕೆ ಕೇತಗಾನಹಳ್ಳಿ ಜಮೀನು ರೆಡ್‌ಜೋನ್ ಮಾಡಿದರೆ ಒಪ್ಪಿಕೊಳ್ತಾರಾ**

ಸಮಗ್ರ ನಗರ ಯೋಜನೆ ರೂಪಿಸಿದ್ದು ಎಚ್.ಡಿ.ಕುಮಾರಸ್ವಾಮಿ, ರೆಡ್ ಜೋನ್ ಆಗಿದ್ದ ಅವರ ಅಧಿಕಾರವಧಿಯಲ್ಲೇ. ಈಗ ಕುಮಾರಸ್ವಾಮಿರವರು ರೆಡ್ ಜೋನ್ ನಿಂದ ಏನು ತೊಂದರೆ ಇಲ್ಲವೆಂದು ಹೇಳುತ್ತಾರೆ. ಹಾಗಾದರೆ ಅವರ ಕೇತಗಾನಹಳ್ಳಿ ಜಮೀನನ್ನು ರೆಡ್ ಜೋನ್ ಮಾಡಿದರೆ ಒಪ್ಪಿಕೊಳ್ಳುತ್ತಾರಾ ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಪ್ರಶ್ನಿಸಿದರು. ಈ ಯೋಜನೆ ಕೈ ಬಿಡುವಂತೆ ನನಗೆ ಯಾವ ಕಾಂಗ್ರೆಸ್ ನಾಯಕರು ಹೇಳಲಿಲ್ಲ ಎಂದು ಕುಮಾರಸ್ವಾಮಿ ಹೇಳಿದ್ದಾರಲ್ಲ ಎಂಬ ಪ್ರಶ್ನೆಗೆ ಚಾಮುಂಡೇಶ್ವರಿ ದೇವಾಲಯದಲ್ಲಿ ಪ್ರಮಾಣ ಮಾಡಿ ಹೇಳಲಿ. ಆ ಮಾತು ಹೇಳಿದರೆ ನಾನೇ ರಾಜಕೀಯ ಬಿಡುತ್ತೇನೆ ಎಂದು ಸವಾಲು ಹಾಕಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರು ಟೌನ್ ಶಿಪ್ ಯೋಜನೆ ಮಾಡಿದ ಕುಮಾರಸ್ವಾಮಿ ಅವರಿಗೆ ಪತ್ರ ಬರೆಯುವ ಅವಶ್ಯಕತೆ ಇರಲಿಲ್ಲ. ಯೋಜನೆ ಮಾಡಿದವರೇ ಚರ್ಚೆಗೆ ಆಹ್ವಾನಿಸುವುದು ಹಾಸ್ಯಾಸ್ಪದ. ರಾಜಕಾರಣಕ್ಕಾಗಿ ಜೆಡಿಎಸ್ ನವರು ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ಬಾಲಕೃಷ್ಣ ಟೀಕಿಸಿದರು.

### ಬೈರಮಂಗಲ ಭೇಟಿ ಕೊಡದಿರಲು ಕಾರಣ

ನಾನು ಬೈರಮಂಗಲ ವೃತ್ತಕ್ಕೆ ಹೋದಾಗ ಗೊಂದಲ ಉಂಟಾಗಿ ಗಲಾಟೆಯಾದರೆ ನಮ್ಮ ಹೆಣ್ಣು ಮಕ್ಕಳ ಮೇಲೆ ಕೇಸು ದಾಖಲಾಗುತ್ತದೆ. ಅಲ್ಲಿ ಹೋದಾಗ ಅವಘಡವಾದರೆ ರೈತರಿಗೆ ತೊಂದರೆಯಾಗುತ್ತದೆ. ಹಾಗಾಗಿಯೇ ರೈತರನ್ನು ಜಿಬಿಡಿಎ ಕಚೇರಿಗೆ ಕರೆದು ಸಭೆ ಮಾಡುತ್ತಿದ್ದೇನೆ. ಎಂಟು ತಿಂಗಳ ಹಿಂದೆ ಇಲ್ಲೆ ಸಭೆ ನಡೆಸಿದಾಗಲೂ ಜೆಡಿಎಸ್ ನವರು ಪಿತೂರಿ ಮಾಡಿ ಗಲಾಟೆ ಮಾಡಿಸಲು ಪ್ರಯತ್ನಿಸಿದರು. ರೈತರು ಪ್ರಾಮಾಣಿಕವಾಗಿದ್ದರೆ ಸಮಸ್ಯೆ ಆಗುವುದಿಲ್ಲ. ಯಾವುದಾದರು ಪಕ್ಷದಲ್ಲಿ ಗುರುತಿಸಿಕೊಂಡಾಗ ಮಾತ್ರ ಸಮಸ್ಯೆಗಳು ಉಲ್ಬಣಿಸುತ್ತವೆ ಎಂದು ಬಾಲಕೃಷ್ಣ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗಾಣಕಲ್ ನಟರಾಜ್, ಕಾಂಗ್ರೆಸ್ ಮುಖಂಡ ಬೆಟ್ಟಸ್ವಾಮಿ ಮತ್ತಿತರರು ಇದ್ದರು.

## ಮೊದಲ ಪುಟದಿಂದ

### ಕೆಆರ್‌ಎಸ್ ಒಳಹರಿವು ಹೆಚ್ಚಳ

ಶೇಖರಣೆಯಾಗಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಹೀಗೆಯೇ ಮುಂದುವರಿದರೆ ಜಲಾಶಯದ ನೀರಿನ ಮಟ್ಟ ಮತ್ತಷ್ಟು ವೇಗವಾಗಿ ಹೆಚ್ಚಾಗುವ ಸಾಧ್ಯತೆಯಿದೆ.

### ‘ಡೊನೇಷನ್ ಫಸ್ಟ್’

ಹೀಗಿರುವಾಗ ಆರೋಪಿತ ದೇಣಿಗೆ ದುರ್ಬಳಕೆಯ ಹೊಣೆಯನ್ನೂ ಅವರೇ ಹೊರಬೇಕಲ್ಲವೇ ಎಂದು ಅವರು ಪ್ರಶ್ನಿಸಿದರು. ಎಸ್‌ಐಆರ್ ಕುರಿತು ಚುನಾವಣಾ ಆಯೋಗಕ್ಕೆ ಪ್ರಾದೇಶಿಕ ಆಯುಕ್ತರ ಮೂಲಕ ನಾವು ಅಧಿಕೃತವಾಗಿ ಸಲಹೆಗಳನ್ನು ಸಲ್ಲಿಸಿದ್ದೇವೆ. ಆದರೆ ಇದುವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಬಿಜೆಪಿ ಅಥವಾ ಜೆಡಿಎಸ್ ಯಾವುದೇ ವಿಷಯವನ್ನು ಪ್ರಸ್ತಾಪಿಸಿದರೆ ಚುನಾವಣಾ ಆಯೋಗ ತಕ್ಷಣ ಸ್ಪಂದಿಸುತ್ತದೆ. ಅದೇ ಸರ್ಕಾರ ನೀಡಿದ ಸಲಹೆಗಳ ವಿಷಯಕ್ಕೆ ಬಂದರೆ ಯಾವುದೇ ಸ್ಪಂದನೆ ಇಲ್ಲ. ಇದರಿಂದ ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ ಎಂಬುದು ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು. ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭವಾದಾಗ ಬಿಜೆಪಿ ಪ್ರತಿಭಟನೆ ನಡೆಸಿತ್ತು. ಅಲ್ಲಿನ ಎಲ್ಲಾ ಬೂತ್ ಮಟ್ಟದ ಅಧಿಕಾರಿಗಳು ಮಮತಾ ಬ್ಯಾನರ್ಜಿ ಅವರ ಪ್ರಭಾವದಲ್ಲಿದ್ದಾರೆ ಎಂದು ಆರೋಪಿಸಿ ದೂರು ನೀಡಿದ್ದರು. ನಂತರ ‘ಲಾಜಿಕಲ್ ಡಿಸ್ಕ್ರೆಪೆನ್ಸಿ’ ಎಂಬ ನಿಯಮವನ್ನು ತಂದು ಅನೇಕರನ್ನು ಪಟ್ಟಿಯಿಂದ ತೆಗೆದುಹಾಕಲಾಯಿತು. ಇದೆಲ್ಲವೂ ಅವರ ನಿಗದಿತ ಕಾರ್ಯವಿಧಾನದ ಭಾಗ. ಒಬ್ಬರು ತಮ್ಮ ಪಾತ್ರ ನಿರ್ವಹಿಸುತ್ತಾರೆ. ಹೀಗೆ ಈ ಪ್ರಕ್ರಿಯೆ ನಡೆಯುತ್ತದೆ ಎಂದು ಆರೋಪಿಸಿದರು.

### ಶಿಕ್ಷಕನ ಹಲ್ಲೆ: ವಿದ್ಯಾರ್ಥಿ ಸಾವು

ನಿಯಂತ್ರಣಕ್ಕೆ ತಂದಿದ್ದಾರೆ. ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಡಿಸಿಪಿ, ಎಸಿಪಿ ಸೇರಿದಂತೆ ನೂರಕ್ಕೂ ಹೆಚ್ಚು ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಯಿತು. ಈ ವೇಳೆ ಮೃತ ಬಾಲಕನ ತಂದೆ ಪೊಲೀಸ್ ವಾಹನದ ಮುಂದೆ ಮಲಗಿ ನನ್ನ ಮಗನನ್ನು ಹೊಡೆದು ಸಾಯಿಸಿದ್ದಾರೆ, ನ್ಯಾಯ ಬೇಕು ಎಂದು ಕಣ್ಣೀರಿಟ್ಟರು. ಪ್ರಕರಣದ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

### ನಾಯಕರಿಂದಲೇ ಹೊಂದಾಣಿಕೆ

ಅವರನ್ನು ಎನ್‌ಡಿಎ ಅಭ್ಯರ್ಥಿಯಾಗಿ ಕಣಕ್ಕೆ ಇಳಿಸುವ ಕಾರ್ಯತಂತ್ರ ಹೆಣೆದಿದ್ದೇ ನಾನು. ಹೀಗಿರುವಾಗ ಹೊಂದಾಣಿಕೆ ರಾಜಕಾರಣ ಮಾಡಿಕೊಳ್ಳಲು ಹೇಗೆ ಸಾಧ್ಯ ಎಂದು ವಿಜಯೇಂದ್ರ ಪ್ರಶ್ನಿಸಿದರು.

### ಕೃಷಿಗೆ ಸದ್ಯಕ್ಕೆ ನೀರು ಬಿಡಲ್ಲ

ರಸಗೊಬ್ಬರ ದಾಸ್ತಾನು ಲಭ್ಯವಿದ್ದು, ರೈತರಿಗೆ ಅಗತ್ಯ ಕೃಷಿ ಪರಿಕರಗಳ ಸಮರ್ಪಕ ಪೂರೈಕೆಗೆ ಜಿಲ್ಲಾಡಳಿತ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಹೇಳಿದ್ದಾರೆ. ಜಿಲ್ಲೆಯ ಎಲ್ಲಾ ಸಕ್ಕರೆ ಕಾರ್ಖಾನೆಗಳಲ್ಲಿ ಈ ವಾರದಿಂದಲೇ ಕಬ್ಬು ನುರಿಯುವ ಕಾರ್ಯವನ್ನು ಆರಂಭಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕಬ್ಬು ಬೆಳೆಗಾರರಿಗೆ ರಾಜ್ಯ ಸರ್ಕಾರದ ಪಾಲಿನ ಪ್ರತಿ ಟನ್‌ಗೆ 50 ಪ್ರೋತ್ಸಾಹಧನಕ್ಕಾಗಿ ಈಗಾಗಲೇ 10.30 ಕೋಟಿ ಬಿಡುಗಡೆ ಮಾಡಲಾಗಿದೆ. ಸಕ್ಕರೆ ಕಾರ್ಖಾನೆಗಳ ಪಾಲಿನ 50 ಪಾವತಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣ ಇರುವ ಹಿನ್ನೆಲೆಯಲ್ಲಿ, ರೈತರ ಹಿತದೃಷ್ಟಿಯಿಂದ ಪ್ರಕರಣವನ್ನು ಹಿಂಪಡೆದು ತಮ್ಮ ಪಾಲಿನ ಮೊತ್ತವನ್ನು ಶೀಘ್ರ ಪಾವತಿಸುವಂತೆ ಸಕ್ಕರೆ ಕಾರ್ಖಾನೆಗಳಿಗೆ ಮನವಿ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

### ಟ್ರಂಪ್ ಮತ್ತೆ ಯೂಟರ್ನ್!

ವ್ಯವಹರಿಸಲು ಬಯಸುವುದಿಲ್ಲ ಎಂದು ಹೇಳಿದ್ದಾರೆ. ಇರಾನಿಯನ್ನರು ನಾಲಾಯಕ್ ಜನರು, ವಿಕೃತ ಹಾಗೂ ಕೊಳಕು ಮನಸ್ಸಿನವರು. ಕ್ರೂರಿಗಳೂ ಹೌದು. ಅವರನ್ನ ಮುನ್ನಡೆಸುವವರು ಸಹ ವಿಕೃತ ಮನಸ್ಸು ಹೊಂದಿದವರೇ ಆಗಿದ್ದಾರೆ. ಅವರ ಬಳಿ ಪರಮಾಣು ಶಸ್ತ್ರಾಸ್ತ್ರ ಇದ್ದಿದ್ದರೆ ಅದನ್ನ ಬಳಸುತ್ತಿದ್ದರು. ಇನ್ನೂ ಇರಾನ್ ಜೊತೆಗೆ ಮಾತುಕತೆ ನಡೆಸುವುದರಿಂದ ಸಮಯ ವ್ಯರ್ಥ ಎಂದು ಟ್ರಂಪ್ ವಾಗ್ದಾಳಿ ನಡೆಸಿದರು.

### ಇಇ ಮನೆಯಲ್ಲಿ ಅಪಾರ ಆಸ್ತಿ ಪತ್ತೆ

ಹಾಗೂ ಚಿಕ್ಕಹೊನ್ನಕುಣಿಯ ಕೆಬಿಜೆಎನ್‌ಎಲ್ ಕಚೇರಿ ಮೇಲೆ ದಾಳಿ ಮಾಡಲಾಗಿದೆ. ಅಕ್ರಮ ಆಸ್ತಿ ಮಾಡಿರುವ ದೂರು ಹಿನ್ನಲೆಯಲ್ಲಿ ರಾಯಚೂರು ಲೋಕಾಯುಕ್ತ ಎಸ್.ಪಿ.ಗೋಪಾಲ ನೇತೃತ್ವದಲ್ಲಿ ಏಳು ತಂಡಗಳಲ್ಲಿ 30ಕ್ಕೂ ಹೆಚ್ಚು ಲೋಕಾಯುಕ್ತ ಸಿಬ್ಬಂದಿ ದಾಳಿ ಮಾಡಿದರು.

### ಲೋಕಾ ದಾಳಿ

ಅಧೀಕ್ಷಕ ಅಭಿಯಂತರ ಪ್ರವೀಣ್ ಬಿ.ಶ್ರೀಹರಿ ಮತ್ತು ಬೆಂಗಳೂರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಉಪ ನಿರ್ದೇಶಕರಾದ ಡಿ.ಆರ್. ಪುಷ್ಪ ಅವರ ಮನೆ ಮೇಲೆ ದಾಳಿ ನಡೆಸಲಾಗಿದೆ.

ತುಮಕೂರಿನ ಸಣ್ಣ ನೀರಾವರಿ ಇಲಾಖೆಯ ಸಹಾಯಕ ಅಭಿಯಂತರ ಎನ್. ಮಧುಸೂ ದನ್, ಬೆಂಗಳೂರು ದಕ್ಷಿಣದ ಕುಂಬಳಗೋಡು ಪಂಚಾಯ ತ್‌ನ ಪಿಡಿಒ ತಿಮ್ಮೇಗೌಡ, ಶಿವಮೊಗ್ಗದ ಸಂಶೋಧನಾ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕಿರಣ್ ಅಂಗಡಿ ಹಾಗೂ ಕಲಬುರಗಿಯ ಜೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ (ವಿದ್ಯುತ್) ಅಮೃತ್ ರಾವ್ ಅವರ ಮನೆ ಮೇಲೂ ದಾಳಿ ನಡೆಸಲಾಗಿದೆ.

### ರಾಜಾಸೀಟ್ ಬಂದ್

ಆದೇಶ ಹೊರಡಿಸಿದ್ದಾರೆ. ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ರಸ್ತೆ ಬದಿ ಕುಸಿದು ಸಂಚಾರ ನಿರ್ಬಂಧಿಸಿರುವುದರಿಂದ ರಾಜಾಸೀಟ್ ಉದ್ಯಾನದ ರಸ್ತೆಯಲ್ಲಿ ಬಸ್ ಗಳು ಸಂಚರಿಸು ತ್ತಿವೆ. ಈಗ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಬರುತ್ತಿರುವುದರಿಂದ ಸಂಚಾರ ದಟ್ಟಣೆ ಅಧಿಕವಾಗಿದೆ. ಹೀಗಾಗಿ 12ರವರೆಗೆ ರಾಜಾಸೀಟ್ ಉದ್ಯಾನಕ್ಕೆ ಪ್ರವಾಸಿಗರ ಪ್ರವೇಶ ಮತ್ತು ಉದ್ಯಾನದ ಮುಂದೆ ವಾಹನ ನಿಲುಗಡೆ ನಿಷೇಧಿಸಲಾಗಿದೆ.

### ಕೊಡಗಿನಲ್ಲಿ ಮಳೆ ಅಬ್ಬರ

ಕೊಡಗು ಜಿಲ್ಲೆಯಲ್ಲಿ ಮಳೆ ಮುಂದುವರಿದಿರುವ ಕಾರಣ ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲೆಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ಇತ್ತ ಬ್ರಹ್ಮಗಿರಿ ಭಾಗದಲ್ಲಿ ಮಳೆಯಾಗುತ್ತಿರುವ ಪರಿಣಾಮ ಕಾವೇರಿ ನದಿಯ ನೀರಿನ ಮಟ್ಟ ಒಂದೇ ದಿನದಲ್ಲಿ ಸುಮಾರು 4 ಅಡಿಯಷ್ಟು ಏರಿಕೆಯಾಗಿದೆ.

ಕರ್ನಾಟಕ ಸರ್ಕಾರ
**ಲೋಕೋಪಯೋಗಿ, ಇಲಾಖೆ ವಿಭಾಗ, ಮಂಡ್ಯ**
**ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಮಂಡ್ಯ**
ಸಂ: 15/2026-2027 ದಿನಾಂಕ: 04.07.2026

**ಮಂಡ್ಯ ಜಿಲ್ಲೆಯ ಮಂಡ್ಯ ಜಿಲ್ಲೆಯ ಕಾಮಗಾರಿಗಾಗಿ**
**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಐಟಂವಾರು ದರದ ಟೆಂಡರುಗಳ ಕಾಮಗಾರಿಗಳಿಗಾಗಿ ಅರ್ಹ ಗುತ್ತಿಗೆದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ KW-1ರ ರೀತಿ ಏಕ ಲಕೋಟೆ ಪದ್ಧತಿಯಲ್ಲಿಆಹ್ವಾನಿಸಲಾಗಿದೆ.ಅರ್ಹಗುತ್ತಿಗೆದಾರರು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ https://kppp.karnataka.gov.in ಮುಖಾಂತರ ಕಾಮಗಾರಿಯ ಟೆಂಡರ್‌ಗಾಗಿ ಭಾಗವಹಿಸಬಹುದು. ಟೆಂಡರ್ ದಾಖಲಾತಿಗಳನ್ನು ದಿನಾಂಕ 04.07.2026 ರಿಂದ ಇ-ಪೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಟೆಂಡರ್ ವಿಚಾರಣೆ ದಿನಾಂಕ 13.07.2026 ಸಂಜೆ 4.00 ಗಂಟೆವರೆಗೆ, ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ 14.07.2026 ಸಂಜೆ 4.30ಘಂಟೆವರೆಗೆ, ತಾಂತ್ರಿಕ ಬಿಡ್ ತೆರೆಯುವ ದಿನಾಂಕ 15.07.2026 ಸಂಜೆ ಬೆಳಿಗ್ಗೆ 11.00 ಗಂಟೆ ನಂತರಅಥವಾ ನಂತರದ ಕೆಲಸದ ದಿನಗಳು, ಆರ್ಥಿಕ ಬಿಡ್ ತೆರೆಯುವ ದಿನಾಂಕ: 16.07.2026 ಬೆಳಿಗ್ಗೆ 11.00ಗಂಟೆಗೆ ಅಥವಾ ನಂತರದ ಕೆಲಸದ ದಿನಗಳು. ಟೆಂಡರ್ ಪ್ರಕ್ರಿಯೆ ಬೆಲೆ ಇ-ಪೋರ್ಟಲ್‌ರಂತೆ. ಕಾಲಮಿತಿ: ಮಳೆಗಾಲ ಸೇರಿ 4 ತಿಂಗಳು, ಒಟ್ಟು 1 (ಒಂದು), ಕಾಮಗಾರಿಗಳ ಪೈಕಿ ಗರಿಷ್ಠ ಅಂದಾಜು ಮೊತ್ತ ರೂ.17.70 ಲಕ್ಷಗಳು ಇ.ಎಂ.ಡಿ. ಬೆಲೆ ಇ-ಪೋರ್ಟಲ್‌ರಂತೆ, ಕೆಲಸಗಳ ವಿವರ, ಅಂದಾಜು ಮೊತ್ತ, ಇ.ಎಂ.ಡಿ., ಮೊತ್ತ ಮುಂತಾದ ಮಾಹಿತಿಗಳನ್ನು ಸದರಿ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದು.

ಟಿಪ್ಪಣಿ: 1. ಈ ಕೆಳಗೆ ಸಹಿ ಮಾಡಿರುವವರು ಯಾವುದೇ ಕಾರಣಗಳನ್ನು ನೀಡದೆ ಟೆಂಡರ್ ಪ್ರಕ್ರಿಯೆಯ ಮುಂದೂಡುವಿಕೆ /ಸಂಪೂರ್ಣವಾಗಿ ಟೆಂಡರ್ ರದ್ದುಗೊಳಿಸುವ/ಟೆಂಡರ್ ನಿರಾಕರಿಸುವ ಹಕ್ಕನ್ನು ಹೊಂದಿರುತ್ತಾರೆ.

2. ಇನ್ನು ಮುಂದೆ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಗಳು ಇದ್ದಲ್ಲಿ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಬದಲಾಗಿ ವಿದ್ಯುನ್ಮಾನ ಸಂಗ್ರಹಣೆ ವೇದಿಕೆಯಲ್ಲಿ ಮಾತ್ರ ಬದಲಾವಣೆಗಳನ್ನು ಪ್ರಕಟಿಸಲಾಗುವುದು.

ಸಹಿ/- ಕಾ.ಇಂ.,ಲೋ.ಇ.,ವಿಭಾಗ, ಮಂಡ್ಯ



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

# ಮತದಾನದ ಹಕ್ಕು
# ಜೀವನದ ಹಕ್ಕು
# ಇದನ್ನು ಕಳೆದುಕೊಳ್ಳಬೇಡಿ



ನಿಮ್ಮ ಗಣತಿ ನಮೂನೆಯನ್ನು
ನಿಮ್ಮ ಬೂತ್ ಮಟ್ಟದ ಅಧಿಕಾರಿ (BLO) ಗೆ
**ಇಂದೇ ಸಲ್ಲಿಸಿ**

## ಸಲ್ಲಿಸಲು ಕೊನೆಯ ದಿನಾಂಕ | 29.07.2026

### ಗಣತಿ ನಮೂನೆ ಇಲ್ಲವೇ?


https://voters.eci.gov.in/
ಆನ್‌ಲೈನ್‌ನಲ್ಲಿ ಭರ್ತಿ ಮಾಡಿ ಮತ್ತು ಸಲ್ಲಿಸಿ
ಶೀಘ್ರ. ಸುರಕ್ಷಿತ. ಸುಲಭ.

### ECINET ಆಪ್ ಡೌನ್ಲೋಡ್ ಮಾಡಿ

App Store
Play Store


## ನಿಮ್ಮ ಗಣತಿ ನಮೂನೆ ಆನ್‌ಲೈನ್‌ನಲ್ಲಿ ಸಲ್ಲಿಸಲು 4 ಸುಲಭ ಹಂತಗಳು

1





**ಗಣತಿ ನಮೂನೆ ಭರ್ತಿ ಮಾಡಿ**
SIR-2026 ಪುಟದಲ್ಲಿ "ಗಣತಿ ನಮೂನೆಯನ್ನು ಭರ್ತಿ ಮಾಡಿ" ಎಂಬುವುದನ್ನು ಕ್ಲಿಕ್ ಮಾಡಿ.

2





**"ಸೈನ್-ಅಪ್" ಮೊಬೈಲ್ ಸಂಖ್ಯೆ ಮತ್ತು OTP ದಾಖಲಿಸಿ**
"ಸೈನ್-ಅಪ್" ಕ್ಲಿಕ್ ಮಾಡಿ ನಿಮ್ಮ ಮೊಬೈಲ್ ಸಂಖ್ಯೆ / EPIC ಸಂಖ್ಯೆಯನ್ನು ನಮೂದಿಸಿ, ಕ್ಯಾಪ್ಚಾವನ್ನು ಭರ್ತಿ ಮಾಡಿ ಮತ್ತು OTP ಗಾಗಿ ವಿನಂತಿಸಿ.

3




**ಮತದಾರರ ವಿವರಗಳನ್ನು ಪಡೆಯಲು ರಾಜ್ಯವನ್ನು ಆಯ್ಕೆ ಮಾಡಿ ಮತ್ತು EPIC ಸಂಖ್ಯೆಯನ್ನು ನಮೂದಿಸಿ**
ನಿಮ್ಮ ರಾಜ್ಯವನ್ನು ಆಯ್ಕೆ ಮಾಡಿ, ನಿಮ್ಮ EPIC ಸಂಖ್ಯೆಯನ್ನು ನಮೂದಿಸಿ ಮತ್ತು ನಿಮ್ಮ ವಿವರಗಳನ್ನು ಹುಡುಕಿ

4




**2002ರ ಮತದಾರರ ಪಟ್ಟಿಯಲ್ಲಿ ನಮೂದನ್ನು ಹುಡುಕಿ ನಮೂದಿಸಿದ ನಂತರ ಗಣತಿ ನಮೂನೆಯನ್ನು ಭರ್ತಿ ಮಾಡಿ**
ಗಣತಿ ನಮೂನೆಯನ್ನು ಎಚ್ಚರಿಕೆಯಿಂದ ಭರ್ತಿ ಮಾಡಿ ವಿವರಗಳನ್ನು ಪರಿಶೀಲಿಸಿ ಮತ್ತು ಆನ್‌ಲೈನ್‌ನಲ್ಲಿ ಸಲ್ಲಿಸಿ.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗ ಹಾಗೂ ಬ್ರಾಹ್ಮಣ ಸಮುದಾಯದವರ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

# ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ : ಶ್ರೀನಿವಾಸಶೆಟ್ಟಿ



ಚಾಮರಾಜನಗರ: ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯವಾಗಿದ್ದು, ವಿದ್ಯಾರ್ಥಿಗಳು ಶ್ರಮಪಟ್ಟು ಓದುವ ಮೂಲಕ ಉನ್ನತ ದರ್ಜೆಯಲ್ಲಿ ಉತ್ತೀರ್ಣರಾಗಿ ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ದಾಸಬಣಜಿಗರ ಸಂಘದ ಹಿರಿಯರಾದ ಸಿ.ವಿ. ಶ್ರೀನಿವಾಸ್‌ಶೆಟ್ಟಿ ತಿಳಿಸಿದರು.

ನಗರದ ಚಿಕ್ಕಂಗಡಿ ಬೀದಿಯಲ್ಲಿ ರಾಮಮಂದಿರದಲ್ಲಿ ಸಿಪಿಆರ್ ಎಜುಕೇಶನ್ ಮತ್ತು ಚಾರಿಟಬಲ್ ಟ್ರಸ್ಟ್ ವತಿಯಿಂದ ನಡೆದ ಸಮಾಜದ ವಿದ್ಯಾರ್ಥಿ ವೇತನ ಕೊಡುಗೆ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯೆ ಎಂಬುವುದು ಸಾಧಕರ ಸೊತ್ತು. ಬಡವರು, ಶ್ರೀಮಂತರು ಎಂಬ ಭೇದಭಾವವಿಲ್ಲ. ಬಡತನವು ಶಿಕ್ಷಣಕ್ಕೆ ಪ್ರೇರಣೆ ನೀಡುತ್ತದೆ. ಸಾಧಿಸುವ ಛಲ ಬೇಕು. ದೊರೆಯುವ ಸೌಲಭ್ಯಗಳನ್ನು ಬಳಸಿ ಕೊಂಡು ಪರಿಶ್ರಮ ಪಟ್ಟು ಓದುವುದನ್ನು ರೂಢಿಸಿಕೊಳ್ಳಬೇಕು. ಸಿ.ಪಿ.ರಾಜಣ್ಣ ಅವರು ಬಡ ವಿದ್ಯಾರ್ಥಿಗಳಿಗೆ ನೆರವು ನೀಡಲು ಟ್ರಸ್ಟ್ ರಚನೆ ಮಾಡಿ, ಪ್ರತಿ ವರ್ಷ ಸಮಾಜದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತಾ ಬಂದಿದ್ದಾರೆ. ಇಂಥ ಅವಕಾಶವನ್ನು ಎಲ್ಲರೂ ಬಳಸಿಕೊಳ್ಳಬೇಕು ಎಂದರು. ನಗರದ ದಾಸ ಬಣಜಿಗರ ಸಂಘದ ಅಧ್ಯಕ್ಷರು, ನಗರಸಭೆ ಮಾಜಿ ಸದಸ್ಯ, ಟ್ರಸ್ಟ್‌ನ ಖಜಾಂಚಿ ಚಂದ್ರಶೇಖರ್ ಮಾತನಾಡಿ, ಇದೊಂದು ಪವಿತ್ರವಾದ ಕಾರ್ಯವಾಗಿದೆ. ಸಮಾಜದ ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ ಅವರನ್ನು ಪ್ರೋತ್ಸಾಹಿಸುವ ಕೆಲಸವನ್ನು ಸಿ.ಪಿ. ರಾಜಣ್ಣ ಅವರು ನಿರಂತರವಾಗಿ ಮಾಡುತ್ತಾ ಬಂದಿದ್ದಾರೆ. ಅವರು ಕುಟುಂಬಕ್ಕೆ ಮತ್ತು ಟ್ರಸ್ಟ್ ಸದಸ್ಯರಿಗೆ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಜ್ಯೋತಿಷ್ಯ ಶಾಸ್ತ್ರದಲ್ಲಿ ಪಿಎಚ್‌ಡಿ ಪದವಿ ಪಡೆದ ಅಭಿಷೇಕ್ ನಾರಾಯಣ್ ಸ್ಕಿಲ್ ಇಂಡಿಯಾದಲ್ಲಿ ರಾಷ್ಟ್ರೀಯ ಮಟ್ಟದಕ್ಕೆ ಆಯ್ಕೆಯಾಗಿರುವ ವಿ. ಸ್ಕಂದನ್, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಸಿಂಧುಶ್ರೀ, ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಶಮಂತ್ ಅವರನ್ನು ವಿಶೇಷವಾಗಿ ಗೌರವಿಸಲಾಯಿತು. ಸಮಾಜದ 53 ವಿದ್ಯಾರ್ಥಿಗಳಿಗೆ ( ಒಂದರಿಂದ ಪದವಿ ವರೆಗೆ) ನಗದು ಪ್ರತಿಭಾ ಪುರಸ್ಕಾರವನ್ನು ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಸಂಸ್ಥಾಪಕರಾದ ಸಿ.ಕೆ. ಜಯಶ್ರೀ, ಅಧ್ಯಕ್ಷ ಎನ್. ಸತೀಶ್, ಉಪಾಧ್ಯಕ್ಷ ಶೇಖರ್, ಕಾರ್ಯದರ್ಶಿ ಸಿ.ವಿ. ರಾಘವೇಂದ್ರ, ಶ್ರೀನಿವಾಸಶೆಟ್ಟಿ , ಎಸ್‌ಆರ್‌ಎಸ್ ಶ್ರೀನಿವಾಸ್,ಶಂಕರಶೆಟ್ಟಿ, ಪದ್ಮ ಪುರುಷೋತ್ತಮ್, ಸುಬ್ರಮಣ್ಯ, ಮೊದಲಾದವರು ಹಾಜರಿದ್ದರು.

# ಬಾಲಕಾರ್ಮಿಕ ಬಗ್ಗೆ ಅರಿವು ಮೂಡಿಸಿ



ಮೈಸೂರು: ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯು ಗ್ರಾಮ ಮಟ್ಟದಿಂದ ನಡೆಯಬೇಕು. ಮಕ್ಕಳ ಗ್ರಾಮ ಸಭೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಬಗ್ಗೆ ಜಾಗೃತಿ ಮೂಡಿಸಿ ಎಂದು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಕಾರಿ ಹಾಗೂ ಕಾರ್ಯಪಡೆ ಸಮಿತಿಯ ಸಭೆ ನಡೆಸಿ ಮಾತನಾಡಿದರು. ಬಾಲಕಾರ್ಮಿಕರನ್ನು ಪತ್ತೆ ಹಚ್ಚಲು ಅಧಿಕಾರಿಗಳು ಪ್ರತಿ ಮಾಹೆ ನಿಗದಿಪಡಿಸಿರುವ ಕನಿಷ್ಠ 15 ತಪಾಸಣೆ ಅಥವಾ ದಾಳಿಗಳನ್ನು ನಡೆಸಿ ವರದಿ ನೀಡಬೇಕು ಎಂದರು.

ಏಪ್ರಿಲ್‌ನಿಂದ ಜೂನ್‌ರವರೆಗೆ ಕಾರ್ಮಿಕ ಅಧಿಕಾರಿಗಳು 434 ದಾಳಿಗಳನ್ನು ನಡೆಸಿ 14 ಕಿಶೋರ ಕಾರ್ಮಿಕರನ್ನು ಪತ್ತೆ ಹಚ್ಚಿ 12 ಜನ ಮಾಲೀಕರ ವಿರುದ್ಧ ಮೊಕದ್ದಮೆ ದಾಖಲಿಸಿ, 20000 ದಂಡ ವಸೂಲಿ ಮಾಡಲಾಗಿದೆ ಎಂದರು. ದಾಳಿ ಅಥವಾ ತಪಾಸಣೆ ವೇಳೆ ಪತ್ತೆಯಾಗುವ ಬಾಲ ಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರು ಪಡಿಸಿದ ನಂತರ ಅವರ ಅರ್ಹತೆಯ ಅನುಗುಣವಾಗಿ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಥವಾ ಸರ್ಕಾರಿ ಸೌಮ್ಯದಲ್ಲಿರುವ ವಸತಿಶಾಲೆಗಳಿಗೆ ದಾಖಲಿಸಿ, ರಕ್ಷಣೆಯ ಜೊತೆಗೆ ಪುನ ರ್ವಸತಿಯ ಸಹ ಅತಿಮುಖ್ಯ ಎಂದರು. ಸಭೆಯಲ್ಲಿ ಸಹಾಯಕ ಕಾರ್ಮಿಕ ಆಯುಕ್ತೆ ಲಲಿತಾ ಬಾಯಿ, ಕಾರ್ಮಿಕ ಅಧಿಕಾರಿ ಚೇತನ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ರವಿಚಂದ್ರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ಶಿಕ್ಷಕ ಗುರುಬಸಪ್ಪ ಅವರ ಸೇವೆ ಅವಿಸ್ಮರಣೀಯ



ಎಚ್.ಡಿ.ಕೋಟೆ: ಸೋನಹಳ್ಳಿ ಗ್ರಾಮದಲ್ಲಿ ಶಾಲೆ ಆರಂಭಕ್ಕೆ ಶ್ರಮಿಸಿದ ಹಾಗೂ ಶಾಲೆಯಲ್ಲಿ ಕಲಿಕೆಗೆ ಪೂರಕ ವಾತಾವರಣ ನಿರ್ಮಾಣ ಮಾಡಿ, ದೀರ್ಘ ಕಾಲ ಶಾಲೆಯಲ್ಲಿ ಸೇವೆ ಸಲ್ಲಿಸಿದ್ದ ಧಾರವಾಡ ಮೂಲದ ಮುಖ್ಯ ಶಿಕ್ಷಕ ಗುರುಬಸಪ್ಪ, ಇತ್ತೀಚೆಗೆ ನಿವೃತ್ತಿ ಹೊಂದಿದ ಶಾಲೆಯ ಸಹ ಶಿಕ್ಷಕ ನಾಗರಾಜು ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ನಿವೃತ್ತರಿಗೆ ಹೂವಿನ ಮಳೆಗರೆಗೈದು, ಆರತಿ ಬೆಳಗಿ, ಹೂಮಾಲೆ ಆಕಿ, ಪಟಾಕಿ ಸಿಡಿಸ ಗ್ರಾಮದ ಬೀದಿಗಳಲ್ಲಿ ಮೆರವಣಿಗೆ ಮಾಡಿ ಶಾಲೆಯ ರಂಗಮಂಟಪಕ್ಕೆ ನಿವೃತ್ತಿ ಶಿಕ್ಷಕರನ್ನು ಹಿರಿಯ ವಿದ್ಯಾರ್ಥಿಗಳು, ಗ್ರಾಮಸ್ಥರು, ಸಹದ್ಯೋಗಿಗಳು ಕರೆತಂದರು. ದೂರದ ಧಾರವಾಡ ಜಿಲ್ಲೆಯಿಂದ 1989 ರಲ್ಲಿ ನಮ್ಮೂರಿಗೆ ಶಿಕ್ಷಕರಾಗಿ ಆಯ್ಕೆಯಾಗಿ ಗುರುಬಸಪ್ಪ ಅವರು ಬಂದಾಗ, ನಮ್ಮೂರಿನ ಶಾಲೆಯ ಜಾಗ ಅತ್ಯಂತ ಅವ್ಯವಸ್ಥೆಯಿಂದ ಕೂಡಿತ್ತು. ಆವರಣದ ಸುತ್ತಲೂ ಗಿಡ, ಗಂಟೆಗಳು ಬೆಳೆದು ಕಾಡುಪ್ರಾಣಿಗಳ ವಾಸಸ್ಥಾನವಾಗಿತ್ತು. ಕಾಡು ಮೇಡು ಹಳ್ಳಕೊಳ್ಳಗಳಿಂದ ಕೂಡಿದ್ದ ಜಾಗವನ್ನ ನೋಡಿದರೆ ಎಂಥವರಿಗೂ ಭಯವಾಗುತ್ತಿತ್ತು. ಆ ಜಾಗವನ್ನ ಸ್ವಚ್ವಗೊಳಿಸಿ ಗ್ರಾಮಸ್ಥರ ಸಹಕಾರದಿಂದ ಉತ್ತಮ ಕೊಠಡಿ, ಕಾಂಪೌಂಡ್, ಆಟದ ಮೈದಾನ, ಮರಗಿಡಗಳನ್ನ ಬೆಳಸಿ ಸುಂದರವಾದ ವಾತಾವರಣ ನಿರ್ಮಿಸಿ ಕಲಿಕೆಗೆ ಪೂರಕ ವಾತಾವರಣವನ್ನು ಸೃಷ್ಟಿಸಿದರು. ನಮ್ಮೂರ ಶಾಲೆಯು ಅತ್ಯುತ್ತಮ ಶಾಲೆ ಎಂದು ಜಿಲ್ಲಾಮಟ್ಟದಲ್ಲಿ ಪ್ರಶಸ್ತಿ ಬರಲು ಶ್ರಮಿಸಿದ್ದ ಅವರ ಕಾರ್ಯ ಅವಿಸ್ಮರಣೀಯ ಎಂದು ಪಿಡಿಓ ಮೋಹನ್ ಸ್ಮರಿಸಿದರು.

ಗುಣಾತ್ಮಕ, ಸಂಸ್ಕಾರಯುತ ಶಿಕ್ಷಣವನ್ನು ಗುರುಬಸಪ್ಪ ಅವರು ಭೋದಿಸಿದರು. ಇವರ ಮಾರ್ಗದರ್ಶನದಲ್ಲಿ ಕಲಿತ ಅನೇಕರು ಉನ್ನತ ಸ್ಥಾನದಲ್ಲಿದ್ದಾರೆ. ನಿರ್ಧಿಷ್ಟ ಸೇವೆ ಸಲ್ಲಿಸಿ ತಮ್ಮೂರಿಗೆ ವರ್ಗಾವಣೆ ಆಗಬಹುದಿತ್ತು. ಆದರೆ, ಗುರುಬಸಪ್ಪ ಅವರು ನಮ್ಮೂರಿನ ಮೇಲೆ ವಿಶೇಷ ಕಾಳಜಿಯಿಂದ ಇಲ್ಲಿಯೇ ಸುದೀರ್ಘ ಸೇವೆ ಸಲ್ಲಿಸಿದ್ದಾರೆ ಅವರ ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದು ಗ್ರಾಮಸ್ಥರು, ಹಿರಿಯರು ಹರಸಿದರು. ತಾಲೂಕು ಶಿಕ್ಷಕರ ಸಂಘದ ನಿರ್ದೇಶಕ ಸ್ವಾಮಿಗೌಡ ಮಾತನಾಡಿದರು. ಸಿ.ಆರ್.ಪಿ ದೀಪಾ, ಮಾಜಿ ಪ್ರಧಾನ ನರಸಿಂಹೇಗೌಡ, ತಾಪಂ ಮಾಜಿ ಸದಸ್ಯ ಮಲ್ಲಿಕಾರ್ಜುನ, ಶಿಕ್ಷಕ ಸಂಘದ ನಿರ್ದೇಶಕ ಸ್ವಾಮಿಗೌಡ, ಪಿಡಿಓ ಮೋಹನ್, ನಿವೃತ್ತ ಶಿಕ್ಷಕ ಚೆನ್ನನಾಯಕ, ಶಿಕ್ಷಕಿ ಅನ್ನಪೂರ್ಣೇಶ್ವರಿ, ಮುಖ್ಯ ಶಿಕ್ಷಕ ಮಂಜುನಾಥ್, ಶಿಕ್ಷಕಿಯರಾದ ರೇಷ್ಮಾಭಾನು, ವಸಂತ, ಸುಧಾ, ಮುಖಂಡರಾದ ರಾಮೇಗೌಡ, ಮಾದೇಗೌಡ, ಸಿದ್ದೇಗೌಡ, ಗ್ರಾಪಂ ಮಾಜಿ ಸದಸ್ಯ ರಾಜು, ಸೋಮಶೇಖರ್, ಸದಾಶಿವು, ಶಿವಲಿಂಗೇಗೌಡ, ಕೃಷ್ಣಗೌಡ, ರಾಜೇಶ್, ಶಂಕರ್, ಪುಟ್ಟೇಗೌಡ, ಕುಮಾರ್ ಸೇರಿದಂತೆ ಅನೇಕರಿದ್ದರು.

# ಬಿಜೆಪಿ ವಕಾರ ಅಶ್ವಥನಾರಾಯಣ್ ಅವರಿಗೆ ಪತ್ನಿ ವಿಯೋಗ

ರಾಮನಗರ: ವಿಧಾನ ಪರಿಷತ್ ಮಾಜಿ ಸದಸ್ಯರು, ಬಿಜೆಪಿ ಪಕ್ಷದ ಹಾಲಿ ರಾಜ್ಯ ವಕ್ತಾರರಾದ ಅಶ್ವಥನಾರಾಯಣ್ ಅವರ ಪತ್ನಿ ಸುನಿತಾ (58) ಬುಧವಾರ ನಿಧನರಾಗಿದ್ದು, ಜಿಲ್ಲಾ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಕಂಬನಿ ಮಿಡಿದಿದ್ದಾರೆ.



ಬೆಂಗಳೂರಿನ ನಾಗರಭಾವಿ ಬಳಿಯ ಅವರ ನಿವಾಸದಲ್ಲಿ ಮೃತರ ಅಂತಿಮ ದರ್ಶನ ಪಡೆದು ಗೌರವ ಸಲ್ಲಿಸಿರುವುದಾಗಿ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಆರ್.ವಿ.ಸುರೇಶ್ ತಿಳಿಸಿದ್ದಾರೆ. ಮೃತರ ಅಗಲಿಕೆಯನ್ನು ಸಹಿಸಿಕೊಳ್ಳುವ ಶಕ್ತಿ ಕರುಣಿಸುವಂತೆ ಭಗವಂತನಲ್ಲಿ ಪ್ರಾರ್ಥನೆ ಸಲ್ಲಿಸಿರುವುದಾಗಿ ಅವರು ಹೇಳಿದ್ದಾರೆ. ತಮ್ಮೊಟ್ಟಿಗೆ ಬಿಜೆಪಿ ಪ್ರಮುಖರಾದ ಜಿ.ವಿ.ಪದ್ಮನಾಭ, ರುದ್ರದೇವರು, ಬಿ.ನಾಗೇಶ್, ಪಿ.ವಿ.ಭದ್ರಿನಾಥ್, ರಂಜನ್, ನಾಗಮ್ಮ, ಭರತ್‌ರಾಜ್, ಕಿಶನ್ ಮುಂತಾದವರು ಶ್ರದ್ದಾಂಜಲಿ ಅರ್ಪಿಸಿದ್ದಾರೆ. ಮೃತರ ಪುತ್ರಿ ವಿದೇಶದಲ್ಲಿದ್ದು ಅವರು ಶುಕ್ರವಾರ ಬೆಂಗಳೂರು ತಲುಪಲಿದ್ದಾರೆ. ಹೀಗಾಗಿ ಅಂತ್ಯ ಸಂಸ್ಕಾರ ಶುಕ್ರವಾರ ನಡೆಯಲಿದೆ ಎಂದು ಗೊತ್ತಾಗಿದೆ.

# ಚಾ.ನಗರ ಸಾಂಸ್ಕೃತಿಕ ಶ್ರೀಮಂತ

## ಡಿಡಿಪಿಯು ಪುಟ್ಟಗೌರಮ್ಮ ಹೇಳಿಕೆ | ಸಾಂಸ್ಕೃತಿಕ ವೇದಿಕೆ ಉದ್ಘಾಟನೆ, ಪ್ರತಿಭಾ ಪುರಸ್ಕಾರ



ಚಾಮರಾಜನಗರ: ಸಾಂಸ್ಕೃತಿಕ ಹಾಗೂ ಧಾರ್ಮಿಕ ಪರಂಪರೆಯನ್ನು ಹೊಂದಿರುವ ಚಾಮರಾಜನಗರ ಜಿಲ್ಲೆಯು ಶೈಕ್ಷಣಿಕವಾಗಿ ಹೆಚ್ಚು ಪ್ರಗತಿಯತ್ತ ಸಾಗುತ್ತಿರುವ ಜಿಲ್ಲೆಯಾಗಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಪುಟ್ಟಗೌರಮ್ಮ ಅವರು ಬಣ್ಣಿಸಿದರು.

ನಗರದ ಹೊರವಲಯದಲ್ಲಿರುವ ಮರಿಯಾಲ ಶ್ರೀ ಮುರುಘರಾಜೇಂದ್ರಸ್ವಾಮಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ 2026–27ನೇ ಸಾಲಿನ ಸಾಂಸ್ಕೃತಿಕ ಹಾಗೂ ಕ್ರೀಡಾ ವೇದಿಕೆಯ ಉದ್ಘಾಟನೆ, ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

### ಜಿಲ್ಲೆಯ ಪರಂಪರೆ ಮತ್ತು ಶಿಸ್ತಿನ ಮಹತ್ವ

ಜಾನಪದ ಕಲೆಗಳ ತವರೂರಾಗಿರುವ ಚಾಮರಾಜನಗರ ಜಿಲ್ಲೆಯು ವಿಭಿನ್ನ ಸಂಸ್ಕೃತಿ ಮತ್ತು ಆಚಾರ–ವಿಚಾರಗಳನ್ನು ಹೊಂದಿದೆ. ಅನೇಕ ಧಾರ್ಮಿಕ ಕೇಂದ್ರಗಳು ಹಾಗೂ ಮಠಮಾನ್ಯಗಳ ಪರಂಪರೆಯು ಜಿಲ್ಲೆಯನ್ನು ಮತ್ತಷ್ಟು ಶ್ರೀಮಂತಗೊಳಿಸಿದೆ. ಇಂತಹ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುವ ಸೌಭಾಗ್ಯ ನನ್ನದಾಗಿದೆ. ಪ್ರಥಮವಾಗಿ ಜಿಲ್ಲೆಗೆ ಉಪ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ದಿನವೇ ಶ್ರೀಮಠದ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಷಯ. ಕಳೆದ ವರ್ಷವೂ ಕಾಲೇಜಿಗೆ ಶೇಕಡಾ 100ರಷ್ಟು ಫಲಿತಾಂಶ ಬಂದಿರುವುದು ಅತ್ಯಂತ ಶ್ಲಾಘನೀಯ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ಪಾಠ–ಪ್ರವಚನಗಳನ್ನು ಆಲಿಸುವ ಜೊತೆಗೆ ಜೀವನದಲ್ಲಿ ಶಿಸ್ತು ಮತ್ತು ಸಮಯ ಪರಿಪಾಲನೆಯನ್ನು ಬೆಳೆಸಿಕೊಳ್ಳಬೇಕು. ಶ್ರೀ ಮುರುಘರಾಜೇಂದ್ರಸ್ವಾಮಿ ವಿದ್ಯಾಸಂಸ್ಥೆಯು ಗುಣಾತ್ಮಕ ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಮೌಲ್ಯಗಳನ್ನು ಧಾರೆಯೆರೆಯುತ್ತಿದೆ. ಇಂತಹ ಅತ್ಯುತ್ತಮ ವಾತಾವರಣದಲ್ಲಿ ಬೆಳೆದ ಮಕ್ಕಳ ಭವಿಷ್ಯ ಸದಾ ಉಜ್ವಲವಾಗಿರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ರಾಜ್ಯಮಟ್ಟದ ಸಾಧಕರಾಗಲು ಶ್ರೀಗಳ ಕರೆ

**ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀ ಮುರುಘರಾಜೇಂದ್ರಸ್ವಾಮಿ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಇಮ್ಮಡಿ ಮುರುಘರಾಜೇಂದ್ರ ಮಹಾಸ್ವಾಮೀಜಿ ಅವರು, ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಗಳಿಸುವ ಮೂಲಕ ವಿದ್ಯಾಸಂಸ್ಥೆಯ ಹಾಗೂ ಉಪನ್ಯಾಸಕರ ಶ್ರಮವನ್ನು ಸಾರ್ಥಕಪಡಿಸಬೇಕು ಎಂದರು. ಈ 2026–27ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದು, ರಾಜ್ಯದ ಸಾಧಕರ ಪಟ್ಟಿಯ ಸಾಲಿನಲ್ಲಿ ನಿಮ್ಮ ಹೆಸರು ಪ್ರಕಟವಾಗಬೇಕು. ಹಿರಿಯರು ಮತ್ತು ಗುರುಗಳಿಗೆ ಗೌರವ ಕೊಡುವುದರ ಮೂಲಕ ತಮ್ಮ ತಂದೆ–ತಾಯಿಗಳು ಮೆಚ್ಚುವಂತಹ ವಿದ್ಯಾರ್ಥಿಗಳಾಗಿ ರೂಪುಗೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಪ್ರತಿಯೊಬ್ಬರೂ ಸನ್ನಡತೆ, ಉತ್ತಮ ಚಾರಿತ್ರ್ಯ ಹಾಗೂ ಸದ್ಗುಣಗಳನ್ನು ಅಳವಡಿಸಿಕೊಳ್ಳಬೇಕು. ಕ್ರೀಡಾ ಮತ್ತು ಸಾಂಸ್ಕೃತಿಕ ವೇದಿಕೆಯು ನಿಮ್ಮಲ್ಲಿರುವ ಸುಪ್ತ ಪ್ರತಿಭೆಗಳ ಅನಾವರಣಕ್ಕೆ ಸೂಕ್ತ ವೇದಿಕೆಯಾಗಿದೆ. ಈ ವಿದ್ಯಾಸಂಸ್ಥೆಯಲ್ಲಿ ವ್ಯಾಸಂಗ ಮಾಡಿದ ತಾವು ಭವಿಷ್ಯದಲ್ಲಿ ದಕ್ಷ ಅಧಿಕಾರಿಗಳಾಗಿ ಸಂಸ್ಥೆಯ ಕೀರ್ತಿಯನ್ನು ಇಮ್ಮಡಿಗೊಳಿಸಬೇಕೆಂಬ ಆಶಯವನ್ನು ಶ್ರೀಗಳು ವ್ಯಕ್ತಪಡಿಸಿದರು.**

### ಪ್ರತಿಭಾ ಪುರಸ್ಕಾರ, ಗಣ್ಯರ ಉಪಸ್ಥಿತಿ

ಕಾರ್ಯಕ್ರಮದಲ್ಲಿ ಉಮ್ಮತ್ತೂರಿನ ಲಿಂಗಪ್ಪ ಟ್ರೇಡರ್ಸ್ ಮಾಲೀಕರಾದ ಶಿವಕುಮಾರ್ ಅವರು 2025–26ನೇ ಸಾಲಿನಲ್ಲಿ ಅತ್ಯುನ್ನತ ದರ್ಜೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ 'ಪ್ರತಿಭಾ ಪುರಸ್ಕಾರ' ನೀಡಿ ಸನ್ಮಾನಿಸಿದರು. ಅಲ್ಲದೆ, ಕಳೆದ ಬಾರಿ ಶೇಕಡಾ 100ರಷ್ಟು ಫಲಿತಾಂಶ ದಾಖಲಿಸಲು ಶ್ರಮಿಸಿದ ಉಪನ್ಯಾಸಕ ವರ್ಗದವರನ್ನೂ ಸಹ ಇದೇ ವೇದಿಕೆಯಲ್ಲಿ ಗೌರವಿಸಲಾಯಿತು. ಸಭಾ ಕಾರ್ಯಕ್ರಮದ ಬಳಿಕ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು.

ಈ ಅರ್ಥಪೂರ್ಣ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಪಿ. ಮಹದೇವಸ್ವಾಮಿ ವಹಿಸಿದ್ದರು. ವೇದಿಕೆಯಲ್ಲಿ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಮುಖ್ಯ ಅಧೀಕ್ಷಕಿ ಪಾರ್ವತಿ, ಉಮ್ಮತ್ತೂರು ಜೆ.ಎಸ್.ಎಸ್ ಪ್ರೌಢಶಾಲೆಯ ಮುಖ್ಯಶಿಕ್ಷಕ ಮಲ್ಲರಾಜು, ಗ್ರಾನೈಟ್ ಉದ್ಯಮಿ ಗುರುಸಿದ್ದಯ್ಯ, ಮರಿಯಾಲ ಡೇರಿ ಅಧ್ಯಕ್ಷ ಮಹದೇವಸ್ವಾಮಿ, ನಿವೃತ್ತ ಕಾರ್ಯನಿರ್ವಹಣಾ ಅಧಿಕಾರಿ ಕಿರಗಸೂರು ಮಾದಪ್ಪ, ಚಿನ್ನಸ್ವಾಮಿ, ವಿದ್ಯಾಸಂಸ್ಥೆಯ ಮುಖ್ಯಶಿಕ್ಷಕರು, ಉಪನ್ಯಾಸಕರಾದ ಕೆ.ಸಿ. ಮಹೇಂದ್ರ, ಎಸ್. ಶಂಭು, ವಿದ್ಯಾರ್ಥಿಗಳಾದ ಮಾನಸ, ಐಶ್ವರ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹೊಸ ವಿದ್ಯುತ್ ಸಂಪರ್ಕ ಪಡೆಯಲು ಆ.15ರವರೆಗೆ ಗಡುವು ವಿಸ್ತರಣೆ

ಮೈಸೂರು: ರಾಜ್ಯದಲ್ಲಿ ಶೇ.20ರಷ್ಟು ಹೆಚ್ಚುವರಿ ವ್ಯತ್ಯಾಸದೊಂದಿಗೆ 2400 ಚದರ ಅಡಿವರೆಗಿನ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ (ಓಸಿ) ಇಲ್ಲದೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ನೀಡಲಾಗಿದ್ದ ಗಡುವನ್ನು ಆಗಸ್ಟ್ 15ರವರೆಗೆ ವಿಸ್ತರಿಸಲಾಗಿದೆ.

ಈ ಮೊದಲು 2026ರ ಮೇ 31ರೊಳಗಾಗಿ ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಈಗಾಗಲೇ ಅರ್ಜಿ ಸಲ್ಲಿಸಿರುವ ಪ್ರಕರಣಗಳಿಗೆ ಸೀಮಿತವಾಗಿ ಸ್ವಾಧೀನಾನುಭವ ಪತ್ರ ಸಲ್ಲಿಕೆಗೆ ಒಂದು ಬಾರಿ ವಿನಾಯಿತಿ ಪಡೆದು ವಿದ್ಯುತ್ ಸಂಪರ್ಕ ಪಡೆಯಲು, ಜೂನ್ 22 ರಂದು 15 ದಿನಗಳ ಅವಧಿವರೆಗೆ ವಿಸ್ತರಿಸಿ ಅವಕಾಶ ನೀಡಲಾಗಿತ್ತು. ಆದರೆ ಇದೀಗ ಸದರಿ ಗಡುವನ್ನು ಆಗಸ್ಟ್ 15ರವರೆಗೆ ವಿಸ್ತರಿಸಿ ರಾಜ್ಯ ಸರ್ಕಾರವು ಹೊಸ ಆದೇಶ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ 2400 ಚದರ ಅಡಿಗಳವರೆಗೆ ಅಳತೆಯ ನಿವೇಶನಗಳಲ್ಲಿ ಶೇ.20 ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ ನಿರ್ಮಿಸಿರುವ ಜಿ+3 ಅಂತಸ್ತಿನ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ +4 ಮಹಡಿ ಹೊಂದಿರುವ ವಸತಿ ಕಟ್ಟಡಗಳಿಗೆ ಮಾತ್ರವೇ ಈ ನಿಯಮ ಅನ್ವಯವಾಗುತ್ತದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್) ಪ್ರಕಟಣೆಯಲ್ಲಿ ತಿಳಿಸಿದ್ದು, ಗ್ರಾಹಕರು ಈ ಅವಕಾಶ ಸದುಪಯೋಗ ಮಾಡಿಕೊಳ್ಳುವಂತೆ ಸೆಸ್ಕ್ ಮನವಿ ಮಾಡಿದೆ.

# ಬಂಡವಾಳ ಶಾಹಿ, ರಾಜಕಾರಣಿಗಳಿಂದ ಪರಿಸರಕ್ಕೆ ಧಕ್ಕೆ



**ಮೈಸೂರು:** ಆಧುನಿಕತೆಯ ಬೆಳವಣಿಗೆ ಬಹಳ ದೊಡ್ಡದು ಎಂದು ಹೇಳಿಕೊಳ್ಳುವ ಬಂಡವಾಳ ಶಾಹಿಗಳು, ರಾಜಕಾರಣಿಗಳಿಂದ ನಿಸರ್ಗವನ್ನು ನಿರ್ನಾಮ ಮಾಡುತ್ತಿದ್ದಾರೆ ಎಂದು ಬೆಂಗಳೂರು ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಬಸವರಾಜ ಕಲ್ಗುಡಿ ವಿಷಾಧಿಸಿದರು.

ನಗರದ ಮಾನಸ ಗಂಗೋತ್ರಿಯ ಆವರಣದ ಮಾಳವೀಯ ಮಿಷನ್ಸ್ ಕೇಂದ್ರದ ಸಭಾಂಗಣದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಸಹಯೋಗದಲ್ಲಿ ಬುಧವಾರ ನಡೆದ ಯುಜಿಸಿ ಪ್ರಾಯೋಜಿತ 53ನೇ ಕನ್ನಡ ಪುನಶ್ಚೇತನ ಶಿಬಿರದಲ್ಲಿ ಮಾತನಾಡಿದರು. ಇದರ ಇತಿಹಾಸ ಬಹಳ ದೊಡ್ಡದು. ಜಗತ್ತಿನ ಇತಿಹಾಸ ನೋಡಿದಾಗ ಅಮೇರಿಕಾದಲ್ಲಿದ್ದ ಬುಡಕಟ್ಟು ಸಮುದಾಯವನ್ನು ಹೊಡೆದುಹಾಕಿ ಅವರನ್ನು ಮೂಲೆಗುಂಪು ಮಾಡಿ ಬಂದ ಬಂಡವಾಳ ಶಾಹಿಗಳು ಕ್ರೂರಿಗಳಾಗಿ ನಮ್ಮ ಮೂಲಭೂತ ಜೀವನದ ಸಂಬಂಧವನ್ನು ಹಾಳು ಮಾಡುತ್ತಿದ್ದಾರೆ. ಆಧುನಿಕತೆಯ ಅಭಿವೃದ್ಧಿ ಎಂಬ ತತ್ವವನ್ನು ಒಪ್ಪಿಕೊಂಡಂತಹ ರಾಜಕೀಯ ಶಕ್ತಿಗಳು ಹಾಗೂ ಬಂಡವಾಳ ಶಾಹಿಗಳ ಪ್ರಪಂಚ ನಿಸರ್ಗವನ್ನು ನಿಧಾನವಾಗಿ ಆಹುತಿ ತೆಗೆದುಕೊಳ್ಳುತ್ತಿದೆ. 2023ರಲ್ಲಿ ಅಣೆಕಟ್ಟನ್ನು ಕಟ್ಟುವ ಸಂದರ್ಭದಲ್ಲಿ ಬುಡಕಟ್ಟು ಸಮುದಾಯವೊಂದು ಬೃಹತ್ ಮಟ್ಟದಲ್ಲಿ ಗುಳೆ ಏಳುವ ಪರಿಸ್ಥಿತಿ ನಿರ್ಮಾಣವಾಗಿತ್ತು ಎಂದರು.

ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್. ಕೆ.ಲೋಕನಾಥ್ ಮಾತನಾಡಿ, ಪ್ರತಿಯೊಬ್ಬರೂ ನೆಲ, ಜಲ ಹಾಗೂ ಭಾಷೆಯನ್ನು ಪ್ರೀತಿಸಬೇಕು. ಕನ್ನಡಕ್ಕೆ ಬಹಳ ದೊಡ್ಡ ಇತಿಹಾಸವಿದೆ. ಕುವೆಂಪು ಅವರು ಸಾಮಾನ್ಯ ಕುಟುಂಬದಿಂದ ಬಂದು ಭಾಷೆಯ ಬಗ್ಗೆ ಅಗಾಧವಾಗಿ ತಿಳಿದುಕೊಂಡಿದ್ದರು. ಕುವೆಂಪು ರಾಜ್ಯ ಸುತ್ತದೆ ನಾಡಗೀತೆ ರಚಿಸಿದ್ದಾರೆ. ಇದಕ್ಕೆ ಕಾರಣ ಅವರ ಭಾಷಾ ಪ್ರೇಮವೇ ಕಾರಣ ಎಂದು ತಿಳಿಸಿದರು. ಕನ್ನಡ ಐಚ್ಛಿಕ ವಿಷಯಗಳಿಗೆ ಸೇರಿಕೊಳ್ಳುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಕುಸಿಯುತ್ತಿದೆ. ಕೆಲವೊಂದು ಕಾಲೇಜುಗಳು ಮುಚ್ಚುವ ಸ್ಥಿತಿ ನಿರ್ಮಾಣವಾಗಿದೆ. ಕನ್ನಡ ಅಧ್ಯಾಪಕರು ಕನ್ನಡವನ್ನು ಉಳಿಸುವ ಹಾಗೂ ಬೆಳೆಸುವ ನಿಟ್ಟಿನಲ್ಲಿ ಮಕ್ಕಳನ್ನು ಸೇರಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕಿ ಪ್ರೊ.ಹೆಚ್.ಪಿ.ಜ್ಯೋತಿ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೊ.ನಂಜಯ್ಯ ಹೊಂಗನೂರು, ಶಿಬಿರದ ಸಂಯೋಜಕಿ ಪ್ರೊ.ಎಸ್.ಡಿ.ಶಶಿಕಲಾ ಇತರರು ಉಪಸ್ಥಿತರಿದ್ದರು.

## ಎಂಎಲ್‌ಸಿ ರಘು ಕೌಟಿಲ್ಯ | ಚಾ.ನಗರದಲ್ಲಿ ಕಾಯಕ ಸಮಾಜದ ಮುಖಂಡರು ಹಾಗು ಬಿಜೆಪಿ ಪದಾಧಿಕಾರಿಗಳ ಸಭೆ

# ಮೈಸೂರಿನಲ್ಲಿ ಜು.11ರಂದು ಕಾಯಕ ಸಮಾಜಗಳ ಬೃಹತ್ ಸಮಾವೇಶ



ಚಾಮರಾಜನಗರ, ಮೈಸೂರಿನಲ್ಲಿ ಇದೇ ಜುಲೈ 11 ರಂದು ಕಾಯಕ ಸಮಾಜಗಳ ಬೃಹತ್ ಸಮಾವೇಶವನ್ನು ಹಮ್ಮಿಕೊಂಡಿದ್ದು, ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾಯಕ ಸಮಾಜದ ಬಂಧುಗಳು ಭಾಗವಹಿಸಬೇಕೆಂದು ವಿಧಾನ ಪರಿಷತ್ ನೂತನ ಸದಸ್ಯ ರಘು ಕೌಟಿಲ್ಯ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸಾಯಂಕಾಲ ನಡೆದ ಕಾಯಕ ಸಮಾಜದ ಬಂಧುಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮೈಸೂರಿನ ವಸ್ತು ಪ್ರದರ್ಶನ ಮೈಧಾನದಲ್ಲಿರುವ ಜೆ.ಕೆ. ಸಭಾಂಗಣದಲ್ಲಿ ಅಂದು ಬೆಳಗ್ಗಿ 10.30ಕ್ಕೆ ಕಾಯಕ ಸಮಾಜಗಳ ಒಕ್ಕೂಟದಿಂದ ವತಿಯಿಂದ ನಡೆಯುವ ಸಮಾವೇಶವನ್ನು ಬಿಜೆಪಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಉದ್ಗಾಟಲಿದ್ದಾರೆ. ವಿರೋಧ ಪಕ್ಷದ ನಾಯಕರಾದ ಆರ್. ಆಶೋಕ್, ಛಲವಾದಿ ನಾರಾಯಣಸ್ವಾಮಿ, ಪಕ್ಷದ ಅನೇಕ ಹಿಂದುಳಿದ ವರ್ಗಗಳ ನಾಯಕರು ಹಾಗೂ ಕಾಯಕ ಸಮಾಜದ ಗಣ್ಯರು ಭಾಗವಹಿಲಿಸಲಿದ್ದಾರೆ. ಇದೊಂದು ಪಕ್ಷಾತೀತ ಕಾರ್ಯಕ್ರಮವಾಗಿದ್ದು, ರಾಜ್ಯದಲ್ಲಿರುವ ಸಣ್ಣ ಪುಟ್ಟ ಸಮುದಾಯಗಳನ್ನು ಗುರುತಿಸಿ ಅವರಿಗೆ ರಾಜಕೀಯ ಅಧಿಕಾರ ನೀಡುವ ಜೊತೆಗೆ ಅವರನ್ನು ಸಮಾಜದ ಮುಖ್ಯವಾಹಿನಿ ತರುವ ಸಲುವಾಗಿ ಈ ಸಮಾವೇಶ ಅತ್ಯಂತ ಪ್ರಮುಖ್ಯತೆಯನ್ನು ಪಡೆದುಕೊಂಡಿದೆ. ಹೀಗಾಗಿ ಜಿಲ್ಲೆಯಲ್ಲಿರುವ ಎಲ್ಲಾ ಕಾಯಕ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು.

ಬಿಜೆಪಿ ಧ್ವನಿ ಇಲ್ಲದವರಿಗೆ ಧ್ವನಿ ನೀಡುವ ಪಕ್ಷವಾಗಿದೆ. ಲೋಕ ಸೌಧ ಹಾಗೂ ವಿಧಾನಸೌಧಕ್ಕೆ ಹೋಗಲು ಸಾಧ್ಯವಾಗದ ಅನೇಕ ಸಣ್ಣಪುಟ್ಟ ಸಮುದಾಯಗಳನ್ನು ಗುರುತಿಸಿ ಅವರಿಗೆ ಅವಕಾಶ ಕಲ್ಪಿಸಿಕೊಟ್ಟಿದೆ. ಇದರಲ್ಲಿ ನಾನು ಸಹ ಒಬ್ಬ ನಾಗಿದ್ದು, ಮಡಿವಾಳ ಸಮಾಜದ ನನ್ನನ್ನು ಬಿಜೆಪಿ ವರಿಷ್ಠರು ಗುರುತಿಸಿ, ವಿಧಾನ ಪರಿಷತ್‌ಗೆ ಕಳುಹಿಸಿಕೊಟ್ಟಿದ್ದಾರೆ. ಅದೇ ರೀತಿ ರಾಜ್ಯಸಭೆಗೆ ನಾಗರಾಜು ಅವರನ್ನು ವಿಧಾನ ಪರಿಷತ್ ಗೆ ಇನ್ನು ಅನೇಕರು ಹಿಂದುಳಿದ ಸಮುದಾಯಗಳ ಮುಖಂಡರನ್ನು ಕಳುಹಿಸಿಕೊಟ್ಟಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಅತ್ಯಂತ ಸಣ್ಣ ಸಮಾಜದವರು. ಹೀಗಾಗಿ ಬಿಜೆಪಿಯ ಇಂಥ ಕಾರ್ಯವನ್ನು ಗುರುತಿಸಿ, ಪಕ್ಷವನ್ನು ಬೆಂಬಲಿಸಿ, ಮುಂದಿನ ಚುನಾವಣೆಯಲ್ಲಿ ಶಕ್ತಿ ತುಂಬುವ ಕೆಲಸವನ್ನು ಕಾಯಕ ಸಮಾಜದವರು ಮಾಡಬೇಕಾಗಿದೆ. ಇದರಿಂದ ಈ ಸಮಾವೇಶ ಮಹತ್ವ ಪೂರ್ಣವಾಗಿದೆ ಎಂದು ರಘುಕೌಟಿಲ್ಯ ತಿಳಿಸಿದರು.

ಜಿ.ಪಂ.ಮಾಜಿ ಸದಸ್ಯ ಬಾಲರಾಜು ಮಾತನಾಡಿ, ಬಿಜೆಪಿ ಮೇಲ್ವರ್ಗದ ಪಕ್ಷ ಎಂದು ವಿರೋಧ ಪಕ್ಷಗಳು ಅರೋಪ ಮಾಡುತ್ತಾರೆ. ಅದರೆ ಅವರು ಇಂಥ ಸಮಾಜಗಳನ್ನು ಗುರುತಿಸಿ ಅಧಿಕಾರ ನೀಡಿರುವುದೇ ವಿರಳ. ಹೀಗಾಗಿ ಕಾಯಕ ಸಮಾಜದ ಬಂಧುಗಳು ವಿಧಾನ ಪರಿಷತ್ ಸದಸ್ಯ ರಘು ಕೌಟಿಲ್ಯ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಸಮಾವೇಶದಲ್ಲಿ ಭಾಗವಹಿಸಿಬೇಕಾಗಿದೆ. ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ. ವೃಷಬೇಂದ್ರಪ್ಪ ಮಾತನಾಡಿ, ವಿಧಾನ ಪರಿಷತ್‌ಗೆ ಆಯ್ಕೆಯಾಗಿರುವ ರಘು ಕೌಟಿಲ್ಯ ಅವರು ಸಂಘಟನಾಕಾರರು ಮೈಸೂರಿಗಿಂತ ಹೆಚ್ಚಾಗಿ ಚಾಮರಾಜನಗರ ಜಿಲ್ಲೆಯಲ್ಲಿ ಪಕ್ಷವನ್ನು ಸಂಘಟನೆ ಮಾಡಲು ಉತ್ಸುಕರರಾಗಿದ್ದಾರೆ. ನಮ್ಮಜಿಲ್ಲೆಯಲ್ಲಿ ಬಿಜೆಪಿಯಿಂದ ಯಾವುದೇ ಎಂಪಿ. ಎಂಎಲ್‌ಎ ಇಲ?ಲ. ಹೀಗಾಗಿ ಅವರು ಪಕ್ಷ ಸಂಘಟನೆ ಮತ್ತು ಕಾರ್ಯಕರ್ತರ ಹಿತದೃಷ್ಟಿಯಿಂದ ಜಿಲ್ಲೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಸಭೆಯಲ್ಲಿ ಸಮಾವೇಶ ಉಸ್ತುವಾರಿ ಸುರೇಶ್ ಬಾಬು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮೂಡ್ನಾಕೂಡು ಪ್ರಕಾಶ್, ಹೊನ್ನೂರು ಮಹದೇವಸ್ವಾಮಿ, ಓಬಿಸಿ ಜಿಲ್ಲಾಧ್ಯಕ್ಷ ಜನಧ್ವನಿ ವೆಂಕಟೇಶ್, ಬಿಜೆಪಿ ಮುಖಂಡರಾದ ಕೋಡಿಉಗನೆ ಮಂಜು, ಯುವ ಮೋರ್ಚಾ ಅಧ್ಯಕ್ಷ ಸೂರ್ಯ ಬಾಲರಾಜ್, ಜಿಲ್ಲಾ ಎಸ್ಸಿಮೋರ್ಚಾ ಪ್ರಧಾನ ಕಾರ್ಯದರ್ಶಿ ರಾಮಸಮುದ್ರ ಶಿವಣ್ಣ, ಜಿಲ್ಲಾ ಸಹ ವಕ್ತಾರ ಮಂಜುನಾಥ್, ಸಹ ಪ್ರಮುಖ್ ವಿರೇಂದ್ರ, ಉತ್ತುವಳ್ಳಿ ಮಹೇಶ್, ಮಡಿವಾಳ ಸಮಾಜದ ತಾಲೂಕು ಅಧ್ಯಕ್ಷ ರಮೇಶ್, ಕೇಬಲ್ ರಂಗಸ್ವಾಮಿ, ಮೊದಲಾದದವರು ಹಾಜರಿದ್ದರು.

# ಮೈಷುಗರ್ ಬಾಯ್ಲರ್‌ಗೆ ಅಗ್ನಿ ಸ್ಪರ್ಶ

## ಜುಲೈ 15 ರಿಂದ ಕಬ್ಬು ಅರೆಯುವಿಕೆ ಪ್ರಾರಂಭ: 5.44 ಲಕ್ಷ ಟನ್ ಅರೆಯುವ ಗುರಿ

**ಮಂಡ್ಯ:** ರೈತರ ಜೀವನಾಡಿ ಮೈಷುಗರ್ ಕಾರ್ಖಾನೆಯ ಬಾಯ್ಲರ್‌ಗೆ ಇಂದು ಅಗ್ನಿ ಸ್ಪರ್ಶ ಮಾಡಲಾಗಿದ್ದು, ಜುಲೈ 15 ರಿಂದ ಕಬ್ಬು ಅರೆಯುವಿಕೆ ಪ್ರಾರಂಭವಾಗಲಿದ್ದು ಜಿಲ್ಲಾಧಿಕಾರಿಗಳಾದ ಡಾ. ಕುಮಾರ ಹಾಗೂ ಮೈಷುಗರ್ ಅಧ್ಯಕ್ಷ ಸಿ.ಡಿ. ಗಂಗಾಧರ್, ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಸಚಿನ್ ಚಲುವರಾಯಸ್ವಾಮಿ ಹಾಗೂ ಕಾರ್ಖಾನೆಯ ವ್ಯವಸ್ಥಾಪಕ ಮಂಗಲ್ ದಾಸ್ ಅವರು ಬಾಯ್ಲರ್‌ಗೆ ಅಗ್ನಿ ಸ್ಪರ್ಶ ಮಾಡುವ ಮೂಲಕ ಅಧಿಕೃತವಾಗಿ ಕಾರ್ಖಾನೆಯ ಆರಂಭಕ್ಕೆ ಚಾಲನೆ ನೀಡಿದರು.



ಬಳಿಕ ಕಾರ್ಖಾನೆಯ ಎ ಮಿಲ್‌ಗೆ ಕಬ್ಬನ್ನು ಹಾಕುವ ಮೂಲಕ ಕಬ್ಬು ಅರೆಯುವಿಕೆಗೆ ತಾತ್ಕಾಲಿಕವಾಗಿ ಚಾಲನೆ ನೀಡಲಾಗಿದ್ದು, ಜುಲೈ ಅಧಿಕೃತವಾಗಿ ಆರಂಭವಾಗಲಿದೆ.

ಈ ಸಂದರ್ಭ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಜುಲೈ 15 ರಿಂದ ಕಬ್ಬು ಅರೆಯುವಿಕೆಯನ್ನು ಕಡ್ಡಾಯವಾಗಿ ಆರಂಭಿಸಬೇಕೆಂದು ಆಡಳಿತ ಮಂಡಳಿಗೆ ಸೂಚನೆ ನೀಡಲಾಗಿದ್ದು, ಕಾರ್ಖಾನೆಯು ಸುಸ್ಥಿತಿಯಲ್ಲಿದ್ದು 'ಎ' ಮಿಲ್‌ನಲ್ಲಿ ಕಬ್ಬು ನುರಿಸಲಾಗುವುದು. ಪ್ರತಿನಿತ್ಯ 5 ಸಾವಿರ ಟನ್ ಕಬ್ಬು ಅರೆಯುವ ಸಾಮರ್ಥ್ಯವನ್ನು ಎ ಮಿಲ್ ಹೊಂದಿದ್ದು, ಪ್ರಸಕ್ತ ಸಾಲಿನಲ್ಲಿ 5.44 ಲಕ್ಷ ಟನ್ ಕಬ್ಬನ್ನು ರೈತರಿಂದಿ ಒಪ್ಪಿಗೆ ಮಾಡಿಕೊಳ್ಳಲಾಗಿದ್ದು, ನವೆಂಬರ್ ಅಂತ್ಯದೊಳಗೆ ಎಲ್ಲ ಕಬ್ಬನ್ನು ಅರೆಯುವ ಗುರಿ ಹೊಂದಲಾಗಿದೆ ಎಂದು ಆಡಳಿತ ಮಂಡಳಿ ತಿಳಿಸಿದೆ ಎಂದರು.

ಕಾರ್ಖಾನೆಯ ಅಧ್ಯಕ್ಷ ಸಿ.ಡಿ. ಗಂಗಾಧರ್ ಅವರು ಮಾತನಾಡಿ, ಕಾರ್ಖಾನೆಯನ್ನು ಎಲ್ಲ ರೀತಿಯಲ್ಲೂ ಸಜ್ಜುಗೊಳಿಸಲಾಗಿದೆ. ಪ್ರತಿನಿತ್ಯ 3,500 ಟನ್ ಕಬ್ಬು ಅರೆಯುವ ಗುರಿ ಹೊಂದಲಾಗಿದೆ. ಶೇ. 8.5ರಷ್ಟು ಸಕ್ಕರೆ ಇಳುವರಿ ನಿರೀಕ್ಷಿಸಲಾಗಿದೆ. ಕಳೆದ ವರ್ಷ ಕಬ್ಬು ಪೂರೈಸಿದ ಎಲ್ಲ ರೈತರಿಗೂ ಕಬ್ಬಿನ ಹಣವನ್ನು ಪಾವತಿಸಲಾಗಿದೆ. ಈ ವರ್ಷ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ 15 ದಿನದೊಳಗೆ ಹಣವನ್ನು ಬಟವಾಡೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಇದೇ ಸಂದರ್ಭ ಕಳೆದ ಸಾಲಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಸರ್ಕಾರದ ಆದೇಶದಂತೆ 50 ರೂ. ಪ್ರೋತ್ಸಾಹ ಧನದ ಚೆಕ್ ಅನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್, ರೈತ ಮುಖಂಡರು ಹಾಜರಿದ್ದರು.

# ಅಣಕು ಪರೀಕ್ಷೆಗಳೇ ಯಶಸ್ಸಿನ ಮೆಟ್ಟಿಲು: ನಿತೀಶ್ ಪಾಟೀಲ್

**ಮೈಸೂರು:** ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಶಿಸ್ತುಬದ್ಧ ಅಧ್ಯಯನದ ಜೊತೆಗೆ ಅಣಕು (ಮಾಕ್) ಪರೀಕ್ಷೆಗಳನ್ನು ನಿಯಮಿತವಾಗಿ ಬರೆಯುವುದು ಅತ್ಯಗತ್ಯ ಎಂದು ಮೈಸೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿ ಹಾಗೂ ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷ ನಿತೀಶ್ ಪಾಟೀಲ್ ಹೇಳಿದರು.

ನಗರ ಕೇಂದ್ರ ಗ್ರಂಥಾಲಯ ಮತ್ತು ಜ್ಞಾನಗಂಗೋತ್ರಿ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದ ಸಹಯೋಗದಲ್ಲಿ ಆಯೋಜಿಸಿದ್ದ ಕರ್ನಾಟಕ ರಾಜ್ಯ ಪೊಲೀಸ್ ಸಿವಿಲ್ ಕಾನ್ಸ್‌ಟೇಬಲ್ ನೇಮಕಾತಿ ಅಣಕು ಪರೀಕ್ಷೆ ಉದ್ಘಾಟಿಸಿ ಅವರು ಮಾತನಾಡಿದರು.

ಅಭ್ಯರ್ಥಿಗಳು ಮನೆಯಲ್ಲಿ ಎಷ್ಟೇ ಓದಿದರೂ ಪರೀಕ್ಷಾ ಕೇಂದ್ರದ ವಾತಾವರಣ, ಸಮಯ ನಿರ್ವಹಣೆ ಹಾಗೂ ಒತ್ತಡವನ್ನು ಎದುರಿಸಲು ಅಣಕು ಪರೀಕ್ಷೆಗಳು ಸಹಕಾರಿಯಾಗುತ್ತವೆ. ಅಧ್ಯಯನದ ಒಟ್ಟು ಸಮಯದಲ್ಲಿ ಕನಿಷ್ಠ 30 ಶೇಕಡಾ ಸಮಯವನ್ನು ಮಾಕ್ ಟೆಸ್ಟ್‌ಗಳಿಗೆ ಮೀಸಲಿಡಬೇಕು ಎಂದು ಸಲಹೆ ನೀಡಿದರು. ಅಭ್ಯರ್ಥಿಗಳು ದಿನಕ್ಕೆ 12–16 ಗಂಟೆ ಓದಿದರೂ ಅಣಕು ಪರೀಕ್ಷೆಗಳನ್ನು ಬರೆಯದಿದ್ದರೆ ಯಶಸ್ಸು ಕಷ್ಟವಾಗುತ್ತದೆ. ಸಣ್ಣಪುಟ್ಟ ತಪ್ಪುಗಳನ್ನು ಮೊದಲೇ ಗುರುತಿಸಿ ತಿದ್ದಿಕೊಳ್ಳುವುದರಿಂದ ನೈಜ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಬಹುದು ಎಂದು ಹೇಳಿದರು.



ಸರ್ಕಾರಿ ಉದ್ಯೋಗ ಪಡೆಯಲು ಕಠಿಣ ಪರಿಶ್ರಮಕ್ಕೆ ಪರ್ಯಾಯವಿಲ್ಲ. ಸಿವಿಲ್ ಕಾನ್ಸ್‌ಟೇಬಲ್ ಹುದ್ದೆಯಿಂದ ಆರಂಭಿಸಿ ಮುಂದೆ ಪಿಎಸ್‌ಐ, ಐಪಿಎಸ್ ಸೇರಿದಂತೆ ಉನ್ನತ ಹುದ್ದೆಗಳನ್ನು ಅಲಂಕರಿಸುವ ಅವಕಾಶಗಳಿವೆ ಎಂದು ತಿಳಿಸಿದರು.

ಇಂಗ್ಲಿಷ್ ಭಾಷೆ ಬಾರದಿದ್ದರೂ ಹಿಂಜರಿಯಬೇಕಿಲ್ಲ. ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿದ ಅನೇಕರು ಯುಪಿಎಸ್‌ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಿದ್ದಾರೆ. ಭಾಷೆಗಿಂತ ಪರಿಶ್ರಮ ಮತ್ತು ನಿರಂತರ ಅಭ್ಯಾಸವೇ ಮುಖ್ಯ ಎಂದು ಅವರು ಅಭಿಪ್ರಾಯಪಟ್ಟರು.

ಸ್ಪರ್ಧಾತ್ಮಕ ಪರೀಕ್ಷೆಗಳ ಫಲಿತಾಂಶ ತಕ್ಷಣ ಸಿಗುವುದಿಲ್ಲ. ದೀರ್ಘಕಾಲದ ನಿರಂತರ ಪ್ರಯತ್ನ, ಶಿಸ್ತು ಹಾಗೂ ಅಣಕು ಪರೀಕ್ಷೆಗಳ ಮೂಲಕ ತಮ್ಮ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಬೇಕು ಎಂದು ಅಭ್ಯರ್ಥಿಗಳಿಗೆ ಕರೆ ನೀಡಿದರು.

# ಕಬ್ಬು ನುರಿಯುವಿಕೆ ಶೀಘ್ರ ಆರಂಭ: ಪರ್ಯಾಯ ಬೆಳೆಗೆ ಜಿಲ್ಲಾಧಿಕಾರಿಗಳ ಸಲಹೆ



**ಮಂಡ್ಯ:** ಮುಂಗಾರು ಹಂಗಾಮು, ಕಬ್ಬು ಬೆಳೆಗಾರರ ಸಮಸ್ಯೆಗಳು, ನೀರಿನ ಲಭ್ಯತೆ, ಬೆಳೆ ವಿಮೆ ಸೇರಿದಂತೆ ರೈತರ ವಿವಿಧ ಸಮಸ್ಯೆಗಳ ಕುರಿತು ಚರ್ಚಿಸಲು ಜಿಲ್ಲಾಡಳಿತದಿಂದ ಸಭೆ ಆಯೋಜಿಸಲಾಗಿತ್ತು.

ಸಭೆಯಲ್ಲಿ ಜಿಲ್ಲೆಯ ವಿವಿಧ ರೈತ ಸಂಘಟನೆಗಳ ಮುಖಂಡರು ಭಾಗವಹಿಸಿ ತಮ್ಮ ಅಭಿಪ್ರಾಯಗಳು ಹಾಗೂ ಮನವಿಗಳನ್ನು ಸಲ್ಲಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಅಗತ್ಯವಿರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ. ಜಿಲ್ಲೆಯಲ್ಲಿ ಸುಮಾರು 30 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದ್ದು, ರೈತರಿಗೆ ಅಗತ್ಯ ಕೃಷಿ ಪರಿಕರಗಳ ಸಮರ್ಪಕ ಪೂರೈಕೆಗೆ ಜಿಲ್ಲಾಡಳಿತ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಸಕ್ಕರೆ ಕಾರ್ಖಾನೆಗಳಲ್ಲಿ ಈ ವಾರದಿಂದಲೇ ಕಬ್ಬು ನುರಿಯುವ ಕಾರ್ಯವನ್ನು* ಆರಂಭಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಕಬ್ಬು ಬೆಳೆಗಾರರಿಗೆ ರಾಜ್ಯ ಸರ್ಕಾರದ ಪಾಲಿನ ಪ್ರತಿ ಟನ್‌ಗೆ ?50 ಪ್ರೋತ್ಸಾಹಧನಕ್ಕಾಗಿ ಈಗಾಗಲೇ ?10.30 ಕೋಟಿ ಬಿಡುಗಡೆ ಮಾಡಲಾಗಿದೆ. ಸಕ್ಕರೆ ಕಾರ್ಖಾನೆಗಳ ಪಾಲಿನ ?50 ಪಾವತಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣ ಇರುವ ಹಿನ್ನೆಲೆಯಲ್ಲಿ, ರೈತರ ಹಿತದೃಷ್ಟಿಯಿಂದ ಪ್ರಕರಣವನ್ನು ಹಿಂಪಡೆದು ತಮ್ಮ ಪಾಲಿನ ಮೊತ್ತವನ್ನು ಶೀಘ್ರ ಪಾವತಿಸುವಂತೆ ಸಕ್ಕರೆ ಕಾರ್ಖಾನೆಗಳಿಗೆ ಮನವಿ ಮಾಡಲಾಗಿದೆ.

ಆಗಸ್ಟ್ ಮೊದಲನೇ ವಾರದವರೆಗೆ ಬಿತ್ತನೆಗೆ ಅವಕಾಶವಿರುವ ಹಿನ್ನೆಲೆಯಲ್ಲಿ, ಮಳೆ ಪರಿಸ್ಥಿತಿಯನ್ನು ಅವಲೋಕಿಸಿ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಪರ್ಯಾಯ ಬೆಳೆ ಯೋಜನೆ ಸಿದ್ಧಪಡಿಸಿ ರೈತರಿಗೆ ವ್ಯಾಪಕ ಜಾಗೃತಿ ಮೂಡಿಸಲಾಗುವುದು. ಅಗತ್ಯ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಸಮರ್ಪಕ ಲಭ್ಯತೆ ಖಚಿತಪಡಿಸಿಕೊಳ್ಳುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಕುಡಿಯುವ ನೀರಿನ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು 6ನೇ ಹಂತದ ಕುಡಿಯುವ ನೀರಿನ ಯೋಜನೆಗೆ ರೈತರು ಸಹಕಾರ ನೀಡುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಕೃಷ್ಣರಾಜಸಾಗರ (ಕೆಆರ್‌ಎಸ್) ಅಣೆಕಟ್ಟೆಯಲ್ಲಿ ನೀರಿನ ಸಂಗ್ರಹ ಸದ್ಯಕ್ಕೆ ಕಡಿಮೆ ಇರುವುದರಿಂದ ಸದ್ಯ ಕೃಷಿ ಬೆಳೆಗಳಿಗೆ ನೀರು ಹರಿಸುವುದು ಸಾಧ್ಯವಾಗುತ್ತಿಲ್ಲ. ಲಭ್ಯವಿರುವ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕೇ ಬಳಸಲಾಗುತ್ತಿದ್ದು, ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗಿದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆ ನೋಂದಣಿಗೆ ಹೆಚ್ಚಿನ ರೈತರು ಸೇರ್ಪಡೆಯಾಗುವಂತೆ ಜಾಗೃತಿ ಮೂಡಿಸಲು ಸೂಚಿಸಲಾಗಿದೆ. ಈಗಾಗಲೇ ಜಿಲ್ಲೆಯಲ್ಲಿ ಸುಮಾರು 11 ಸಾವಿರ ರೈತರು ನೋಂದಣಿ ಮಾಡಿಕೊಂಡಿದ್ದು, ಇನ್ನಷ್ಟು ರೈತರು ಯೋಜನೆಯ ಪ್ರಯೋಜನ ಪಡೆಯುವಂತೆ ಕ್ರಮ ಕೈಗೊಳ್ಳಲಾಗುವುದು.

ರೈತರಿಗೆ ಪ್ರತಿದಿನ ಬೆಳಿಗ್ಗೆ ಹಾಗೂ ಸಂಜೆ ತಲಾ 7 ಗಂಟೆಗಳ ಕಾಲ ನಿರಂತರ ವಿದ್ಯುತ್ ಪೂರೈಕೆ *ಬೆಳಗಿನ ಅವಧಿಯಲ್ಲಿ ವಿದ್ಯುತ್ ಪೂರೈಕೆಗೆ ಆದ್ಯತೆ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಸಭೆಯಲ್ಲಿ ಕೃಷಿ ಇಲಾಖೆ, ಚೆಸ್ಕಾಂ, ತೋಟಗಾರಿಕೆ, ನೀರಾವರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲೆಯ ವಿವಿಧ ರೈತ ಸಂಘಟನೆಗಳ ಪದಾಧಿಕಾರಿಗಳು ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು. ರೈತರ ಸಮಸ್ಯೆಗಳು ಹಾಗೂ ಕೃಷಿ ಸಂಬಂಧಿತ ವಿಷಯಗಳ ಕುರಿತು ಸಮಗ್ರವಾಗಿ ಚರ್ಚಿಸಿ, ಅಗತ್ಯ ಸಲಹೆ–ಸೂಚನೆಗಳನ್ನು ನೀಡಿದರು

# ಇಂದು ಬೆಂಗಳೂರಿನಲ್ಲಿ ಪಿಯು ಉಪನ್ಯಾಸಕರ ಬೃಹತ್ ಪ್ರತಿಭಟನೆ

**ಮಂಡ್ಯ:** ಕರ್ನಾಟಕ ಸರ್ಕಾರ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು 9 ಮತ್ತು 10ನೇ ತರಗತಿಗಳ ವಿದ್ಯಾರ್ಥಿಗಳಿಗೆ ಬೋಧನೆ ಮಾಡುವಂತೆ ನಿರ್ದೇಶಿಸುವ ಕರಡು ಅಧಿಸೂಚನೆಯನ್ನು ಹಿಂಪಡೆಯುವಂತೆ ಆಗ್ರಹಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಜುಲೈ 9 ರ ಗುರುವಾರ ಬೃಹತ್ ಪ್ರತಿಭಟನೆಯನ್ನು ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದೆ.

ರಾಜ್ಯಾದ್ಯಂತ ಸುಮಾರು ಐದು ಸಾವಿರಕ್ಕೂ ಹೆಚ್ಚು ಉಪನ್ಯಾಸಕರು ಪ್ರತಿಭಟನೆಯಲ್ಲಿ ಭಾಗವಹಿಸುತ್ತಿದ್ದು, ಮಂಡ್ಯ ಜಿಲ್ಲೆಯಿಂದ 300 ಕ್ಕೂ ಹೆಚ್ಚು ಉಪನ್ಯಾಸಕರು ಕಾಲೇಜಿಗೆ ಸಾಮೂಹಿಕ ರಜೆ ಹಾಕಿ ಸರ್ಕಾರದ ಗಮನ ಸೆಳೆಯಲು ಪ್ರತಿಭಟನೆಯಲ್ಲಿ ಭಾಗವಹಿಸುತ್ತಿದ್ದಾರೆ.

ಸರ್ಕಾರಿ/ಅನುದಾನಿತ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಪ್ರೌಢಶಾಲೆಯ ಒಂಬತ್ತು ಮತ್ತು ಹತ್ತನೇ ತರಗತಿಗೆ ಪಾಠ ಮಾಡಬೇಕೆಂದು ಆದೇಶ ಮಾಡಲು ಕರಡು ಅಧಿಸೂಚನೆ ಹೊರಡಿಸಿರುತ್ತದೆ. ಈ ಪ್ರಸ್ತಾಪಿತ ತಿದ್ದುಪಡಿಯು ಕೇವಲ ಕರ್ತವ್ಯ ಹಂಚಿಕೆಯ ವಿಷಯವಾಗಿರದೇ ಇಡೀ ಪದವಿ ಪೂರ್ವ ಶಿಕ್ಷಣ ವ್ಯವಸ್ಥೆಯನ್ನು ಸಂಪೂರ್ಣ ದುರ್ಬಲಗೊಳಿಸುವುದಾಗಿದೆ.

ಶಿಕ್ಷಣ ತಜ್ಞರು ಪ್ರಸ್ತಾಪಿಸಿ ದೂರದೃಷ್ಟಿಯಿಂದ ರಚಿಸಿರುವ ದೇಶದಲ್ಲೇ ಖ್ಯಾತಿ ಪಡೆದಿರುವ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಸ್ಮಿತೆಯನ್ನೇ ಬುಡಮೇಲು ಮಾಡುವ ಆದೇಶವಾಗುತ್ತದೆ ಮತ್ತು ಇದು ಬಡ್ತಿ ವ್ಯವಸ್ಥೆ, ಸೇವಾ ನಿಯಮಗಳು, ವೃಂದದ ಸ್ವತಂತ್ರತೆ, ಆಡಳಿತಾತ್ಮಕ ಸಮಸ್ಯೆ, ಶಿಕ್ಷಣದ ಗುಣಮಟ್ಟ ಹಾಗೂ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಬದಲಾವಣೆಯಾಗಿದೆ.

ಆದ್ದರಿಂದ ಈ ಕರಡು ಅಧಿಸೂಚನೆ ಸಾರ್ವಜನಿಕರಿಂದ ಉಪನ್ಯಾಸಕ ವರ್ಗದಿಂದ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಈ ಕಾರಣಗಳಿಂದ ಕರಡು ತಿದ್ದುಪಡಿಯನ್ನು ಮರುಪರಿಶೀಲಿಸಿ, ಪದವಿ ಪೂರ್ವ ಉಪನ್ಯಾಸಕರನ್ನು 9ನೇ ಮತ್ತು 10ನೇ ತರಗತಿಗಳ ಬೋಧನೆಗೆ ಕಡ್ಡಾಯವಾಗಿ ನಿಯೋಜಿಸುವ ಪ್ರಸ್ತಾವನೆಯನ್ನು ಕೈಬಿಡಬೇಕೆಂದು ಸರ್ಕಾರದ ಮೇಲೆ ಒತ್ತಡ ಹೇರಲು ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ (ರಿ), ಬೆಂಗಳೂರು,ಇವರು ಕರೆನೀಡಿರುವ ಬೃಹತ್ ಪ್ರತಿಭಟನೆಗೆ ಮಂಡ್ಯ ಜಿಲ್ಲಾ ಶಾಖೆ ಸಂಪೂರ್ಣ ಬೆಂಬಲ ನೀಡಿದ್ದು ಉಪನ್ಯಾಸಕರೆಲ್ಲರೂ ಭಾಗವಹಿಸಬೇಕೆಂದು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ

# ಮಹಿಳೆ–ಮಕ್ಕಳ ಸುರಕ್ಷತೆಗೆ ಜಿಲ್ಲಾದ್ಯಂತ ವಿಶೇಷ ಕ್ರಮ

**ಮೈಸೂರು:** ಕೌಟುಂಬಿಕ ಕಲಹ, ವರದಕ್ಷಿಣೆ ಕಿರುಕುಳ, ಲೈಂಗಿಕ ದೌರ್ಜನ್ಯ ಹಾಗೂ ಅತ್ಯಾಚಾರ ಪ್ರಕರಣಗಳಿಂದ ನೊಂದ ಮಹಿಳೆಯರ ನೆರವಿಗಾಗಿ ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲೂ ಸ್ವಯಂಸೇವಾ ಸಂಸ್ಥೆಗಳ ಸಹಯೋಗದೊಂದಿಗೆ 24/7 ಉಚಿತ ಕಾನೂನು ಸಲಹೆ, ಸಮಾಲೋಚನೆ ಹಾಗೂ ಅಗತ್ಯ ನೆರವು ಒದಗಿಸಲಾಗುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದರು.



ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಒನ್ ಸ್ಟಾಪ್ ಸೆಂಟರ್ ಮೂಲಕ ಮಹಿಳೆಯರಿಗೆ ಹಾಗೂ ಬಾಲಕಿಯರಿಗೆ ಕಾನೂನು ನೆರವು, ಪೊಲೀಸ್ ಸಹಾಯ, ವೈದ್ಯಕೀಯ ಸೇವೆ, ಮಾನಸಿಕ ಸಮಾಲೋಚನೆ ಹಾಗೂ ಐದು ದಿನಗಳ ತಾತ್ಕಾಲಿಕ ಆಶ್ರಯವನ್ನು ಒಂದೇ ಸೂರಿನಡಿ ಉಚಿತವಾಗಿ ನೀಡಲಾಗುತ್ತಿದೆ ಎಂದರು.

ಜಿಲ್ಲೆಯ ಬೆಳವಾಡಿ ಹಾಗೂ ಹೂಟಗಳ್ಳಿಯಲ್ಲಿ ಉದ್ಯೋಗಸ್ಥ ಮಹಿಳೆಯರಿಗಾಗಿ ಸುರಕ್ಷಿತ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಗ್ರಾಮೀಣ ಪ್ರದೇಶಗಳಿಂದ ನಗರಕ್ಕೆ ಉದ್ಯೋಗಕ್ಕಾಗಿ ಬರುವ ಮಹಿಳೆಯರಿಗೆ ಅನುಕೂಲವಾಗುತ್ತಿದೆ ಎಂದು ಹೇಳಿದರು.

ಉದ್ಯೋಗಸ್ಥ ತಾಯಂದಿರ ಮಕ್ಕಳ ಆರೈಕೆಗಾಗಿ ಜಿಲ್ಲೆಯಲ್ಲಿ ನಾಲ್ಕು ಶಿಶು ಪಾಲನಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಮಕ್ಕಳಿಗೆ ಪೌಷ್ಟಿಕ ಆಹಾರ, ಪ್ರಾಥಮಿಕ ಶಿಕ್ಷಣ ಹಾಗೂ ಆರೈಕೆಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು. ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ ಅಡಿಯಲ್ಲಿ ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ನೇರ ಹಣ ವರ್ಗಾವಣೆ ಮೂಲಕ ಆರ್ಥಿಕ ನೆರವು ನೀಡಲಾಗುತ್ತಿದೆ. ಅಂಗನವಾಡಿಯಲ್ಲಿ ನೋಂದಾಯಿಸಿದ ಅರ್ಹ ಫಲಾನುಭವಿಗಳಿಗೆ ಹಂತ ಹಂತವಾಗಿ ರೂ.5,000 ಹಾಗೂ ಎರಡನೇ ಹೆಣ್ಣು ಮಗುವಿಗೆ ರೂ.6,000 ಪ್ರೋತ್ಸಾಹಧನ ನೀಡಲಾಗುತ್ತಿದೆ ಎಂದು ವಿವರಿಸಿದರು.

'ಬೇಟಿ ಬಚಾವೋ ಬೇಟಿ ಪಡಾವೋ' ಅಭಿಯಾನದಡಿ 2026–27ನೇ ಸಾಲಿನಲ್ಲಿ ಜಿಲ್ಲೆಯ 255 ಗ್ರಾಮ ಪಂಚಾಯಿತಿಗಳಲ್ಲಿ ಹೆಣ್ಣು ಭ್ರೂಣಹತ್ಯೆ ತಡೆ, ಹೆಣ್ಣು ಮಕ್ಕಳ ಶಿಕ್ಷಣ ಹಾಗೂ ಲಿಂಗ ಸಮಾನತೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಮಹಿಳೆಯರ ಸುರಕ್ಷತೆಗಾಗಿ ಶಕ್ತಿ ಪಡೆ ಕಾರ್ಯನಿರ್ವಹಿಸುತ್ತಿದ್ದು, ಬಸ್ ನಿಲ್ದಾಣ, ಕಾಲೇಜು, ಜಾತ್ರೆ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಹಾಗೂ ಭದ್ರತಾ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಹುಣಸೂರಿಗೆ ಹೆಚ್ಚುವರಿ ಶಕ್ತಿ ಪಡೆ ಮಂಜೂರು ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆಯಲ್ಲಿ ಸಂಕಷ್ಟದಲ್ಲಿರುವ ಮಹಿಳೆಯರ ಪುನರ್ವಸತಿಗಾಗಿ ಶಕ್ತಿ ಸದನ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ನಂಜನಗೂಡು ತಾಲ್ಲೂಕಿಗೂ ಹೊಸ ಶಕ್ತಿ ಸದನ ಮಂಜೂರು ಮಾಡುವಂತೆ ಶಿಫಾರಸು ಮಾಡಲಾಗಿದೆ ಎಂದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮತದಾರರ ಗಣತಿ ನಮೂನೆ (EF) ಮನೆ ಮನೆಗೆ ವಿತರಿಸುವ ಹಾಗೂ ಡಿಜಿಲೀಕರಣ ಗೊಳಿಸಿರುವ ಕಾರ್ಯ ಪ್ರಗತಿ

**ಮಂಡ್ಯ:** ಜೂನ್ 29 ರಿಂದ 189–ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಮತದಾರರ ಗಣತಿ ನಮೂನೆ (ಇಈ) ಗಳನ್ನು ಮತದಾರರ ಮನೆ–ಮನೆಗೆ ವಿತರಿಸುವ ಹಾಗೂ ಡಿಜಿಟಲೀಕರಣಗೊಳಿಸುವ ಕಾರ್ಯ ಪ್ರಾರಂಭವಾಗಿದ್ದು, ದಿನಾಂಕ ಜುಲೈ 08 ಕ್ಕೆ ಸದರಿ ಕಾರ್ಯದ ಪ್ರಗತಿಯು (189–ಮಂಡ್ಯ )ವಿಧಾನಸಭಾ ಕ್ಷೇತ್ರದ ಒಟ್ಟು ಮತದಾರರ ಸಂಖ್ಯೆ 2,31,769 ಆಗಿದ್ದು,ಸ್ವೀಕೃತವಾಗಿರುವ ಗಣತಿ ನಮೂನೆ (EF) ಸಂಖ್ಯೆ 2,31,332 ಆಗಿರುತ್ತದೆ. ಇದುವರೆವಿಗೂ ಹಂಚಿಕೆಯಾಗಿರುವ ಗಣತಿ ನಮೂನೆ (EF) ಸಂಖ್ಯೆ 2,28,620 ಆಗಿದ್ದು, ಡಿಜಿಟಲೀಕರಣಗೊಂಡಿರುವ ಗಣತಿ ನಮೂನೆ (ಇಈ) ಸಂಖ್ಯೆ37,880 ಆಗಿರುತ್ತದೆ.

ಗೈರುಹಾಜರಿ ಮತದಾರರು 18 ಮತದಾರರಿದ್ದು ಸ್ಥಳಾಂತರಗೊಂಡಿರುವ ಮತದಾರರು 116 ಆಗಿರುತ್ತದೆ ಮತ್ತು ಮರಣ ಹೊಂದಿರುವ ಮತದಾರರ 270 ಆಗಿದೆ ಹಾಗೂ 25 ಮತದಾರರು ನೋಂದಣಿಗೊಂಡಿರುವ ಮತದಾರರಾಗಿರುತ್ತಾರೆ ಎಂದು 189–ಮಂಡ್ಯ ವಿಧಾನಸಭಾ ಕ್ಷೇತ್ರ ಮಂಡ್ಯ ತಾಲ್ಲೂಕು ತಹಸೀಲ್ದಾರ್ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಸಾಪ ಶ್ರೀವಿಜಯ ಸಾಹಿತ್ಯ ದತ್ತಿ ಪ್ರಶಸ್ತಿಗೆ ಸಾಹಿತಿ ಸಜಗೌ ಆಯ್ಕೆ

**ಮಂಡ್ಯ:** ಕನ್ನಡದ ಮೊಟ್ಟಮೊದಲ ಕೃತಿಯಾದ 'ಕವಿರಾಜಮಾರ್ಗ'ದ ಕರ್ತೃ ಶ್ರೀವಿಜಯನ ಗೌರವಾರ್ಥ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಪ್ರತಿವರ್ಷ ನೀಡಲಾಗುವ ರಾಜ್ಯ ಮಟ್ಟದ ಪ್ರತಿಷ್ಠಿತ 'ಶ್ರೀವಿಜಯ ಸಾಹಿತ್ಯ ದತ್ತಿ ಪ್ರಶಸ್ತಿ'ಯು ತಾಲ್ಲೂಕಿನ ಮಂಗಲ ಗ್ರಾಮದ ಸಾಹಿತಿ ಹಾಗೂ ಸಂಘಟಕ ಟಿ. ಸತೀಶ್ ಜವರೇಗೌಡ ಅವರಿಗೆ ದೊರೆತಿದೆ.



ಜಿಲ್ಲಾ ಯುವ ಬರಹಗಾರರ ಬಳಗದ ಸಂಸ್ಥಾಪಕ ಅಧ್ಯಕ್ಷರಾಗಿರುವ ಟಿ. ಸತೀಶ್ ಜವರೇಗೌಡ ಅವರು ವೈವಿಧ್ಯಮಯ ಸಾಹಿತ್ಯಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ ಮೂಲಕ ಕ್ರಿಯಾಶೀಲ ಸಂಘಟಕರಾಗಿ ಗುರುತಿಸಿಕೊಂಡಿದ್ದಾರೆ. ಜೊತೆಗೆ ಸೃಜನಶೀಲ ಸಾಹಿತ್ಯ ಕೃಷಿಯಲ್ಲೂ ತೊಡಗಿ ಹಲವಾರು ಕೃತಿಗಳನ್ನು ರಚಿಸುವ ಮೂಲಕ ಪ್ರತಿಭಾವಂತ ಕವಿಯಾಗಿ ಗಮನಸೆಳೆದಿದ್ದಾರೆ. ಸಾಹಿತ್ಯ ಮತ್ತು ಸಂಘಟನೆಯಲ್ಲಿ ನಾಡಿನ ಉದ್ದಗಲಕ್ಕೂ ಪ್ರಸಿದ್ಧಿ ಪಡೆದಿರುವ ಇವರು, ಮೈಸೂರು ತಾಲ್ಲೂಕಿನ ಮೆಲ್ಲಹಳ್ಳಿಯ ಸರ್ಕಾರಿ ಹಿರಿಯ ಶಾಲೆಯಲ್ಲಿ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತು ತನ್ನ ಶತಮಾನೋತ್ಸವದ ನೆನಪಿಗಾಗಿ ತನ್ನ ಸಂಪನ್ಮೂಲಗಳಿಂದ 20 ಲಕ್ಷ ರೂಪಾಯಿಗಳ ಸ್ಥಾಯಿನಿಧಿಯನ್ನು ಸ್ಥಾಪಿಸಿದ್ದು, ಅದರಿಂದ ಬರುವ ವಾರ್ಷಿಕ ಬಡ್ಡಿಯ ಮೊತ್ತದಲ್ಲಿ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಮೃದ್ಧ ಹಾಗೂ ಮೌಲಿಕವಾದ ಕೊಡುಗೆ ನೀಡಿದ 45 ವಯಸ್ಸಿನ ಮಿತಿಯೊಳಗಿರುವ ಇಬ್ಬರು ಸಾಹಿತಿಗಳಿಗೆ ಪ್ರತಿವರ್ಷ 'ಶ್ರೀವಿಜಯ ಸಾಹಿತ್ಯ ದತ್ತಿ ಪ್ರಶಸ್ತಿ'ಯನ್ನು ರಾಜ್ಯಮಟ್ಟದಲ್ಲಿ ನೀಡುತ್ತಾ ಬಂದಿದ್ದು, 2021 ನೆಯ ಸಾಲಿಗೆ ಮಂಡ್ಯ ಜಿಲ್ಲೆಯಿಂದ ಟಿ. ಸತೀಶ್ ಜವರೇಗೌಡ ಆಯ್ಕೆಯಾಗಿದ್ದಾರೆ. ಇವರೊಂದಿಗೆ ಮಂಗಳೂರಿನ ರವೀಂದ್ರ ನಾಯಕ್ ಸಣ್ಣಕ್ಕಿ ಬೆಟ್ಟು ಅವರುಗೂ ಸಹ ಪ್ರಶಸ್ತಿ ಲಭಿಸಿದೆ. ಈ ಪ್ರಶಸ್ತಿಯು ತಲಾ 60,000 (ಅರವತ್ತು ಸಾವಿರ) ನಗದು, ಸ್ಮರಣಿಕೆ ಹಾಗೂ ಪ್ರಶಸ್ತಿ ಫಲಕವನ್ನು ಹೊಂದಿರುತ್ತದೆ ಎಂದು ಕಸಾಪ ಆಡಳಿತಾಧಿಕಾರಿ ಡಾ. ಕೆ.ಎ. ದಯಾನಂದ ತಿಳಿಸಿದ್ದಾರೆ.

ಇತ್ತೀಚಿಗೆ ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಕಚೇರಿಯಲ್ಲಿ ಆಡಳಿತಾಧಿಕಾರಿ ಡಾ.ಕೆ.ಎ. ದಯಾನಂದ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಎಲ್.ಎನ್. ಮುಕುಂದರಾಜ್, ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಡಾ. ಮನು ಬಳಿಗಾರ್, ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಪ್ರೊ.ಆರ್. ಸುನಂದಮ್ಮ, ಖ್ಯಾತ ಸಾಹಿತಿಗಳಾದ ಡಾ.ಪಿ. ಚಂದ್ರಿಕಾ ಹಾಗೂ ಅಬ್ದುಲ್ ಹೈ. ತೋರಣಗಲ್ಲು ಆಯ್ಕೆ ಸಮಿತಿ ಟಿ. ಸತೀಶ್ ಜವರೇಗೌಡ ಅವರ ಸಾಹಿತ್ಯ ಕ್ಷೇತ್ರದ ಸಾಧನೆಗಾಗಿ 2021 ನೇ ಸಾಲಿನ ಪ್ರಶಸ್ತಿಗೆ ಆಯ್ಕೆ ಮಾಡಿದೆ. ನವೆಂಬರ್ ನಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ.

# ಎಸ್‌ಡಿಪಿಐ ಮೈಸೂರು ವಿಭಾಗೀಯ ನಾಯಕರ ಸಭೆ ಜು.9ರಂದು ಮಂಡ್ಯದಲ್ಲಿ


**ಮಂಡ್ಯ:** ಸೋಷಿಯಲ್ ಡೆಮಾಕ್ರೆಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಪಕ್ಷದ ಮೈಸೂರು ವಿಭಾಗೀಯ ನಾಯಕರ ಸಭೆಯನ್ನು ಜು.9ರಂದು ಮಂಡ್ಯ ನಗರದ ಹೊರವಲಯದಲ್ಲಿನ ಎ & ಎ ಕನ್ವೆಂಷನ್ ಹಾಲ್‌ನಲ್ಲಿ ಆಯೋಜಿಸಲಾಗಿದೆ ಎಂದು ಪಕ್ಷದ ರಾಜ್ಯ ಖಜಾಂಚಿ ಅಹ್ಮದ್ ಖಾನ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದ ಆಂತರಿಕ ಸಭೆ ಇದಾಗಿದೆ. ಮೈಸೂರು, ಮಂಡ್ಯ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಹಾಸನ, ಮಡಿಕೇರಿ, ಚಾಮರಾಜನಗರ ಹಾಗೂ ತುಮಕೂರು ಜಿಲ್ಲೆಗಳ ಒಟ್ಟು 1200 ಮಂದಿ ಪಕ್ಷದ ಪದಾಧಿಕಾರಿ ಮಟ್ಟದ ನಾಯಕರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಸಭೆಯಲ್ಲಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಎಂ.ಕೆ.ಫೈಜಿ ಈ ವಿಭಾಗದ ಎಲ್ಲ ನಾಯಕರಿಗೆ ಮುಂಬರುವ ಚುನಾವಣೆಗೆ ಪೂರ್ವ ಸಿದ್ದತೆ, ಸಮಕಾಲಿನ ಬೆಳವಣಿಗೆ, ಶೋಷಿತ, ಅಲ್ಪಸಂಖ್ಯಾತ, ಹಿಂದುಳಿದ ವರ್ಗಗಳ ಸಮಸ್ಯೆಗಳನ್ನು ಅರ್ಥೈಸಿಕೊಂಡು ಅವುಗಳಿಗೆ ಸ್ಪಂಧನೆ ಕುರಿತಂತೆ ಚರ್ಚೆ ಮಾಡಿ ಹಲವು ನಿರ್ಧಾರಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಸಭೆಯಲ್ಲಿ ರಾಜ್ಯಾಧ್ಯಕ್ಷ ಅಕ್ಬರ್ ಮುಜೀಬ್, ಉಪಾಧ್ಯಕ್ಷರಾದ ಸೀತಾರಾಂ ಕೊಪ್ಲಿವಾಲ, ಮಹಮದ್ ಶಫಿ, ರಾಜ್ಯ ಉಸ್ತುವಾರಿ ಮುಜಾಹಿರ್ ಪಾಷಾ, ನಾಯಕರಾದ ಅಂಗಡಿ ಚಂದ್ರು, ಅಕ್ರಮ, ಅಸ್ಗರ್ ಅಹ್ಮದ್ ಸೇರಿದಂತೆ ಹಲವರು ಭಾಗವಹಿಸಿ ಪಕ್ಷದ ಬೆಳವಣಿಗೆಗೆ ಪೂರಕವಾದ ಶಾಂತಿ ಸಂದೇಶ ನೀಡುವರು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಮಹಮ್ಮದ್ ತಾಹೆರ್, ಮುಷ್ತಾಕ್ ಅಹಮದ್, ಅತೀಕ್ ಅಹಮದ್, ಮುಬಾರಕ್ ಹುಸೇನ್, ಅಸ್ಕರ್ ಅಹ್ಮದ್ ಇದ್ದರು.



# ನಿಮ್ಮ ಪತ್ನಿ... ನಿಮ್ಮ ಕೆಲಸದಾಕೆ ಅಲ್ಲ



| ವೀಣಾ ಹೇಮಂತ್‌ಗೌಡ ಪಾಟೀಲ್

ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ಜಸ್ಟಿಸ್ ಸಂದೀಪ್ ಮೆಹತಾ ಅವರು ನಿಮ್ಮ ಪತ್ನಿ ನಿಮ್ಮ ಕೆಲಸದಾಕೆ ಖಂಡಿತವಾಗಿಯೂ ಅಲ್ಲ ಎಂಬ ಹೇಳಿಕೆಯನ್ನು ನೀಡಿದ್ದಾರೆ. 21ನೇ ಶತಮಾನದತ್ತ ಕಾಲಿಡುತ್ತಿರುವ ಭಾರತೀಯ ಕೌಟುಂಬಿಕ ಬದುಕಿನಲ್ಲಿ ಈ ಹೇಳಿಕೆಯು ಅತ್ಯಂತ ಮಹತ್ವದ್ದೆಂದು ದಾಖಲಿಸಬಹುದು.

ಅವರ ಈ ಹೇಳಿಕೆಯು ಮದುವೆ ಎನ್ನುವುದು ಗಂಡ ಮತ್ತು ಹೆಂಡತಿ ಇಬ್ಬರ ಪರಸ್ಪರರ ಸಾಂಗತ್ಯದ ಬದುಕು... ಇದನ್ನು ಪರಸ್ಪರರಿಗೆ ಗೌರವ ನೀಡುವ ಮತ್ತು ಜವಾಬ್ದಾರಿಗಳನ್ನು ಹಂಚಿಕೊಳ್ಳುವ ಮೂಲಕ ದಂಪತಿಗಳು ನಿರ್ವಹಿಸಬೇಕೇ ಹೊರತು 21ನೇ ಶತಮಾನಕ್ಕೆ ಅಥವಾ ಪ್ರಸ್ತುತ ದಿನಮಾನಗಳಿಗೆ ಹೊಂದದ ಲಿಂಗ ಸಂಬಂಧಿ ಜವಾಬ್ದಾರಿಗಳಂತೆ ಅಲ್ಲ ಎಂಬುದನ್ನು ಅವರು ಒತ್ತಿ ಹೇಳಿದ್ದಾರೆ.

ಅವರ ಈ ಹೇಳಿಕೆಯು ಆಧುನಿಕ ಸಮಾಜದಲ್ಲಿ ಬದಲಾಗುತ್ತಿರುವ ಮೌಲ್ಯಗಳು ಹಾಗೂ ಅದು ನಮ್ಮ ಬದುಕಿನ ಮೇಲೆ ಬೀರುತ್ತಿರುವ ಪರಿಣಾಮಗಳ ಕಾರಣ ಗೃಹ ಕೃತ್ಯಗಳು ಕೇವಲ ಹೆಣ್ಣು ಮಕ್ಕಳದು ಎಂಬ ಪುರುಷ ಪಾರಮ್ಯದ ಭಾರತ ದೇಶದ ಲಿಖಿತ ನಿಯಮಗಳ ಕುರಿತು ಪ್ರಶ್ನೆ ಮಾಡುತ್ತಿದೆ.

ಕಾನೂನಾತ್ಮಕ ಚೌಕಟ್ಟುಗಳು ಬದಲಾಗುತ್ತಿರುವ ಅಭಿವೃದ್ಧಿಪರ ಸಾಮಾಜಿಕ ಮೌಲ್ಯಗಳ ಜೊತೆಗೆ ಹೊಂದಿಕೊಂಡು ನಡೆಯುತ್ತಿವೆ ಎಂಬುದನ್ನು ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರ ನುಡಿಗಳು ಪ್ರತಿಪಾದಿಸುತ್ತಿದ್ದು ಪಿತೃ ಸತ್ತಾತ್ಮಕ ಯೋಚನೆಯ ಆಳವಾದ ಬೇರುಗಳನ್ನು ಬುಡ ಸಮೇತ ಕಿತ್ತೆಸೆಯುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ, ಡಿಜಿಟಲ್



ಮಾಧ್ಯಮಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಚರ್ಚೆಯನ್ನು ಹುಟ್ಟು ಹಾಕಿದ್ದು ಸಾಮಾಜಿಕ ಕಾರ್ಯಕರ್ತರು ಈ ವಿಷಯವನ್ನು ಎತ್ತಿ ಹಿಡಿದಿದ್ದಾರೆ.

ಸಮಾಜದಲ್ಲಿ ನಿಜವಾದ ಲಿಂಗ ಸಮಾನತೆಯನ್ನು ತರಬೇಕು ಎಂದರೆ ಗೃಹ ಕೃತ್ಯದಲ್ಲಿ ಇರುವ ಘನತೆಯನ್ನು ಉಳಿದವರೆಗೂ ಗೊತ್ತು ಮಾಡಿಕೊಡಬೇಕು ಹಾಗೂ ಗೃಹ ಕೃತ್ಯ ಎಂಬುದು ಕೇವಲ ಹೆಣ್ಣು ಮಕ್ಕಳ ಕರ್ತವ್ಯವಲ್ಲ ಬದಲಾಗಿ ಭೂಮಿಯ ಮೇಲೆ ಇರುತ್ತಿರುವ ಪ್ರತಿಯೊಬ್ಬ ವ್ಯಕ್ತಿಯ ಮೂಲಭೂತ ಅವಶ್ಯಕತೆ ಇದಾಗಿದೆ ಹಾಗೂ ಇದನ್ನು ಪಾಲಿಸುವುದನ್ನು ನಾವು ಕಲಿಯಲೇಬೇಕು... ಅದೆಷ್ಟೇ ಆರ್ಥಿಕವಾಗಿ ಸಬಲರಾಗಿದ್ದರೂ ಕೂಡ ಕೌಟುಂಬಿಕವಾಗಿ ಗೃಹ ಕೃತ್ಯಗಳನ್ನು ಸಂಭಾಳಿಸಿಕೊಂಡು ನಡೆದರೆ ಮಾತ್ರ ಪುರುಷ ಈ ಜಗತ್ತಿನಲ್ಲಿ ಸ್ವತಂತ್ರವಾಗಿ ಬದುಕಲು ಸಾಧ್ಯ ಎಂಬುದನ್ನು ಅರಿತುಕೊಳ್ಳಬೇಕು.

ಆಹಾರವನ್ನು ಸೇವಿಸುವ, ಬಟ್ಟೆ ಬರೆಗಳನ್ನು ಧರಿಸುವ, ಮನೆಯೆಂಬ ವ್ಯವಸ್ಥೆಯನ್ನು ತಮ್ಮ ಅನುಕೂಲಕ್ಕಾಗಿ ಬಳಸಿಕೊಳ್ಳುವ ಪ್ರತಿಯೊಬ್ಬರು ಕೂಡ ಈ ಮೂಲಭೂತ ಅವಶ್ಯಕತೆಯನ್ನು ಬದುಕಿನ ಭಾಗವಾಗಿ ತಮ್ಮದಾಗಿಸಿಕೊಳ್ಳಲೇಬೇಕು.

ಹೆಣ್ಣು ಮಕ್ಕಳ ಮೇಲೆ ಗೃಹಕೃತ್ಯದ ಭಾರವನ್ನು ಹೊರೆಸಿರುವ ಸಂಪ್ರದಾಯವಾದಿಗಳ ಮೇಲೆ ಸವಾಲೆಸೆಯುವಂತೆ ಸರ್ವೋಚ್ಚ ನ್ಯಾಯಾಲಯವು ಈ ಹೇಳಿಕೆಯನ್ನು ನೀಡಿದ್ದು ಗೃಹ ಕೃತ್ಯವನ್ನು ಎಲ್ಲರಿಗೂ ಸಮಾನವಾಗಿ ಹಂಚಿಕೆ ಮಾಡುವ ಮೂಲಕ ಹೆಣ್ಣು ಮಕ್ಕಳ ಮೇಲಿನ ಅನಗತ್ಯ ಹೊರೆಯನ್ನು ನಿವಾರಿಸಲು ಪ್ರಯತ್ನಿಸಲೇಬೇಕು.

ನೋಡಿದಿರಾ ಸ್ನೇಹಿತರೆ! ಅಜ್ಞರ ನೂರಾರು ಮಾತುಗಳಿಗಿಂತ ಪ್ರಾಜ್ಞರ ಒಂದು ಮಾತು, ಒಂದು ವಾಕ್ಯ ಬೀರುವ ಪರಿಣಾಮ ಬಹಳ ಮೌಲಿಕವಾದದ್ದು ಗುರುತರವಾದದ್ದು. ಇದೀಗ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರ ಒಂದು ಪ್ರಶ್ನೆ ಸಾಮಾಜಿಕ ವಲಯದಲ್ಲಿ ಚಿಂತನೆಯ ಒಂದು ಕಿಡಿಯನ್ನು ಹಬ್ಬಿಸಿದ್ದು ಹೆಣ್ಣು ಮಕ್ಕಳ ಹಿತರಕ್ಷಣೆಯ ಕಾನೂನುಗಳನ್ನು ರಕ್ಷಿಸುವಲ್ಲಿ ಪರಸ್ಪರರ ಸಂಬಂಧವನ್ನು ಉಳಿಸಿಕೊಳ್ಳುವಲ್ಲಿ ಅತ್ಯಂತ ನ್ಯಾಯಯುತವಾದ, ಸೌಹಾರ್ದತೆಯಿಂದ ಕೂಡಿದ ಹಾಗೂ ಸಮತೋಲನದಿಂದ ಕೂಡಿದ ಸಾಂಗತ್ಯದ ವೈವಾಹಿಕ ಬಂಧನಗಳು ಸಮಾಜದಲ್ಲಿ ಹೊಸ ಬದಲಾವಣೆಯನ್ನು ತರಬಲ್ಲವು.

ಹೊಸ ಬಗೆಯ ವಿವಾಹಗಳು ಲಿಂಗ ಸಮಾನತೆಯನ್ನು ಹೊಂದಿದ್ದು ಜವಾಬ್ದಾರಿ ಹಾಗೂ ಹೊಣೆಗಾರಿಕೆಗಳನ್ನು ಹಂಚಲ್ಪಡುವ ನಿಟ್ಟಿನಲ್ಲಿ ಭಾರತ ದೇಶವು ಬದಲಾಗುತ್ತಿರುವುದು ಸ್ವಾಗತಾರ್ಹವಾಗಿದೆ.

ಲಿಂಗ ಸಮಾನತೆಯ ಕೂಗು ಕಳೆದ ಎರಡು ಮೂರು ದಶಕಗಳಿಂದ ಕೇಳಿ ಬರುತ್ತಿದ್ದರು ಕೂಡ ಈ ಕುರಿತು ಅಷ್ಟಾಗಿ ಯಾರೂ ತಲೆಕೆಡಿಸಿಕೊಳ್ಳುತ್ತಿರಲಿಲ್ಲ.... ಪ್ರಸ್ತುತ ದಿನಮಾನಗಳಲ್ಲಿ ಪುರುಷನಷ್ಟೇ ವಿದ್ಯಾರ್ಹತೆಯನ್ನು ಹೊಂದಿರುವ ಮಹಿಳೆ ಆತನಷ್ಟೇ ಸಂಬಳ ಮತ್ತು ಸವಲತ್ತುಗಳನ್ನು ಪಡೆಯುತ್ತಿದ್ದು ತನ್ನನ್ನು ಮದುವೆಯಾಗುವ ವ್ಯಕ್ತಿ ತನ್ನ ಮೇಲೆ ಅಧಿಕಾರ ಚಲಾಯಿಸುವ ಗಂಡನಾಗದೆ, ಬದುಕನ್ನು ಹಂಚಿಕೊಳ್ಳುವ ಸಂಗಾತಿಯಾಗಲಿ ಎಂದು ಆಕೆ ಬಯಸುತ್ತಾಳೆ. ತನ್ನ ಹಕ್ಕುಗಳ ಕುರಿತು ಸಂಪೂರ್ಣ ಅರಿವನ್ನು ಹೊಂದಿರುವ ಆಕೆ ಪುರುಷ ಪ್ರಧಾನ ಸಮಾಜದ ಬಹುತೇಕ ರೀತಿ ನೀತಿಗಳನ್ನು ಈಗಾಗಲೇ ಧಿಕ್ಕರಿಸುತ್ತಿದ್ದು ತನ್ನನ್ನು ಮದುವೆಯಾಗುವ ವ್ಯಕ್ತಿಯೊಂದಿಗೆ ಸಮಾನತೆಯ ಬದುಕನ್ನು ಹಂಚಿಕೊಂಡು ಬಾಳಲು ಇಚ್ಚಿಸುತ್ತಿದ್ದಾಳೆ. ಇದರ ನಿಜವಾದ ತತ್ವವನ್ನು ಅರಿತಿರುವ ಬುದ್ಧಿಜೀವಿಗಳು ಕೂಡ ಇದನ್ನು ಅನುಮೋದಿಸಿದ್ದು ಇದೀಗ ಸುಪ್ರೀಂ ಕೋರ್ಟ್ ಇದಕ್ಕೆ ತನ್ನದೇ ಆದ ರೀತಿಯಲ್ಲಿ ಒಪ್ಪಿಗೆಯ ಮುದ್ರೆಯನ್ನು ಒತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ.

ಏನಂತೀರಾ ಸ್ನೇಹಿತರೇ?



# ಮುಖವಾಡ ತೊಟ್ಟು ಬದುಕುವ ಬದುಕು ಅನಿವಾರ್ಯವೇ?



| ಉಮೇಶ ಸರ್ಪನಕಟ್ಟೆ

ಇಂದಿನ ಸಮಾಜದಲ್ಲಿ ಅನೇಕರು ತಮ್ಮ ನಿಜವಾದ ವ್ಯಕ್ತಿತ್ವವನ್ನು ಮರೆಮಾಚಿಕೊಂಡು, ಇತರರನ್ನು ಮೆಚ್ಚಿಸುವ ಸಲುವಾಗಿ ಒಂದು ರೀತಿಯ ಮುಖವಾಡವನ್ನು ಧರಿಸಿ ಬದುಕಲು ಪ್ರಯತ್ನಿಸುತ್ತಾರೆ. ಕೆಲವೊಮ್ಮೆ ಪರಿಸ್ಥಿತಿಗಳು ನಮ್ಮನ್ನು ಹಾಗೆ ಬದುಕುವಂತೆ ಒತ್ತಾಯಿಸಬಹುದು. ಆದರೆ ಆ ಬದುಕು ಎಷ್ಟು ದಿನ? ಎಷ್ಟು ಹೊತ್ತು ನಮ್ಮ ನಿಜವಾದ ಅಸ್ತಿತ್ವವನ್ನು ಮರೆಮಾಡಲು ಸಾಧ್ಯ?

ನಾವು ಹೇಗೆ ಬದುಕುತ್ತೇವೆಯೋ ಅದುವೇ ನಮ್ಮ ಬದುಕಾಗಿರಬೇಕು. ನಮ್ಮ ಆಲೋಚನೆ, ನಮ್ಮ ನಡತೆ, ನಮ್ಮ ಮಾತು ಮತ್ತು ನಮ್ಮ ವ್ಯಕ್ತಿತ್ವ ಒಂದಕ್ಕೊಂದು ಹೊಂದಿಕೆಯಾಗಿದ್ದಾಗ ಮಾತ್ರ ಬದುಕಿಗೆ ನಿಜವಾದ ಅರ್ಥ ಸಿಗುತ್ತದೆ. ಯಾರನ್ನೋ ಮೆಚ್ಚಿಸುವುದಕ್ಕಾಗಿ ಅಥವಾ ಸಮಾಜದ ಒಪ್ಪಿಗೆಯನ್ನು ಪಡೆಯುವುದಕ್ಕಾಗಿ ನಮ್ಮ ಸ್ವಭಾವವನ್ನು ಬದಲಾಯಿಸಿಕೊಂಡರೆ, ಅದು ನಮ್ಮ ಅಂತರಂಗದ ಸಂತೋಷವನ್ನು ಕಸಿದುಕೊಳ್ಳುತ್ತದೆ.

ಮುಖವಾಡ ತೊಟ್ಟು ಒಂದು ಹಂತದವರೆಗೆ ಮಾತ್ರ ಬದುಕಬಹುದು. ಆದರೆ ಸತ್ಯವನ್ನು ಎಂದಿಗೂ ಹೆಚ್ಚು ಕಾಲ ಮುಚ್ಚಿಡಲು ಸಾಧ್ಯವಿಲ್ಲ. ಕಾಲ ಕಳೆದಂತೆ ನಮ್ಮ ನಿಜವಾದ ಗುಣ, ಸ್ವಭಾವ ಮತ್ತು ಮನಸ್ಸು



ಹೊರಗೆ ಬರುತ್ತದೆ. ಆದ್ದರಿಂದ ನಕಲಿ ವ್ಯಕ್ತಿತ್ವದ ಮೇಲೆ ಕಟ್ಟಿದ ಸಂಬಂಧಗಳೂ, ಗೌರವವೂ ಹೆಚ್ಚು ಕಾಲ ಉಳಿಯುವುದಿಲ್ಲ.

ನಿಯತ್ತಿನ ಬದುಕು ಮಾತ್ರ ಸಮಾಜದಲ್ಲಿ ನಮ್ಮ ವ್ಯಕ್ತಿತ್ವವನ್ನು ಅನಾವರಣಗೊಳಿಸುತ್ತದೆ. ಪ್ರಾಮಾಣಿಕತೆ, ನಿಷ್ಠೆ ಮತ್ತು ಸತ್ಯನಿಷ್ಠೆ ಎನ್ನುವ ಮೌಲ್ಯಗಳು ನಮ್ಮ ಬದುಕಿನ ಅಡಿಪಾಯವಾಗಿದ್ದರೆ, ಜನರ ವಿಶ್ವಾಸವನ್ನು ಗಳಿಸುವುದು ಸುಲಭವಾಗುತ್ತದೆ. ನಿಜವಾದ ವ್ಯಕ್ತಿತ್ವಕ್ಕೆ ಯಾವುದೇ ಅಲಂಕಾರ ಬೇಕಾಗುವುದಿಲ್ಲ; ಅದು ತನ್ನದೇ ಆದ ಬೆಳಕಿನಿಂದ ಹೊಳೆಯುತ್ತದೆ.

ಇನ್ನೊಬ್ಬರ ಕುರಿತಾದ ನಮ್ಮ ಕುಹಕ ಮಾತುಗಳು, ಟೀಕೆಗಳು ಮತ್ತು ಹೀಯಾಳಿಸುವ ಮನೋಭಾವ ನಮ್ಮನ್ನು ಅಧಃಪತನದ ಕಡೆಗೆ ಕೊಂಡೊಯ್ಯುತ್ತವೆ. ಇತರರನ್ನು ಕುಗ್ಗಿಸಿ ನಾವು ದೊಡ್ಡವರಾಗಲು ಸಾಧ್ಯವಿಲ್ಲ. ಬದಲಾಗಿ, ಇತರರ ಒಳಿತನ್ನು ಬಯಸುವ ಮನಸ್ಸು, ಅವರ ಯಶಸ್ಸನ್ನು ಗೌರವಿಸುವ ಗುಣ ಮತ್ತು ಸಹಾನುಭೂತಿಯ ದೃಷ್ಟಿಕೋನ ನಮ್ಮ ವ್ಯಕ್ತಿತ್ವವನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತದೆ.

ಬದುಕು ಎಂದರೆ ಸ್ಪರ್ಧೆ ಮಾತ್ರವಲ್ಲ; ಅದು ನಮ್ಮನ್ನು ನಾವು ಅರಿತುಕೊಳ್ಳುವ ಒಂದು ಸುಂದರ ಪಯಣ. ಈ ಪಯಣದಲ್ಲಿ ನಕಲಿ ಮುಖವಾಡಗಳ ಅಗತ್ಯವಿಲ್ಲ. ನಮ್ಮ ಮಿತಿಗಳನ್ನು ಒಪ್ಪಿಕೊಂಡು, ನಮ್ಮ ಸಾಮರ್ಥ್ಯವನ್ನು ಬೆಳೆಸಿಕೊಂಡು, ನಿಜವಾದ ಮನಸ್ಸಿನಿಂದ ಬದುಕಿದಾಗ ಮಾತ್ರ ಆತ್ಮತೃಪ್ತಿ ಸಿಗುತ್ತದೆ.

ಆದ್ದರಿಂದ, ನಾವು ನಾವಾಗಿಯೇ ಬದುಕೋಣ. ಇತರರ ಮೆಚ್ಚುಗೆಗಾಗಿ ಅಲ್ಲ, ನಮ್ಮ ಆತ್ಮಸಾಕ್ಷಿಯ ಸಂತೋಷಕ್ಕಾಗಿ ಬದುಕೋಣ. ಮುಖವಾಡದ ಬದುಕಿಗಿಂತ ನೈಜ ಬದುಕು ಕಷ್ಟವಾಗಿರಬಹುದು, ಆದರೆ ಅದೇ ಬದುಕು ಶಾಶ್ವತ ಗೌರವ, ನೆಮ್ಮದಿ ಮತ್ತು ಸಂತೋಷವನ್ನು ನೀಡುತ್ತದೆ.

ನಾವು ನಾವಾಗಿಯೇ ಬದುಕಿದಾಗ ಮಾತ್ರ ಬದುಕು ಅರ್ಥಪೂರ್ಣವಾಗುತ್ತದೆ.

# ತಂತಿಯಲ್ಲಿ ತೂಗಿದ ತ್ಯಾಗ



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ನದಿ ಒಂದು ಕಡೆ,ಜೀವನ ಇನ್ನೊಂದು ಕಡೆ. ಮಧ್ಯೆ ಹರಿಯುವ ನೀರು ಮತ್ತು ಮುಳುಗುವ ಕನಸುಗಳು. ಮಳೆಗಾಲದಲ್ಲಿ ಶಾಲೆ ತಪ್ಪುತ್ತಿದ್ದ ಮಕ್ಕಳು,ಆಸ್ಪತ್ರೆ ತಲುಪಲಾಗದೆ ಒದ್ದಾಡುತ್ತಿದ್ದ ರೋಗಿಗಳು.ಅಂತಹ ಸಾವಿರಾರು ಬದುಕಿಗೆ ಉಸಿರು ತುಂಬಿದ ಹೆಸರೇ ಪದ್ಮಶ್ರೀ ಡಾ.ಗಿರೀಶ್ ಭಾರದ್ವಾಜ್. ಸುಳ್ಯದ ಈ ಸರಳ ಮನುಷ್ಯ ತೂಗುಸೇತುವೆಗಳ ಮೂಲಕ ದೇಶದಲ್ಲೇ ಒಂದು ಕ್ರಾಂತಿಗೆ ನಾಂದಿ ಹಾಡಿದರು.

ಅವರು ಮೆಕ್ಯಾನಿಕಲ್ ಇಂಜಿನಿಯರ್ ಆಗಿದ್ದರು,ಆದರೆ ಹೃದಯದಲ್ಲಿ ಸೇವಕರಿದ್ದರು. 1989ರಲ್ಲಿ ಅರಂಬೂರಿನ ಪಯಸ್ವಿನಿ ನದಿಗೆ ಮೊದಲ ಸೇತುವೆ ಕಟ್ಟಿದರು. ಆಮೇಲೆ ಹಿಂತಿರುಗಿ ನೋಡಲೇ ಇಲ್ಲ. ಕರ್ನಾಟಕ,ಕೇರಳ,ಒಡಿಶಾ, ತೆಲಂಗಾಣದ ನಕ್ಸಲ್ ಪೀಡಿತ ಕುಗ್ರಾಮಗಳಿಗೆ 140ಕ್ಕೂ ಹೆಚ್ಚು ತೂಗುಸೇತುವೆಗಳನ್ನು ಕಟ್ಟಿದರು. ಕೋಟಿ ರೂಪಾಯಿ ಬೇಕಿಲ್ಲ,ದೊಡ್ಡ ಯಂತ್ರ ಬೇಕಿಲ್ಲ. ಕಬ್ಬಿಣದ ತಂತಿ, ಕಾಂಕ್ರೀಟ್,ಜನರ ಶ್ರಮವೇ ಸಾಕು ಎಂಬುದನ್ನು ತೋರಿಸಿದರು. 2017ರಲ್ಲಿ ಭಾರತ ಸರ್ಕಾರ ಅವರ ಈ ನಿಸ್ವಾರ್ಥ ಸೇವೆಗೆ ಪದ್ಮಶ್ರೀ ನೀಡಿ ಗೌರವಿಸಿತು.



ಸ್ಫೂರ್ತಿ ಸುಧೆ - 63

ಅವರ ಸೇತುವೆಗಳು ಕೇವಲ ದಾರಿಯಲ್ಲ. ಅವು ಮಗುವಿನ ಶಾಲೆ, ರೋಗಿಯ ಆಸ್ಪತ್ರೆ,ರೈತನ ಮಾರುಕಟ್ಟೆ.ವರ್ಷಪೂರ್ತಿ ನಿಲ್ಲದ ಸಂಪರ್ಕ.ಅಂಧಕಾರದಲ್ಲಿದ್ದ ಹಳ್ಳಿಗಳಿಗೆ ಬೆಳಕು ತಂದವು.

ಸೇತು ಬಂಧು ಎಂದೇ ಹೆಸರಾದ ಗಿರೀಶ್ ಭಾರದ್ವಾಜ್ ಅವರು 2026ರ ಜುಲೈ 7ರಂದು 76ನೇ ವಯಸ್ಸಿನಲ್ಲಿ ನಿಧನರಾದರು.ಆದರೆ ಅವರು ಕಟ್ಟಿದ ಪ್ರತಿ ಸೇತುವೆಯ ಮೇಲೂ ಇಂದಿಗೂ ಸಾವಿರಾರು ಕಾಲುಗಳು ನಡೆಯುತ್ತಿವೆ. ಒಬ್ಬ ಮನುಷ್ಯನ ಸಂಕಲ್ಪ ಎಷ್ಟು ದೊಡ್ಡ ಬದಲಾವಣೆ ತರುತ್ತದೆ ಎಂಬುದಕ್ಕೆ ಅವರು ಕಟ್ಟಿದ ಸೇತುವೆಗಳೇ ಸಾಕ್ಷಿ.

# ರಾಜಕೀಯ ನಾಯಕರ ಶಾಲೆ ಕಾಲೇಜುಗಳ ಸಂಖ್ಯೆ ಏರಿದಂತೆ, ಸರ್ಕಾರಿ ಶಾಲೆಗಳ ಭವಿಷ್ಯ ಏನು?



| ಶಿವಬಸಪ್ಪ ಗು ಜಂಗಾಲಿ
ಲೇಖಕರು ಹಾಗೂ ಸಾಹಿತಿ

ಒಂದು ದೇಶದ ನಿಜವಾದ ಸಂಪತ್ತು ಅದರ ಭೂಮಿ, ಕಟ್ಟಡಗಳು ಅಥವಾ ಕೈಗಾರಿಕೆಗಳಲ್ಲ; ಆ ದೇಶದ ಮಕ್ಕಳ ಶಿಕ್ಷಣವೇ ಅದರ ಅತ್ಯಮೂಲ್ಯ ಆಸ್ತಿ. ಶಿಕ್ಷಣದ ಗುಣಮಟ್ಟವೇ ಸಮಾಜದ ನಾಳೆಯನ್ನು ರೂಪಿಸುತ್ತದೆ. ಆದ್ದರಿಂದ ಶಾಲೆಗಳು ಕೇವಲ ಪಾಠ ಹೇಳುವ ಸ್ಥಳಗಳಲ್ಲ; ಅವು ಕನಸುಗಳಿಗೆ ರೆಕ್ಕೆ ಕಟ್ಟುವ ದೇವಾಲಯಗಳು. ಆದರೆ ಇಂದು ನಮ್ಮ ಶಿಕ್ಷಣ ವ್ಯವಸ್ಥೆಯತ್ತ ನೋಡಿದಾಗ ಒಂದು ಗಂಭೀರ ಪ್ರಶ್ನೆ ಮೂಡುತ್ತದೆ ರಾಜಕೀಯ ನಾಯಕರ ಶಿಕ್ಷಣ ಸಂಸ್ಥೆಗಳು ವೇಗವಾಗಿ ಬೆಳೆಯುತ್ತಿರುವಾಗ, ಸರಕಾರಿ ಶಾಲೆಗಳ ಭವಿಷ್ಯ ಯಾವ ದಿಕ್ಕಿನಲ್ಲಿ ಸಾಗುತ್ತಿದೆ?

ಕರ್ನಾಟಕ ಸೇರಿದಂತೆ ದೇಶದ ಅನೇಕ ಭಾಗಗಳಲ್ಲಿ ರಾಜಕೀಯ ನಾಯಕರು ನಡೆಸುವ ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳು ದೊಡ್ಡ ಶಿಕ್ಷಣ ಜಾಲವಾಗಿ ಬೆಳೆಯುತ್ತಿವೆ. ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸುವುದು ಕಾನೂನುಬದ್ಧವೂ ಆಗಿದೆ; ಗುಣಮಟ್ಟದ ಶಿಕ್ಷಣ ನೀಡುವುದು ಸ್ವಾಗತಾರ್ಹವೂ ಆಗಿದೆ. ಆದರೆ ಅದೇ ಸಮಯದಲ್ಲಿ ಸಾವಿರಾರು ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕುಸಿಯುತ್ತಿರುವುದು, ಶಿಕ್ಷಕರ ಕೊರತೆ, ಮೂಲಸೌಕರ್ಯಗಳ ಅಭಾವ ಮತ್ತು ಕೆಲವು ಶಾಲೆಗಳು ವಿಲೀನವಾಗುತ್ತಿರುವ ಅಥವಾ ಮುಚ್ಚುವ ಪರಿಸ್ಥಿತಿ ಕಂಡುಬಂದಾಗ ಸಮಾಜದಲ್ಲಿ ಸಹಜವಾಗಿಯೇ ಆತಂಕ ಮೂಡುತ್ತದೆ.

ಒಮ್ಮೆ ಹಳ್ಳಿಯ ಸರಕಾರಿ ಶಾಲೆಯೇ ಇಡೀ ಗ್ರಾಮದ ಹೆಮ್ಮೆ ಆಗಿತ್ತು. ಅದೇ ಶಾಲೆಯ ಮೈದಾನದಲ್ಲಿ ಆಟವಾಡಿದ ಮಕ್ಕಳು ವೈದ್ಯರು, ಇಂಜಿನಿಯರ್‌ಗಳು, ಶಿಕ್ಷಕರು, ನ್ಯಾಯಾಧೀಶರು, ವಿಜ್ಞಾನಿಗಳು ಮತ್ತು ಆಡಳಿತಾಧಿಕಾರಿಗಳಾಗಿ ದೇಶದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದರು. ಅಂದಿನ ಶಾಲೆಯಲ್ಲಿ ಐಶಾರಾಮಿ ಕಟ್ಟಡಗಳಿರಲಿಲ್ಲ; ಆದರೆ ಸಮರ್ಪಿತ ಶಿಕ್ಷಕರಿದ್ದರು. ಸೌಲಭ್ಯಗಳು ಕಡಿಮೆ ಇದ್ದರೂ ಶಿಕ್ಷಣದ ಮೌಲ್ಯ ಅಪಾರವಾಗಿತ್ತು.




ಇಂದು ಪರಿಸ್ಥಿತಿ ಬದಲಾಗಿದೆ. ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಭವಿಷ್ಯವನ್ನು ಬಯಸುವುದು ಸಹಜ. ಇಂಗ್ಲಿಷ್ ಮಾಧ್ಯಮ, ಡಿಜಿಟಲ್ ತರಗತಿಗಳು, ಆಧುನಿಕ ಸೌಲಭ್ಯಗಳು ಮತ್ತು ಸ್ಪರ್ಧಾತ್ಮಕ ವಾತಾವರಣದ ಕಾರಣ ಅನೇಕ ಕುಟುಂಬಗಳು ಖಾಸಗಿ ಶಾಲೆಗಳತ್ತ ಮುಖ ಮಾಡುತ್ತಿವೆ. ಇದು ಅವರ ಆಯ್ಕೆ. ಆದರೆ ಆ ಆಯ್ಕೆಯ ಹಿಂದೆ ಸರಕಾರಿ ಶಾಲೆಗಳ ಮೇಲಿನ ವಿಶ್ವಾಸ ಏಕೆ ಕುಗ್ಗಿತು ಎಂಬ ಪ್ರಶ್ನೆಗೆ ಉತ್ತರ ಹುಡುಕುವುದು ಸರ್ಕಾರ, ಸಮಾಜ ಮತ್ತು ಶಿಕ್ಷಣ ವ್ಯವಸ್ಥೆಯ ಎಲ್ಲರ ಜವಾಬ್ದಾರಿಯಾಗಿದೆ.

ರಾಜಕೀಯ ನಾಯಕರೇ ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿರುವಾಗ ಮತ್ತೊಂದು ನೈತಿಕ ಪ್ರಶ್ನೆಯೂ ಎದುರಾಗುತ್ತದೆ. ಸಾರ್ವಜನಿಕ ಶಿಕ್ಷಣವನ್ನು ಬಲಪಡಿಸುವ ಜವಾಬ್ದಾರಿ ಹೊಂದಿರುವವರು, ಅದೇ ಸಮಯದಲ್ಲಿ ಖಾಸಗಿ ಶಿಕ್ಷಣ ಕ್ಷೇತ್ರದಲ್ಲಿಯೂ ಪ್ರಮುಖ ಪಾತ್ರ ವಹಿಸಿದರೆ ಹಿತಾಸಕ್ತಿ ಸಂಘರ್ಷದ ಬಗ್ಗೆ ಸಾರ್ವಜನಿಕರಲ್ಲಿ ಪ್ರಶ್ನೆಗಳು ಮೂಡುವುದು ಸಹಜ. ಈ ಪ್ರಶ್ನೆ ವ್ಯಕ್ತಿಗಳ ವಿರುದ್ಧವಲ್ಲ; ಶಿಕ್ಷಣ ವ್ಯವಸ್ಥೆಯ ಸಮತೋಲನದ ಕುರಿತು.

ಸರಕಾರಿ ಶಾಲೆ ಎಂದರೆ ಅದು ಬಡವರ ಶಾಲೆ ಎಂಬ ಕಲ್ಪನೆ ಸಮಾಜದಲ್ಲಿ ಬೇರು ಬಿಟ್ಟಿರುವುದು ಅತ್ಯಂತ ದುಃಖದ ಸಂಗತಿ. ಶಿಕ್ಷಣದ ಗುಣಮಟ್ಟವನ್ನು ಶಾಲೆಯ ಹೆಸರಿನಿಂದ ಅಲ್ಲ, ಅಲ್ಲಿನ ಕಲಿಕೆ, ಶಿಕ್ಷಕರ ಬದ್ಧತೆ ಮತ್ತು ಮಕ್ಕಳ ಬೆಳವಣಿಗೆಯಿಂದ ಅಳೆಯಬೇಕು. ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಮಗುವಿನ ಕನಸು ಕೂಡ ಖಾಸಗಿ ಶಾಲೆಯ ಮಗುವಿನ ಕನಸಿನಷ್ಟೇ ದೊಡ್ಡದು.

ಒಂದು ಸರಕಾರಿ ಶಾಲೆ ಮುಚ್ಚಿದರೆ ಕೇವಲ ಕಟ್ಟಡದ ಬಾಗಿಲು ಮುಚ್ಚುವುದಿಲ್ಲ. ಆ ಗ್ರಾಮದ ಮಕ್ಕಳಿಗೆ ಹತ್ತಿರದಲ್ಲಿದ್ದ ಶಿಕ್ಷಣದ ಅವಕಾಶ ದೂರವಾಗುತ್ತದೆ. ಸಣ್ಣ ಮಕ್ಕಳು ದೂರದ ಶಾಲೆಗೆ ಹೋಗಬೇಕಾಗುತ್ತದೆ. ಕೆಲವು ಕುಟುಂಬಗಳಿಗೆ ಅದು ಸಾಧ್ಯವಾಗದೇ ಮಕ್ಕಳ ವಿದ್ಯಾಭ್ಯಾಸವೇ ಮಧ್ಯದಲ್ಲಿ ನಿಲ್ಲುವ ಅಪಾಯವೂ ಎದುರಾಗಬಹುದು. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಹೆಣ್ಣು ಮಕ್ಕಳ ಶಿಕ್ಷಣದ ಮೇಲೆ ಇದರಿಂದ ಹೆಚ್ಚು ಪರಿಣಾಮ ಬೀಳುವ ಸಾಧ್ಯತೆ ಇದೆ.

ಶಿಕ್ಷಣವನ್ನು ಲಾಭ-ನಷ್ಟದ ಲೆಕ್ಕದಲ್ಲಿ ಮಾತ್ರ ನೋಡಬಾರದು. ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಎಂಬ ಕಾರಣಕ್ಕೆ ಅದನ್ನು ಮುಚ್ಚುವುದು ಆಡಳಿತಾತ್ಮಕವಾಗಿ ಸುಲಭವಾದ ನಿರ್ಧಾರವಾಗಿರಬಹುದು; ಆದರೆ ಅದರ ಸಾಮಾಜಿಕ ಪರಿಣಾಮಗಳು ಹಲವು ವರ್ಷಗಳವರೆಗೆ ಗೋಚರಿಸಬಹುದು. ಶಿಕ್ಷಣವು ಹೂಡಿಕೆ, ವೆಚ್ಚವಲ್ಲ.

ಸರಕಾರಿ ಶಾಲೆಗಳನ್ನು ಪುನರುಜ್ಜೀವನಗೊಳಿಸಲು ಹಲವು ಕ್ರಮಗಳು ಅಗತ್ಯ. ಉತ್ತಮ ಮೂಲಸೌಕರ್ಯ, ಖಾಲಿ ಇರುವ ಶಿಕ್ಷಕರ ಹುದ್ದೆಗಳ ಭರ್ತಿ, ವಿಜ್ಞಾನ ಪ್ರಯೋಗಾಲಯಗಳು, ಗ್ರಂಥಾಲಯಗಳು, ಕ್ರೀಡಾ ಸೌಲಭ್ಯಗಳು, ತಂತ್ರಜ್ಞಾನ ಆಧಾರಿತ ಕಲಿಕೆ ಮತ್ತು ಪೋಷಕರ ವಿಶ್ವಾಸವನ್ನು ಹೆಚ್ಚಿಸುವ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು. ಸರ್ಕಾರಿ ಶಾಲೆಯೂ ಅತ್ಯುತ್ತಮ ಶಿಕ್ಷಣ ನೀಡಬಲ್ಲದು ಎಂಬ ನಂಬಿಕೆಯನ್ನು ಮತ್ತೆ ಕಟ್ಟಬೇಕು.

ಸಮಾಜವು ತನ್ನ ಪಾತ್ರವನ್ನು ಮರೆಯಬಾರದು. ಗ್ರಾಮಸ್ಥರು, ಹಳೆಯ ವಿದ್ಯಾರ್ಥಿಗಳು, ಉದ್ಯಮಿಗಳು ಮತ್ತು ಸ್ವಯಂಸೇವಾ ಸಂಸ್ಥೆಗಳು ತಮ್ಮ ಊರಿನ ಶಾಲೆಗಳ ಅಭಿವೃದ್ಧಿಗೆ ಕೈಜೋಡಿಸಿದರೆ ಅನೇಕ ಬದಲಾವಣೆಗಳು ಸಾಧ್ಯ. ಒಂದು ಶಾಲೆಯನ್ನು ಉಳಿಸುವುದು ಎಂದರೆ ಒಂದು ಪೀಳಿಗೆಯ ಭವಿಷ್ಯವನ್ನು ಉಳಿಸುವಂತೆಯೇ.

ಈ ಚರ್ಚೆ ಖಾಸಗಿ ಶಿಕ್ಷಣದ ವಿರುದ್ಧವೂ ಅಲ್ಲ, ರಾಜಕೀಯ ನಾಯಕರ ವಿರುದ್ಧವೂ ಅಲ್ಲ. ಖಾಸಗಿ ಶಿಕ್ಷಣ ಸಂಸ್ಥೆಗಳು ದೇಶದ ಶಿಕ್ಷಣ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡುತ್ತಿವೆ ಎಂಬುದನ್ನು ಒಪ್ಪಲೇಬೇಕು. ಆದರೆ ಅದೇ ಸಮಯದಲ್ಲಿ ಸರಕಾರಿ ಶಿಕ್ಷಣವು ಸಮಾನವಾಗಿ ಬಲಿಷ್ಠವಾಗಿರಬೇಕು. ಏಕೆಂದರೆ ಪ್ರತಿಯೊಬ್ಬ ಕುಟುಂಬಕ್ಕೂ ದುಬಾರಿ ಶಿಕ್ಷಣವನ್ನು ಭರಿಸುವ ಸಾಮರ್ಥ್ಯ ಇರುವುದಿಲ್ಲ.

ಒಂದು ಅಭಿವೃದ್ಧಿಶೀಲ ರಾಷ್ಟ್ರದ ಗುರುತು ಅದರ ಐಷಾರಾಮಿ ಶಾಲೆಗಳ ಸಂಖ್ಯೆ ಅಲ್ಲ; ಪ್ರತಿಯೊಂದು ಮಗುವಿಗೂ ಸಮಾನ ಅವಕಾಶ ನೀಡುವ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯ ಬಲ. ಯಾವುದೇ ಮಗು ತನ್ನ ಆರ್ಥಿಕ ಪರಿಸ್ಥಿತಿಯ ಕಾರಣದಿಂದ ಗುಣಮಟ್ಟದ ಶಿಕ್ಷಣದಿಂದ ವಂಚಿತವಾಗಬಾರದು.

ನಾವು ಇಂದು ಕೇಳಬೇಕಾದ ಪ್ರಶ್ನೆ ಒಂದೇ ಸರಕಾರಿ ಶಾಲೆಗಳನ್ನು ಉಳಿಸುವುದು ಯಾರ ಜವಾಬ್ದಾರಿ? ಉತ್ತರವೂ ಒಂದೇ ಸರ್ಕಾರ, ಸಮಾಜ, ಶಿಕ್ಷಕರು, ಪೋಷಕರು ಮತ್ತು ಜನಪ್ರತಿನಿಧಿಗಳು ಎಲ್ಲರೂ ಸೇರಿ ಹೊರುವ ಜವಾಬ್ದಾರಿ.

ಶಿಕ್ಷಣ ರಾಜಕೀಯದ ವಿಷಯವಾಗಬಾರದು; ರಾಷ್ಟ್ರ ನಿರ್ಮಾಣದ ವಿಷಯವಾಗಬೇಕು. ಶಾಲೆಗಳು ಸ್ಪರ್ಧೆಯ ಕೇಂದ್ರಗಳಾಗದೆ, ಸಮಾನ ಅವಕಾಶಗಳ ಸೇತುವೆಗಳಾಗಬೇಕು. ರಾಜಕೀಯ ನಾಯಕರು ತಮ್ಮ ಶಿಕ್ಷಣ ಸಂಸ್ಥೆಗಳ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸುವುದರ ಜೊತೆಗೆ, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸುವಲ್ಲಿ ಮಾದರಿಯಾಗಬೇಕು. ಆಗ ಮಾತ್ರ ಖಾಸಗಿ ಮತ್ತು ಸರಕಾರಿ ಶಿಕ್ಷಣದ ನಡುವೆ ಆರೋಗ್ಯಕರ ಸಮತೋಲನ ನಿರ್ಮಾಣವಾಗುತ್ತದೆ.

ಒಂದು ಗ್ರಾಮದ ಸರಕಾರಿ ಶಾಲೆಯ ಗಂಟೆ ಮೊಳಗಿದಾಗ ಅದು ಕೇವಲ ತರಗತಿ ಆರಂಭವಾದ ಸಂಕೇತವಲ್ಲ; ಆ ಗ್ರಾಮದ ಭವಿಷ್ಯ ಎಚ್ಚರಗೊಂಡಿದೆ ಎಂಬ ಸಂದೇಶ. ಆ ಗಂಟೆಯ ಧ್ವನಿ ಎಂದಿಗೂ ನಿಲ್ಲದಿರಲಿ. ಏಕೆಂದರೆ ಶಾಲೆ ಉಳಿದರೆ ಮಕ್ಕಳು ಉಳಿಯುತ್ತಾರೆ; ಮಕ್ಕಳು ಉಳಿದರೆ ಕನಸುಗಳು ಉಳಿಯುತ್ತವೆ; ಕನಸುಗಳು ಉಳಿದರೆ ದೇಶದ ಭವಿಷ್ಯ ಬೆಳಗುತ್ತದೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,